ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 120 ಸಂಚಿಕೆ- 120 | PAGE-8 ಪುಟ-8 | ಗುರುವಾರ 19.06.2025 | RS.2/- ಬೆಲೆ 2/-

# ೩ ಸಾವಿರಕ್ಕೆ ವಾರ್ಷಿಕ ಟೋಲ್ ಪಾಸ್

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.18: ಟೋಲ್ ಕಿರಿ ಕಿರಿಗೆ ಬ್ರೇಕ್ ಹಾಕಲು ಫಾಸ್ಟ್‌ಟ್ಯಾಗ್ ಆಧಾರಿತ ಪಾಸ್ ಅನ್ನು ಜಾರಿ ಮಾಡಲು ಕೇಂದ್ರ ಸರ್ಕಾರ ಮುಂದಾಗಿದೆ.3 ಸಾವಿರ ರೂಪಾಯಿಗೆ ವಾರ್ಷಿಕ ಟೋಲ್ ಪಾಸ್ ನೀಡಲು ಸರ್ಕಾರ ಮುಂದಾಗಿದ್ದು, ಆಗಸ್ಟ್ 15 ರಿಂದ ಜಾರಿಗೆ ಬರಲಿದೆ ಎಂದು ಕೇಂದ್ರ ಹೆದ್ದಾರಿ ಖಾತೆಯ ಸಚಿವ ನಿತಿನ್ ಗಡ್ಕರಿ ಘೋಷಿಸಿದ್ದಾರೆ.ನಿತಿನ್ ಗಡ್ಕರಿ ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಈ ಫಾಸ್ಟ್ ಟ್ಯಾಗ್ ಆಧರಿತ ವಾರ್ಷಿಕ ಪಾಸ್ ಬಗ್ಗೆ ವಿವರವನ್ನು ಹಂಚಿಕೊಂಡಿದ್ದಾರೆ. ನಾವು 3 ಸಾವಿರ ರೂ.ಗೆ ಫಾಸ್ಟ್‌ಟ್ಯಾಗ್ ಆಧಾರಿತ ವಾರ್ಷಿಕ ಪಾಸ್ ಅನ್ನು ಪರಿಚಯಿಸುತ್ತಿದ್ದು ಆಗಸ್ಟ್ 15, 2025 ರಿಂದ ಜಾರಿಗೆ ಬರುತ್ತದೆ. ಸಕ್ರಿಯಗೊಳಿಸಿದ ದಿನಾಂಕದಿಂದ ಒಂದು ವರ್ಷ ಅಥವಾ 200 ಟ್ರಿಪ್‌ಗಳವರೆಗೆ ಮಾನ್ಯವಾಗಿರುತ್ತದೆ. ಈ ಪಾಸ್ ಅನ್ನು ಕಾರುಗಳು, ಜೀಪ್‌ಗಳು ಮತ್ತು ವ್ಯಾನ್‌ಗಳಂತಹ ವಾಣಿಜ್ಯೇತರ ಖಾಸಗಿ ವಾಹನಗಳಿಗೆ ಪ್ರತ್ಯೇಕವಾಗಿ ವಿನ್ಯಾಸಗೊಳಿಸಲಾಗಿದೆ. ನವೀಕರಣಕ್ಕಾಗಿ ಮೀಸಲಾದ ಲಿಂಕ್ ಅನ್ನು ಶೀಘ್ರದಲ್ಲೇ ರಾಜ್‌ಮಾರ್ಗ



ಯಾತ್ರಾ ಅಪ್ಲಿಕೇಶನ್‌ನಲ್ಲಿ ಹಾಗೂ NHAI ಮತ್ತು MoRTH ನ ಅಧಿಕೃತ ವೆಬ್‌ಸೈಟ್‌ಗಳಲ್ಲಿ ಲಭ್ಯವಾಗುವಂತೆ ಮಾಡಲಾಗುತ್ತದೆ.ಈ ಪಾಸ್‌ನಿಂದ 60 ಕಿ.ಮೀ ವ್ಯಾಪ್ತಿಯೊಳಗೆ ಇರುವ ಟೋಲ್ ಪ್ಲಾಜಾಗಳಿಗೆ ಸಂಬಂಧಿಸಿದ ದೀರ್ಘಕಾಲದ ಸಮಸ್ಯೆಗಳು ಪರಿಹಾರವಾಗಲಿದೆ. ಟೋಲ್‌ಗಳಲ್ಲಿ ಕಾಯುವ ಸಮಯ ಮತ್ತು ದಟ್ಟಣೆ ಕಡಿಮೆ ಯಾಗಲಿದೆ. ಟೋಲ್ ಪ್ಲಾಜಾಗಳಲ್ಲಿ ವಿವಾದಗಳು ಕಡಿಮೆಯಾಗಲಿದ್ದು ಲಕ್ಷಾಂತರ ಖಾಸಗಿ ವಾಹನ ಮಾಲೀಕರಿಗೆ ಸುಗಮ ಪ್ರಯಾಣದ ಅನುಭವವನ್ನು ವಾರ್ಷಿಕ ಪಾಸ್ ನೀಡಲಿದೆ.

## ವಿದ್ಯುತ್ ಪ್ರಸರಣ ಇಲಾಖೆಯಲ್ಲಿ ಖಾಲಿ ಇರುವ ೩೫೦೦೦ ಸಾವಿರ ಹುದ್ದೆ ಹಂತ ಹಂತವಾಗಿ ಭರ್ತಿ :ಮುಖ್ಯಮಂತ್ರಿ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಜೂ.18:ವಿದ್ಯುತ್ ಪ್ರಸರಣ ಇಲಾಖೆಯಲ್ಲಿ ಖಾಲಿ ಇರುವ 35000 ಸಾವಿರ ನಿಮ್ಮ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು. ಇಲಾಖೆಯ 532 ಮಂದಿ ಪೌರ ಕಾರ್ಮಿಕರ ಹುದ್ದೆ ಕಾಯಂ ಮಾಡುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದರು.

ಇಂದು ಬೆಂಗಳೂರಿನ ಅರಮನೆ ಮೈದಾನದ ತ್ರಿಪುರ ವಾಸಿನಿಯಲ್ಲಿ ಹಮ್ಮಿಕೊಳ್ಳಲಾಗಿದ್ದ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ನೌಕರರ ಸಂಘದ ವಜ್ರ ಮಹೋತ್ಸವವನ್ನು ಉದ್ಘಾಟಿಸಿ, ವಜ್ರಜ್ಯೋತಿ ಸ್ಮರಣ ಸಂಚಿಕೆ ಲೋಕಾರ್ಪಣೆ ಮಾಡಿ ಮಾತನಾಡಿದ ಮುಖ್ಯಮಂತ್ರಿಗಳು, ನಮ್ಮದು ನುಡಿದಂತೆ ನಡೆಯುವ ಸರ್ಕಾರ. ನಿಮ್ಮ ಬೇಡಿಕೆಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ತೆಗೆದುಕೊಳ್ಳುತ್ತೇವೆ. ಎನ್.ಪಿ.ಎಸ್. ಜಾರಿ ಮಾಡಿದ್ದು ಕೇಂದ್ರ ಸರ್ಕಾರ. ನಾವು ಓಪಿಎಸ್ ಜಾರಿ ಸಂಬಂಧಿಸಿದಂತೆ ನಮ್ಮ ಪ್ರಣಾಳಿಕೆಯಲ್ಲೇ ಘೋಷಿಸಿದ್ದೇವೆ. ಈ ಬಗ್ಗೆ ಚರ್ಚಿಸಿ ಅಗತ್ಯ ಕ್ರಮ

(2ನೇ ಪುಟ ನೋಡಿ)

## ಕದನ ವಿರಾಮ ನಿಮ್ಮ ಮಧ್ಯಸ್ಥಿಕೆಯಿಂದಾಗಿಲ್ಲ:ಟ್ರಂಪ್‌ಗೆ ಮೋದಿ ಸ್ಪಷ್ಟನೆ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.18: ಭಾರತ ಮತ್ತು ಪಾಕಿಸ್ತಾನದ ನಡುವೆ ನಾನೇ ಕದನ ವಿರಾಮ ಒಪ್ಪಂದ ಮಾಡಿಸಿದ್ದು ಎಂದು ವಿಶ್ವದ ಮುಂದೆ ಬಡಾಯಿ ಕೊಚ್ಚುತ್ತಿದ್ದ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಪ್ ಅವರಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ವಾಸ್ತವತೆಯ ಪರಿಚಯ ಮಾಡಿಸಿದ್ದಾರೆ.ಮಂಗಳವಾರ ತಡರಾತ್ರಿ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನಡುವೆ 35 ನಿಮಿಷಗಳ ದೂರವಾಣಿ ಸಂಭಾಷಣೆಯ ಸಮಯದಲ್ಲಿ ಕಾಶ್ಮೀರ ವಿಚಾರ ಪ್ರಸ್ತಾಪವಾಯಿತು



ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಅವರು ಮಾಹಿತಿ ನೀಡಿದ್ದಾರೆ.ಮಾತುಕತೆ ವೇಳೆ ಪ್ರಧಾನಿ ಮೋದಿಯವರು ಭಾರತದ ಭಯೋತ್ಪಾದನಾ ವಿರೋಧಿ ಕ್ರಮಗಳ ಬಗ್ಗೆ, ವಿಶೇಷವಾಗಿ ಆಪರೇಷನ್ ಸಿಂಧೂರ್ ಬಗ್ಗೆ ಟ್ರಂಪ್ ಬಳಿ ವಿವರವಾಗಿ ಚರ್ಚಿಸಿದರು ಎಂದು ಹೇಳಿದ್ದಾರೆ.ಇದೇ ವೇಳೆ ಸೇನಾ ಕಾರ್ಯಾಚರಣೆಯನ್ನು ನಿಲ್ಲಿಸುವ ವಿಷಯವನ್ನೂ ಮೋದಿಯವರು ಪ್ರಸ್ತಾಪಿಸಿದ್ದು, ಭಾರತ ಮತ್ತು ಪಾಕಿಸ್ತಾನದ ನಡುವಿನ ಕದನ ವಿರಾಮ ವಿಚಾರದಲ್ಲಿ ಅಮೆರಿಕದ ಯಾವುದೇ ಮಧ್ಯಸ್ಥಿಕೆ ಇಲ್ಲ ಎಂದು

(2ನೇ ಪುಟ ನೋಡಿ)

## ನಿಯಂತ್ರಣ ತಪ್ಪಿ ಬಸ್ ಪಲ್ಟಿ: ೮ ಜನರಿಗೆ ಗಾಯ



ಮಲ್ಲಮ್ಮ ನುಡಿ ವಾರ್ತೆ ಕಮಲನಗರ: ಜೂ.18:ಉದಗೀರ ನಿಂದ ಔರಾದ ಕಡೆ ಹೋಗುವ ಔರಾದ್ ಸಾರಿಗೆ ಘಟಕಕ್ಕೆ ಸೇರಿದ ಬಸ್ ಸಂಖ್ಯೆ 238 2 0976 ತಾಲೂಕಿನ ಕೋಟಾಗ್ಯಾಳ ಹತ್ತಿರ ಗ್ರಾಮದ ಸ್ಟೇರಿಂಗ್ ಜ್ಯಾಮ್ ಆಗಿ ತಗ್ಗಿನಲ್ಲಿ ಉರುಳಿ ಬಿದ್ದಿದೆ. ಬಸ್‌ನಲ್ಲಿ 55 ಜನ ಪ್ರಯಾಣಿಸುತ್ತಿದ್ದು, ಆ ಪೈಕಿ 8 ಜನರಿಗೆ ಗಂಭೀರ ಗಾಯವಾಗಿದೆ. ಕಮಲನಗರ ಸಮುದಾಯ ಆಸ್ಪತ್ರೆಯಲ್ಲಿ ಗಾಯಾಳುಗಳಿಗೆ ಪ್ರಾಥಮಿಕ ಚಿಕಿತ್ಸೆ ನೀಡಲಾಗಿದೆ. ಹೆಚ್ಚಿನ ಚಿಕಿತೆ-ಗಾಗಿ ಬೀದರ್ ಮತ್ತು ಉದಗೀರ್ ಆಸ್ಪತ್ರೆಗೆ ಕಳುಹಿಸಲಾಗಿದೆ. ಸ್ಥಳಕ್ಕೆ ಔರಾದ್ ಬಸ್ ಘಟಕದ ವ್ಯವಸ್ಥಾಪಕ ರಾಜೇಂದ್ರ ಭೇಟಿ ನೀಡಿದರು. ಈ ಕುರಿತು ಕಮಲನಗರ ಠಾಣೆಯಲ್ಲಿ ಕೇಸು ದಾಖಲಿಸಿಕೊಳ್ಳಲಾಗಿದೆ.

## ಕಾಂಗ್ರೆಸ್ ಅತೃಪ್ತರಿಂದ ಕೆಪಿಸಿಸಿ ಅಧ್ಯಕ್ಷರ ಭೇಟಿ

ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 18 : ಜಿಲ್ಲಾ ಕಾಂಗ್ರೆಸ್ ಅಸಮಾಧಾನಿತ ಮುಖಂಡರು ಬೆಂಗಳೂರಿನಲ್ಲಿ ಮಂಗಳವಾರ ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿದರು.

ಕಾಂಗ್ರೆಸ್ ಮುಖಂಡರೂ ಆದ ಮಾಜಿ ಸಚಿವ ರಾಜಶೇಖರ ಪಾಟೀಲ ಹುಮನಾಬಾದ್ ಅವರ ನೇತೃತ್ವದಲ್ಲಿ ಮುಖಂಡರು,ಶಿವಕುಮಾರ್ ಅವರನ್ನು ಭೇಟಿಯಾಗಿ, ಬೀದರ್ ಜಿಲ್ಲಾ ಕಾಂಗ್ರೆಸ್‌ನಲ್ಲಿ ತಲೆದೋರಿರುವ ಸಮಸ್ಯೆ ಸಂಬಂಧ ಚರ್ಚಿಸಲು ಸಭೆ ಕರೆಯಬೇಕೆಂದು ಮನವಿ ಮಾಡಿದರು. ಇದಕ್ಕೆ ಶಿವಕುಮಾರ್ ಸ್ಪಂದಿಸಿದ್ದಾರೆ ಎಂದು ತಿಳಿದು



ಬಂದಿದೆ. 'ಬೀದರ್ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹಾಗೂ ಉಸ್ತುವಾರಿ ಸಚಿವರ ಕಾರ್ಯವೈಖರಿ ಕುರಿತು ಈಗಾಗಲೇ ಎರಡು ಸುತ್ತಿನ ಸಭೆ ಸೇರಿ ಚರ್ಚಿಸಲಾಗಿದೆ. ಜಿಲ್ಲೆಯ ಹಲವು ಮುಖಂಡರು ಅದಕ್ಕೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇದನ್ನು ಸರಿಪಡಿಸಬೇಕು ಎನ್ನುವುದು ಎಲ್ಲರ ಆಗ್ರಹವಾಗಿದೆ. ಈ ಕುರಿತು ಚರ್ಚಿಸಲು ಕೆಪಿಸಿಸಿ ಅಧ್ಯಕ್ಷರಿಗೆ ಸಮಯ ಕೇಳಲಾಗಿದ್ದು, ಇಷ್ಟರಲ್ಲೇ ಸಭೆ ಕರೆದು, ಸಮಸ್ಯೆ ಆಲಿಸಿ ಬಗೆಹರಿಸುವ ಆಶ್ವಾಸನೆ ನೀಡಿದ್ದಾರೆ' ಎಂದು ಹೆಸರು ಬಹಿರಂಗ ಪಡಿಸಲು ಇಚ್ಛಿಸದ ಹಿರಿಯ ಕಾಂಗ್ರೆಸ್ ಮುಖಂಡರೊಬ್ಬರು ತಿಳಿಸಿದ್ದಾರೆ. ಕೆಪಿಸಿಸಿ ಸಹಕಾರ ವಿಭಾಗದ ಅಧ್ಯಕ್ಷ ಧನರಾಜ ತಾಳಂಪಳ್ಳಿ, ಮುಖಂಡರಾದ ಅರವಿಂದಕುಮಾರ ಅರಳಿ, ಪಂಡಿತರಾವ್ ಚಿದ್ರಿ, ದತ್ತಾತ್ರೇಯ ಮೂಲಗೆ, ಅಬ್ದುಲ್ ಮನ್ನಾನ್ ಸೇಠ ಮತ್ತಿತರರು ಇದ್ದರು.

## ಇರಾನ್ ಶರಣಾಗಲ್ಲ: ಖಮೇನಿ

ಮಲ್ಲಮ್ಮ ನುಡಿ ವಾರ್ತೆ ಟೆಹರಾನ್: ಜೂ.18:ಇಸ್ರೇಲ್ ಹಾಗೂ ಇರಾನ್ ನಡುವಣ ಸಂಘರ್ಷ ತೀವ್ರಗೊಳ್ಳುತ್ತಿರುವಂತೆಯೇ ಬೇಷರತ್ತಾಗಿ ಶರಣಾಗುವಂತೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಎಚ್ಚರಿಕೆಗೂ ಡೊಂಟ್ ಕೇರ್ ಎಂದ ಅಯತೊಲ್ಲಾ ಅಲಿ ಖಮೇನಿ ಇರಾನ್ ಶರಣಾಗುವುದಿಲ್ಲ



ಎಂದು ಗುಡುಗಿದ್ದಾರೆ.

ಬುಧವಾರ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಖಮೇನಿ, ಇರಾನ್ ಶರಣಾಗುವ ರಾಷ್ಟ್ರವಲ್ಲ. ಅಲ್ಲದೇ ಯಾವುದೇ ಮಿಲಿಟರಿ ಹಸ್ತಕ್ಷೇಪವು ನಿಸ್ಸಂದೇಹವಾಗಿ ಸರಿಪಡಿಸಲಾಗದ ಹಾನಿಗೆ ಕಾರಣವಾಗುತ್ತದೆ ಎಂಬುದನ್ನು ಅಮೆರಿಕನ್ನರು ತಿಳಿದಿರಬೇಕು ಎಂದರು.

ಇರಾನ್ ರಾಷ್ಟ್ರವನ್ನು ಚೆನ್ನಾಗಿ ಬಲ್ಲವರೂ, ಅದರ ಇತಿಹಾಸದ

(2ನೇ ಪುಟ ನೋಡಿ)

## ರಾಜ್ಯದಲ್ಲಿರುವ ಎಸ್ಕಾಂಗಳ ಖಾಸಗೀಕರಣಕ್ಕೆ ಅವಕಾಶವಿಲ್ಲ: ಡಿ.ಕೆ ಶಿವಕುಮಾರ್




ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.18: ನಾನು, ಸಿಎಂ ಸಿದ್ದರಾಮಯ್ಯ ಅವರು ಅಧಿಕಾರದಲ್ಲಿರುವವರೆಗೂ ರಾಜ್ಯದಲ್ಲಿರುವ ಎಸ್ಕಾಂಗಳನ್ನು ಖಾಸಗೀಕರಣ ಮಾಡಲು ಅವಕಾಶ ನೀಡುವುದಿಲ್ಲ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಭರವಸೆ ನೀಡಿದ್ದಾರೆ.

ಬೆಂಗಳೂರಿನ ಅರಮನೆ ಮೈದಾನದಲ್ಲಿ ಬುಧವಾರ ನಡೆದ ಕರ್ನಾಟಕ ಪ್ರಸರಣ ನಿಗಮ ನೌಕರರ ಸಂಘದ 60ನೇ ವಜ್ರ ಮಹೋತ್ಸವ ಸಂಭ್ರಮ ಹಾಗೂ ವಜ್ರಜ್ಯೋತಿ ಸ್ಮರಣ ಸಂಚಿಕೆ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ನಾನು ಇಂಧನ ಸಚಿವನಾದ ಬಳಿಕ ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಿತ್ತು. ಮುಂಬೈ,ದೆಹಲಿ ಸೇರಿದಂತೆ ದೇಶದ ವಿವಿಧ ನಗರಗಳಲ್ಲಿ ಎಸ್ಕಾಂಗಳನ್ನು ಖಾಸಗಿಯವರಿಗೆ ನೀಡಲಾಗಿದೆ.ಹೀಗಾಗಿ ಬೆಂಗಳೂರಿನಲ್ಲೂ ಖಾಸಗಿಯವರಿಗೆ ನೀಡಬೇಕು ಎಂದು ನನ್ನ ಮೇಲೆ ಒತ್ತಡ ಹೇರಲಾಗಿತ್ತು ಎಂದಿದ್ದಾರೆ.

ಆಗ ನಾನು ನಮ್ಮ ನೌಕರರು, ಇಂಜಿನಿಯರ್‌ಗಳು, ವ್ಯವಸ್ಥಾಪಕ ಮಂಡಳಿಯವರು ಬಹಳ ಶಕ್ತಿಶಾಲಿಯಾಗಿದ್ದು, ಎಸ್ಕಾಂಗಳನ್ನು ಸಮರ್ಥವಾಗಿ ಮುನ್ನಡೆಸಲಿದ್ದಾರೆ ಎಂದು ಹೇಳಿದ್ದೆ. ರಾಜ್ಯದಲ್ಲಿ ಈ ಡಿ.ಕೆ ಶಿವಕುಮಾರ್, ಸಿಎಂ ಸಿದ್ದರಾಮಯ್ಯ ಅವರು ಇರುವವರೆಗೂ ಎಸ್ಕಾಂಗಳನ್ನು ಖಾಸಗೀಕರಣಗೊಳಿಸಲು ಅವಕಾಶ ನೀಡುವುದಿಲ್ಲ ಎಂದು ಹೇಳಿದ್ದಾರೆ.

ನಾನು ಈ ಇಲಾಖೆ ಜವಾಬ್ದಾರಿ ವಹಿಸಿಕೊಂಡಾಗ, 19ರಿಂದ 20% ಟ್ರಾನ್ಸ್ಮಿಷನ್ ನಷ್ಟ ಆಗುತ್ತಿತ್ತು. ನಾವು ಅದನ್ನು 10%ಗೆ ಇಳಿಸಿದ್ದೇವೆ. ಇದು ದೇಶಕ್ಕೆ ಮಾದರಿ. ಬೇರೆ ರಾಜ್ಯಗಳಲ್ಲಿ ಇಂದಿಗೂ 17ರಿಂದ 18% ನಷ್ಟವಾಗುತ್ತಿದೆ. ನಿಮ್ಮೆಲ್ಲರ ಶ್ರಮದಿಂದ ಇಂದು ಈ ಇಂಧನ

(2ನೇ ಪುಟ ನೋಡಿ)

## ಉತ್ತಮ ಅಭಿನಯ ತೋರಲು ಸಲಹೆ ನೀಡಿದ ಗುರುಬಸವ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.18: ಕನ್ನಡದ ಜೀ ವಾಹಿನಿಯ ಮಹಾನಟಿ ಸೀಜನ್ 2ರ ಸ್ಪರ್ಧೆಗೆ ಆಯ್ಕೆಯಾಗಿರುವ ದಿವ್ಯಾಂಜಲಿ ಅವರನ್ನು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಸನ್ಮಾನಿಸಿ, ಆಶೀರ್ವದಿಸಿದರು.

ಬೆಂಗಳೂರಿನಲ್ಲಿ ದಿವ್ಯಾಂಜಲಿ ಅವರನ್ನು ಪೂಜ್ಯರು ಬುಧವಾರ ಭೇಟಿಯಾಗಿ ಗಡಿ ಜಿಲ್ಲೆ ಬೀದರ್‌ನಲ್ಲಿ ಅದ್ಭುತ ಪ್ರತಿಭೆಗಳಿದ್ದಾರೆ ಎನ್ನುವುದಕ್ಕೆ ದಿವ್ಯಾಂಜಲಿ ಸಾಕ್ಷಿಯಾಗಿದ್ದಾರೆ.

ಉತ್ತಮ ಅವಕಾಶ, ಸೂಕ್ತ ವೇದಿಕೆ ಲಭಿಸಿದರೆ ಗಡಿಭಾಗದ ಮಕ್ಕಳಲ್ಲಿ ಹುದಗಿರುವ ಸೂಪ್ತ ಪ್ರತಿಭೆ ಹೊರ ಬರಲಿದೆ ಎಂದರು.

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಬಡವರು, ದೀನ ದುರ್ಬಲ, ನಿರಾಶ್ರಿತರ ಬೆಳೆವಣಿಗೆಗೆ ಬದುಕು ಮೀಸಲಿಟ್ಟಿದ್ದಾರೆ.

ಅನಾಥ ಮಕ್ಕಳ ಸೇವೆಯಲ್ಲಿ ಬಸವಣ್ಣನವರನ್ನು ಕಾಣುತ್ತಿದ್ದಾರೆ. ಹೆತ್ತವರಿಗೆ ಬೇಡವಾದ ಮಕ್ಕಳನ್ನು ಕರೆತಂದು ಅನ್ನ, ಅಕ್ಷರ, ಆಶ್ರಯ ನೀಡಿ



ಮಾನವೀಯತೆ ಮೆರೆಯುತ್ತಿದ್ದಾರೆ.

ಅದರಲ್ಲಿ ದಿವ್ಯಾಂಜಲಿ ಕೂಡ ಒಬ್ಬರಾಗಿದ್ದು, ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಆಶೀರ್ವಾದಿಂದ ಉತ್ತಮ ಶಿಕ್ಷಣ, ಸಂಸ್ಕಾರ ಪಡೆದಿರುವ ದಿವ್ಯಾಂಜಲಿ ಕಲೆಯನ್ನು ಆರಾಧಿಸುತ್ತಿದ್ದಾಳೆ.

ಇದೀಗ ಅವಳಿಗೆ ಮಹಾನಟಿ ಸ್ಪರ್ಧೆಯಲ್ಲಿ ಅವಕಾಶ ಲಭಿಸಿದ್ದು ಅದರ ಸದುಪಯೋಗ ಪಡೆದು ಉತ್ತಮವಾಗಿ ಅಭಿನಯಿಸಿ ಸ್ಪರ್ಧೆಯಲ್ಲಿ ಮುಂದಿನ ಎಲ್ಲ ಸುತ್ತುಗಳಲ್ಲಿ ಗೆಲುವು ಸಾಧಿಸಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಹಿರೇಮಠ ಸಂಸ್ಥಾನ

ವಿದ್ಯಾಪೀಠ ಟ್ರಸ್ಟ್‌ನ ಆಡಳಿತಾಧಿಕಾರಿ ಮೋಹನ ರೆಡ್ಡಿ, ಗಿರೀಶ ಕುಲಕರ್ಣಿ ಹಾಜರಿದ್ದರು.

ಒಂದನೇ ಪುಟದಿಂದ

## ಅವಕಾಶವಿಲ್ಲ: ಡಿ.ಕೆ ಶಿವಕುಮಾರ್

ಇಲಾಖೆ ಶಕ್ತಿಶಾಲಿಯಾಗಿ ಬೆಳೆಯುತ್ತಿದೆ. ಜಾರ್ಜ್ ಅವರು ಈ ಇಲಾಖೆಯ ಜವಾಬ್ದಾರಿ ತೆಗೆದು-ಕೊಂಡು ಪಾರದರ್ಶಕವಾಗಿ ಬಹಳ ಉತ್ತಮ ರೀತಿಯಲ್ಲಿ ಮುನ್ನಡೆಸುತ್ತಿದ್ದಾರೆ. ನಾವು ಈ ಹಿಂದೆ ಅನೇಕ ಕ್ರಾಂತಿಕಾರಕ ತೀರ್ಮಾನ ಮಾಡಿದ್ದೆವು ಎಂದು ವಿವರಿಸಿದ್ದಾರೆ.

ದೀಪ ಜಗತ್ತನ್ನೇ ಬೆಳಗುತ್ತದೆ. ಈ ದೀಪಕ್ಕೆ ಬೆಳಕು ಪೂರೈಸುತ್ತಿರುವವರು ನೀವು. ದೀಪದ ಬೆಳಕು ಎಲ್ಲರಿಗೂ ಕಾಣುತ್ತದೆ. ಆದರೆ ಅದರ ಹಿಂದೆ ಇರುವ ಎಣ್ಣೆ ಹಾಗೂ ಬತ್ತಿ ಯಾರಿಗೂ ಕಾಣುವುದಿಲ್ಲ. ಅದೇ ರೀತಿ ಇಂಧನ ಇಲಾಖೆ ನೌಕರರ ಶ್ರಮದಿಂದ ಇಡೀ ಸಮಾಜಕ್ಕೆ ಬೆಳಕು ನೀಡಲಾಗುತ್ತಿದೆ. ನಾನು ಹಾಗೂ ಸಿಎಂ ಸಿದ್ದರಾಮಯ್ಯ ಅವರು ಬಂದಾಗಿನಿಂದ ನೀವು ನಮ್ಮ ಮೇಲೆ ವಿಶ್ವಾಸ ವ್ಯಕ್ತಪಡಿಸುತ್ತಿದ್ದೀರಿ ಎಂದಿದ್ದಾರೆ.

ಪ್ರೀತಿ ವಿಶ್ವಾಸ ಎಂಬುದು ಮರದಲ್ಲೂ ಸಿಗುವುದಿಲ್ಲ, ಮಾರುಕಟ್ಟೆಯಲ್ಲೂ ಸಿಗುವುದಿಲ್ಲ. ಕೇವಲ ಜನರ ಹೃದಯದಲ್ಲಿ ಮಾತ್ರ ಸಿಗುತ್ತದೆ. ನಾವು ನಿಮಗಾಗಿ ಮಾಡಿದ ಸೇವೆ, ತೀರ್ಮಾನವನ್ನು ನೀವು ಸ್ಮರಿಸಿ, ನಮ್ಮ ಮೇಲೆ ವಿಶ್ವಾಸವಿಟ್ಟಿರುವುದಕ್ಕೆ ಸರ್ಕಾರದ ಪರವಾಗಿ ನಮಿಸುತ್ತೇನೆ. ಸಿದ್ದರಾಮಯ್ಯ ಅವರ ಈ ಹಿಂದಿನ ಸರ್ಕಾರದಲ್ಲಿ ನಾನು ನಾಲ್ಕೂವರೆ ವರ್ಷ ಇಂಧನ ಇಲಾಖೆ ಜವಾಬ್ದಾರಿ ವಹಿಸಿಕೊಂಡಿದ್ದೆ. ನಾನು ಈ ಇಲಾಖೆ ಜವಾಬ್ದಾರಿ ತೆಗೆದುಕೊಂಡಾಗ, ಇದರ ಜವಾಬ್ದಾರಿ ಹೊತ್ತವರೆಲ್ಲರೂ ವಿಫಲರಾಗಿದ್ದಾರೆ. ನೀವು ಯಾಕೆ ಇದರ ಜವಾಬ್ದಾರಿ ವಹಿಸಿಕೊಂಡಿದ್ದೀರಿ ಎಂದು ಕೇಳಿದ್ದರು. ಅದಕ್ಕೆ ನಾನು ಎಲ್ಲಿ ಶ್ರಮವಿದೆಯೋ ಅಲ್ಲಿ ಫಲವಿದೆ ಎಂದು ಹೇಳಿದ್ದೆ. ಕಷ್ಟದ ಜವಾಬ್ದಾರಿ ವಹಿಸಿಕೊಂಡು ಅದನ್ನು ಸರಿಪಡಿಸುವುದೇ ನಾಯಕನ ಗುಣ ಎಂದು ಹೇಳಿದ್ದಾರೆ.

ಪಾರದರ್ಶಕವಾಗಿ 24 ಸಾವಿರ ಸಿಬ್ಬಂದಿ ನೇಮಕ

ನಾನು ಇಂಧನ ಇಲಾಖೆ ಜವಾಬ್ದಾರಿ ವಹಿಸಿಕೊಂಡಾಗ ರಾಜ್ಯದಲ್ಲಿ 11 ಸಾವಿರ ಮೆ.ವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿತ್ತು. ಆದರೆ ಇಲಾಖೆ ಜವಾಬ್ದಾರಿ ಬಿಡುವಾಗ ರಾಜ್ಯದಲ್ಲಿ 23 ಸಾವಿರ ಮೆ.ವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿತ್ತು. ಇಲಾಖೆಯಲ್ಲಿ ಒಂದು ರೂಪಾಯಿ ಲಂಚ ಪಡೆಯದೇ, ಪಾರದರ್ಶಕವಾಗಿ 24 ಸಾವಿರ ನೌಕರರನ್ನು ನೇಮಕಾತಿ ಮಾಡಿದೆ. ಈ ಹಿಂದೆ ಇದ್ದ ವಿದ್ಯುತ್ ಶಕ್ತಿ ಮಂತ್ರಿಗಳು ನೇಮಕಾತಿಗೆ ವಸೂಲಿ ಮಾಡುತ್ತಿದ್ದರು. ನಾನು ಅದನ್ನು ತಪ್ಪಿಸಿ, ನಿಮ್ಮ ಮನೆ ಬಾಗಿಲಿಗೆ ನೌಕರಿಯನ್ನು ಕೊಟ್ಟ ತೃಪ್ತಿ ನನಗಿದೆ ಎಂದಿದ್ದಾರೆ.

ಇಲಾಖೆಯ ನೌಕರರು ಇಂದಿರಾ ಗಾಂಧಿ ಅವರನ್ನು ಸ್ಮರಿಸಬೇಕು. ನಿಮ್ಮ ಇಲಾಖೆಗೆ ಹೊಸ ರೂಪ ಕೊಟ್ಟಾಗ ನೌಕರರ ಸಂಘದ ಪದಾಧಿಕಾರಿಗಳು, ಇಂಜಿನಿಯರ್ ಪದಾಧಿಕಾರಿಗಳು ವ್ಯವಸ್ಥಾಪಕ ಮಂಡಳಿಯಲ್ಲಿ ಇರಬೇಕು ಎಂದು ಆದೇಶ ಕೊಟ್ಟಿದ್ದರು. ಇಂದು ಬಲರಾಮ್, ಶಿವಣ್ಣ ಅವರು ಮಂತ್ರಿಗಳು ಹಾಗೂ ಮುಖ್ಯಮಂತ್ರಿಗಳ ಜತೆ ಕೂತು ನಿಮ್ಮ ಭವಿಷ್ಯದ ಬಗ್ಗೆ ತೀರ್ಮಾನ ಮಾಡುವಲ್ಲಿ ಭಾಗಿಯಾಗಲು ಅವಕಾಶ ಕಲ್ಪಿಸಿದರು. ಇಂತಹ ತೀರ್ಮಾನ ಮಾಡಿದವರನ್ನು ನೀವು ಸ್ಮರಿಸಿಕೊಳ್ಳಬೇಕು. ನಾನು ಸಚಿವನಾಗಿ ಬಂದಾಗ 7 ವರ್ಷಕ್ಕೊಮ್ಮೆ ವೇತನ ಪರಿಷ್ಕರಣೆ ಮಾಡಲಾಗುತ್ತಿತ್ತು. ಅದನ್ನು 5 ವರ್ಷಕ್ಕೆ ಇಳಿಸಿ, ಒಂದೇ ಬಾರಿಗೆ 26%ನಷ್ಟು ವೇತನ ಏರಿಕೆ ಮಾಡಲಾಯಿತು. ಇದನ್ನು ಮಾಡಿದ್ದು ಕಾಂಗ್ರೆಸ್ ಸರ್ಕಾರ ಎಂದು ತಿಳಿಸಿದ್ದಾರೆ.

ರೈತರಿಂದ ಭೂಮಿ ಖರೀದಿಸದೇ ಸೋಲಾರ್ ಪಾರ್ಕ್ ನಿರ್ಮಾಣ

ಪವನ ಶಕ್ತಿ, ಸೌರಶಕ್ತಿ, ಬೆಂಗಳೂರು ನಗರದಲ್ಲಿ ಅನಿಲ ಉತ್ಪಾದನೆ ವಿಚಾರವಾಗಿ ನಾವು ಅನೇಕ ತೀರ್ಮಾನ ಮಾಡಿದ್ದೆವು. ಅದರ ಪರಿಣಾಮವಾಗಿ ನಮ್ಮ ರಾಜ್ಯದಲ್ಲಿ ಬಂಡವಾಳ ಹೂಡಿಕೆ ಮಾಡಲು ಬಂಡವಾಳ ಹೂಡಿಕೆದಾರರು ಆಸಕ್ತಿ ತೋರಿದ್ದರು. ಪಂಪ್ ಸ್ಟೋರೇಜ್ ಪವರ್ ಅನ್ನು ಹೊಸದಾಗಿ ಆರಂಭಿಸುತ್ತಿದ್ದು, ಸವದತ್ತಿ ಹಾಗೂ ವರಾಹಿಯಲ್ಲಿ ನಿರ್ಮಿಸಲು ಮುಂದಾಗಿದ್ದೇವೆ ಎಂದು ವಿವರಿಸಿದ್ದಾರೆ.

ರೈತರಿಗೆ ಹಗಲಿನಲ್ಲಿ ವಿದ್ಯುತ್ ನೀಡಲು ಪ್ರತಿ ತಾಲೂಕಿನಲ್ಲಿ 20ರಿಂದ 50 ಮೆ.ವ್ಯಾಟ್ ವಿದ್ಯುತ್ ಉತ್ಪಾದಿಸಲು ತೀರ್ಮಾನ ಮಾಡಿದ್ದೇವೆ. ಇನ್ನು ಪಾವಗಡ ಸೌರಶಕ್ತಿ ಉತ್ಪಾದನಾ ಕೇಂದ್ರ ಸ್ಥಾಪಿಸುವಾಗ ಅಲ್ಲಿನ ಕೃಷಿ ಭೂಮಿ ಬೆಲೆ ಕೇವಲ 50,000 ರೂ. ಇತ್ತು. ಆದರೂ ರೈತರಿಂದ ಭೂಮಿ ಖರೀದಿ ಮಾಡದೇ ಪ್ರತಿ ವರ್ಷ ಅವರಿಗೆ ಪ್ರತಿ ಎಕ್ರೆ 18,000 ರೂ. ಬಾಡಿಗೆ ನೀಡಿ ಈ ಯೋಜನೆಯನ್ನು ಜಾರಿ ಮಾಡಿದ್ದೇವೆ. ಈಗ ಅವರಿಗೆ ವರ್ಷಕ್ಕೆ 26ರಿಂದ 27,000 ರೂ. ಬಾಡಿಗೆ ಬರುತ್ತಿದೆ. ಈಗಲೂ ಅಲ್ಲಿನ ರೈತರು ಈ ಜಾಗದ ಮಾಲೀಕರೇ ಆಗಿದ್ದಾರೆ ಎಂದು ಹೇಳಿದ್ದಾರೆ.

ನಮ್ಮ ಈ ಯೋಜನೆ ವಿಶ್ವಕ್ಕೆ ಮಾದರಿಯಾಗಿತ್ತು. ಕೇಂದ್ರ ಸರ್ಕಾರವು ಕರ್ನಾಟಕ ಮಾದರಿಯನ್ನು ಅನುಸರಿಸುತ್ತಿದೆ. ಮನುಷ್ಯನ ಹುಟ್ಟು ಆಕಸ್ಮಿತ, ಸಾವು ಅನಿವಾರ್ಯ, ಜನನ ಉಚಿತ, ಮರಣ ಖಚಿತ. ಈ ಹುಟ್ಟು ಸಾವಿನ ನಡುವೆ ನಾವು ಏನು ಮಾಡುತ್ತೇವೆ ಎಂಬುದು ಮುಖ್ಯ. ನಾನು ಈ ಇಲಾಖೆ ಮಂತ್ರಿಯಾಗಿ ಜವಾಬ್ದಾರಿ ವಹಿಸಿದ ನಂತರ ನನ್ನ ಬದುಕಿನಲ್ಲಿ ದೊಡ್ಡ ಸಾಕ್ಷಿಗುಡ್ಡೆಯನ್ನು ಬಿಟ್ಟು ಹೋಗಿದ್ದೇನೆ ಎಂಬ ಆತ್ಮತೃಪ್ತಿಯಿದೆ. ನಿಮ್ಮೆಲ್ಲರ ಪ್ರಯತ್ನ, ಸಹಕಾರ, ಪರಿಶ್ರಮದಿಂದ ಇದು ಸಾಧ್ಯವಾಗಿದೆ ಎಂದಿದ್ದಾರೆ.

ಮನಸ್ಸು ಮಾಡಿದರೆ ಮೇಲಕ್ಕೂ ಏರಿಸಬಹುದು, ಕೆಳಕ್ಕೂ ಬೀಳಿಸಬಹುದು

ನಮ್ಮ ರಾಜ್ಯದಲ್ಲಿ 35 ಲಕ್ಷ ಐಪಿ ಸೆಟ್, 2 ಲಕ್ಷ ಗ್ರಾಹಕರಿದ್ದಾರೆ. ಈ ಎಲ್ಲಾ ಗ್ರಾಹಕರ ಸಂಪರ್ಕ ನಿಮ್ಮ ಜೊತೆಗೆ ಇದೆ. ನೀವು ಮನಸ್ಸು ಮಾಡಿದರೆ, ಡಿ.ಕೆ ಶಿವಕುಮಾರ್ ಅವರನ್ನು ಮೇಲಕ್ಕೆ ಏರಿಸಬಹುದು, ಕೆಳಕ್ಕೆ ಇಳಿಸಲೂಬಹುದು. ಈ ವಿಚಾರದಲ್ಲಿ ನನಗೆ ನಿಮ್ಮ ಮೇಲೆ ವಿಶ್ವಾಸವಿದೆ. ನಿಮಗೂ ಉಪಕಾರ ಸ್ಮರಣೆ ಇರಬೇಕು. ಇಲ್ಲಿ ನೀವು ನನಗೆ ಜೈಕಾರ ಹಾಕಿದರೆ ಸಾಲದು, ಮತ್ತೆ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತಂದು ಕೂರಿಸಬೇಕು. ಆ ಜವಾಬ್ದಾರಿ ನಿಮ್ಮದು ಎಂದು ಹೇಳಿದ್ದಾರೆ.

ಗಡಿಯಲ್ಲಿ ಸೈನಿಕ, ಶಾಲೆಯಲ್ಲಿ ಶಿಕ್ಷಕ, ಕಾರ್ಖಾನೆಯಲ್ಲಿ ಕಾರ್ಮಿಕ, ಹೊಲದಲ್ಲಿ ಕೃಷಿಕ ಇರುತ್ತಾನೆ. ಇವರು ನಮ್ಮ ಕೈಯ ನಾಲ್ಕು ಬೆರಳುಗಳಾದರೆ, ನಮ್ಮ ಇಂಧನ ಇಲಾಖೆ ನೌಕರರು ಹೆಬ್ಬೆಟ್ಟಿನಂತೆ ಐದನೇ ಬೆರಳಾಗಿದ್ದಾರೆ. ನೀವು ಇದನ್ನು ಸರಿಯಾಗಿ ಬಳಸಿಕೊಳ್ಳಬೇಕು. ನಾನು ಕಾಂಗ್ರೆಸ್ ಅಧ್ಯಕ್ಷನಾಗಿ, ಸಿದ್ದರಾಮಯ್ಯ ಅವರು ವಿರೋಧ ಪಕ್ಷದ ನಾಯಕರಾಗಿ ನಿಮಗೆ ಐದು ಗ್ಯಾರಂಟಿ ಯೋಜನೆ ಜಾರಿ ಮಾಡಿದ್ದೆವು. ಅದರಲ್ಲಿ ನಾವು ಮೊದಲು ಘೋಷಣೆ ಮಾಡಿದ್ದು, 200 ಯೂನಿಟ್ ವರೆಗೂ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ ಯೋಜನೆಯನ್ನು. ಆ ಮೂಲಕ ಇಂತಹ ಯೋಜನೆ ಕೊಟ್ಟ ಮೊದಲ ರಾಜ್ಯ ಕರ್ನಾಟಕವಾಯಿತು. ಇಂದು ರಾಜ್ಯದಲ್ಲಿ 1.60 ಕೋಟಿ ಕುಟುಂಬಗಳಿಗೆ ಈ ಯೋಜನೆಯನ್ನು ನೀಡಲಾಗಿದೆ. ಇದೆಲ್ಲವೂ ನಿಮ್ಮ ಸಹಕಾರದಿಂದ ಸಾಧ್ಯವಾಗಿದೆ ಎಂದು ತಿಳಿಸಿದ್ದಾರೆ.

ನಿಮ್ಮ ಬೇಡಿಕೆಗಳು ನಮ್ಮ ಗಮನದಲ್ಲಿವೆ. ಒಪಿಎಸ್ ಕೂಡ ನಮ್ಮ ಪ್ರಣಾಳಿಕೆಯಲ್ಲಿದೆ. ಆ ಬಗ್ಗೆ ಚಿಂತೆ ಮಾಡಬೇಡಿ. ಈ ಹಿಂದೆ ಬಡ್ತಿ ವಿಚಾರ ಬಂದಾಗ ನಾನು ಒಂದೇ ದಿನ ತೀರ್ಮಾನ ಮಾಡಿದ್ದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗೆಲ್ಲಾ ನಿಮ್ಮ ಬದುಕಿಗಾಗಿ ಕೆಲಸ ಮಾಡುತ್ತದೆ. ಐಪಿಎಸ್ ಅಧಿಕಾರಿಗೆ ಎಷ್ಟು ವೇತನ ಬರುತ್ತದೋ, ಅಷ್ಟೇ ವೇತನ ಕೆಪಿಟಿಸಿಎಲ್ ಹಾಗೂ ಎಸ್ಕಾಂ ಮುಖ್ಯ ಇಂಜಿನಿಯರ್‌ಗಳಿಗೂ ಬರುತ್ತದೆ ಎಂಬುದನ್ನು ನೆನಪಿನಲ್ಲಿಟ್ಟುಕೊಳ್ಳಿ. ನಿಮ್ಮ ಪ್ರೀತಿ ವಿಶ್ವಾಸ ನಮ್ಮ ಜತೆಗಿರಲಿ ಎಂದು ಹೇಳಿದ್ದಾರೆ.

## ಶರಣಾಗಲ್ಲ: ಖಮೇನಿ

ಬಗ್ಗೆ ತಿಳಿದಿರುವವರು ಎಂದಿಗೂ ಈ ರಾಷ್ಟ್ರದೊಂದಿಗೆ ಬೆದರಿಕೆಯ ಭಾಷೆಯಲ್ಲಿ ಮಾತನಾಡುವುದಿಲ್ಲ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.ಮಂಗಳವಾರ ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್ ಮಾಡಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅಮೆರಿಕ ಮತ್ತು ಇಸ್ರೇಲ್ ಗೆ ಖಮೀನಿ ಸುಲಭವಾದ ಗುರಿ ಎಂದು ಹೇಳಿದ ನಂತರ, ಇರಾನ್ ಬೇಷರತ್ತಾಗಿ ಶರಣಾಗುವಂತೆ ಸೂಚಿಸಿದ್ದರು.ಅಮೆರಿಕದ ಯಾವುದೇ ಮಿಲಿಟರಿ ಹಸ್ತಕ್ಷೇಪವು ನಿಸ್ಸಂದೇಹವಾಗಿ ಸರಿಪಡಿಸಲಾಗದ ಹಾನಿಗೆ ಕಾರಣವಾಗುತ್ತದೆ ಎಂಬುದು ಅಮೆರಿಕನ್ನರು ತಿಳಿದಿರಬೇಕು" ಎಂದು ಖಮೇನಿ ಹೇಳಿದ್ದಾರೆ.

### ಹುದ್ದೆ ಹಂತ ಹಂತವಾಗಿ ಭರ್ತಿ :ಮುಖ್ಯಮಂತ್ರಿ ಸಿದ್ದರಾಮಯ್ಯ

ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು. 1964 ರಲ್ಲಿ ಆರಂಭವಾದ ನೌಕರರ ಸಂಘ ಇಷ್ಟು ಮಹತ್ತರ ವರ್ಷಗಳ ಕಾಲ ನಿರಂತರವಾಗಿ ನೌಕರರ ಕಷ್ಟ ಸುಖಗಳಿಗೆ ಸ್ಪಂದಿಸಿ, ಪ್ರಾಮಾಣಿಕ ಹೋರಾಟ ನಡೆಸುತ್ತಿದೆ. ಜೊತೆಗೆ ಗ್ರಾಹಕರಿಗೆ ಸಮರ್ಪಕ ವಿದ್ಯುತ್ ಪೂರೈಸುವ ಹೊಣೆಗಾರಿಕೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದೀರಿ. ಇದಕ್ಕೆ ನೀವೆಲ್ಲರೂ ಅಭಿನಂದನಾರ್ಹರು ಎಂದು ಶ್ಲಾಘಿಸಿದರು.ಇಡೀ ಏಷ್ಯಾದಲ್ಲಿ ಮೊದಲಿಗೆ ವಿದ್ಯುತ್ ಉತ್ಪಾದನೆ ಆಗಿದ್ದು 1902 ರಲ್ಲಿ ಅದು ಕರ್ನಾಟಕದಲ್ಲಿ. 1905 ರಲ್ಲಿ ಬೆಂಗಳೂರಿನಲ್ಲಿ ಪ್ರಥಮ ವಿದ್ಯುತ್ ಸರಬರಾಜು ಕಂಪನಿ ಆರಂಭಿಸಲಾಯಿತು. 1908 ರಲ್ಲಿ ಮೊದಲ ಬಾರಿ ಅರಮನೆಗೆ ವಿದ್ಯುತ್ ಬಂತು. ಅಲ್ಲಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆಯಲ್ಲಿ ನಾವು 34000 ಮೆಘಾ ವ್ಯಾಟ್ ಉತ್ಪಾದನೆ ಮಾಡುತ್ತಿರುವ ರಾಜ್ಯ ಎನ್ನುವ ಹೆಗ್ಗಳಿಕೆ ಕೇವಲ ನಮ್ಮ ರಾಜ್ಯದ್ದಾಗಿದೆ ಎಂದರು.ಆಹಾರ ಉತ್ಪಾದನೆಯಲ್ಲಿ ನಾವು ಸ್ವಾವಲಂಬಿಗಳಾಗುತ್ತಿರುವುದು ವಿದ್ಯುತ್ ಉತ್ಪಾದನೆಯಲ್ಲಿ ಸ್ವಾವಲಂಬಿಗಳಾಗಿರುವ ಕಾರಣಕ್ಕೇ ಎಂದು ವಿಶ್ಲೇಷಿಸಿದರು. ರೈತರಿಗೆ, ಕೃಷಿಗೆ, ಪಂಪ್ ಸೆಟ್ ಗಳಿಗೆ ಹಗಲಲ್ಲೂ 7 ಗಂಟೆ ಅಗತ್ಯ ವಿದ್ಯುತ್ ಸರಬರಾಜು ಮಾಡಲು ಶಕ್ತರಾಗುತ್ತೇವೆ. ಈ ಗುರಿ ಇಟ್ಟುಕೊಂಡು ಕೆಲಸಗಳು ನಡೆಯುತ್ತಿವೆ. 60000 ಮೆಘಾ ವ್ಯಾಟ್ ಉತ್ಪಾದನೆ ಗುರಿ ನಾವು ತಲುಪಿದ ತಕ್ಷಣ ಇದು ಸಾಧ್ಯವಗಲಿದೆ. ವಿದ್ಯುತ್ ಪ್ರಮುಖ ಕಚ್ಚಾವಸ್ತು ಎನ್ನುವುದನ್ನು ನಾವು ಮರೆಯಬಾರದು ಎಂದರು.ನೌಕರರು ಮತ್ತು ಕಾರ್ಮಿಕರು ಬಹಳ ಶ್ರಮ ವಹಿಸಿ ಕೆಲಸ ನಿರ್ವಹಿಸುತ್ತಿದ್ದೀರಿ. ನಿಮ್ಮ ಎಲ್ಲಾ ಬೇಡಿಕೆಗಳನ್ನೂ ಈಡೇರಿಸಲು ನಮ್ಮ ಸರ್ಕಾರ ಸಿದ್ಧವಿದೆ. ನಾವು ನಿಮ್ಮ ಜೊತೆಗೆ ಇದ್ದೇವೆ. ನೀವು ನಮ್ಮ ಜೊತೆಗೆ ಇರಿ ಎಂದು ಕರೆ ನೀಡಿದರು.

# ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಕಾನೂನು ಅರಿವು ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.18:ಚಿತ್ತಾಪುರ ತಾಲೂಕಾ ಕಾನೂನು ಸೇವಾ ಸಮಿತಿ,ತಾಲೂಕಾನ್ಯಾಯವಾದಿಗಳ ಸಂಘ, ತಾಲೂಕಾಡಳಿತ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೂಸೈಟಿ,ವಿವಿಧ ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಮಕ್ಕಳ ಸಹಾಯವಾಣಿ–1098/112 ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಬಾಲಕಾರ್ಮಿಕಪದ್ಧತಿ ವಿರೋಧಿ ದಿನದ ಅಂಗವಾಗಿ ಬುಧವಾರ ಚಿತ್ತಾಪೂರ ಓರಿಯಂಟಲ್ ಸಿಮೆಂಟ್ ಕಂಪನಿ ಸೇಫ್ಟಿ ಟ್ರೇನಿಂಗ್ ಹಾಲ್‌ದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾನೂನು ಅರಿವು ಕಾರ್ಯಕ್ರಮವನ್ನು ಚಿತ್ತಾಪೂರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷರಾದ ಕಿಶನ್ ಬಿ. ಮಾಡಲಗಿ ಅವರು ಉದ್ಘಾಟಿಸಿದರು. ನಂತರ ಅವರು ಮಾತನಾಡಿ, 14 ವರ್ಷದೊಳಗಿನ ಮಕ್ಕಳನ್ನು ಯಾರು ಕೆಲಸಕ್ಕೆ ಇಟ್ಟುಕೊಳ್ಳಬಾರದು. ಒಂದು ವೇಳೆ ಅಂತಹ ಮಕ್ಕಳನ್ನು ಯಾರಾದರುಕೆಲಸಕ್ಕೆಇಟ್ಟುಕೊಂಡಲ್ಲಿ ಅವರ ವಿರುದ್ಧ ಪ್ರಕರಣ ದಾಖಲಿಸಲಾಗುತ್ತದೆ. ಹಾಗೇ ಮಕ್ಕಳನ್ನುಕೆಲಸಕ್ಕೆಕಳುಹಿಸಿದ್ದಲ್ಲಿ ತಂದೆ–ತಾಯಿ ಮೇಲು ಸಹ ಪ್ರಕರಣ ದಾಖಲಿಸಲಾಗುತ್ತದೆ ಎಂದು ಹೇಳಿದರು. ಕಲಬುರಗಿ ಜಿಲ್ಲಾ ಬಾಲಕಾರ್ಮಿಕ ಯೋಜನಾಸೊಸೈಟಿಯೋಜನಾ ನಿರ್ದೇಶಕರಾದ ಸಂತೋಷ ಕುಲಕರ್ಣಿ ಅವರು ಮಾತನಾಡಿ, ಮಕ್ಕಳು ರಾಷ್ಟ್ರದ ಸಂಪತ್ತು. ಕಲಿಯುವ ವಯಸ್ಸಿನಲ್ಲಿ ಮಕ್ಕಳು ಶಿಕ್ಷಣದಿಂದ ದೂರ ಉಳಿದು ದುಡಿಮೆಯಲ್ಲಿ ತೊಡಗಿಸಿಕೊಳ್ಳುವುದು ಅತ್ಯಂತ ಕಳವಳಿಕಾರಿಯಾಗಿದೆ. ಶಿಕ್ಷಣ ವಂಚಿತ ಹಾಗೂ ದುಡಿಮೆಯಲ್ಲಿ ತೊಡಗಿರುವ ಈ ಮಕ್ಕಳನ್ನು ಮುಖ್ಯವಾಹಿನಿಗೆ ಕರೆತರಲು ಕೇಂದ್ರ, ರಾಜ್ಯ, ಸರ್ಕಾ–ರೇತರ ಸಂಸ್ಥೆಗಳು ಹಾಗೂ ಸಾರ್ವಜನಿಕರು ಸಂಘಟಿತರಾಗಿ ಪ್ರಯತ್ನಿಸಬೇಕು ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಚಿತ್ತಾಪೂರ ತಹಶೀಲ್ದಾರನಾಗಯ್ಯಾಹಿರೇಮಠ ಮಾತನಾಡಿ, ಬಾಲ್ಯಾವಸ್ಥೆ ಹಾಗೂ ಕಿಶೊರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆ 1986 ರಂತೆ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕರನ್ನು ನಿಯೋಜಿಸಿಕೊಂಡಲ್ಲಿ ಅಂತಹ ಮೊದಲ ಅಪರಾಧಕ್ಕೆ ಮಾಲೀಕರಿಗೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ ರೂ. 20,000/– ರಿಂದ 50,000/– ರವರೆಗೆ ದಂಡ ಅಥವಾ ಎರಡನ್ನೂ ವಿಧಿಸಲು ಅವಕಾಶವಿರುತ್ತದೆ. ಪೋಷಕರಾಗಿದ್ದಲ್ಲಿ ಲಘು ಶಿಕ್ಷಾ ಪ್ರಾವಧಾನವಿದ್ದು, ಪುನರಾವರ್ತಿತ ಅಪರಾಧಕ್ಕೆ 10,000/–ರೂ.ಗಳ ದಂಡವನ್ನು ವಿಧಿಸಲಾಗುತ್ತದೆ ತಿಳಿಸಿದರು. ಕಾರ್ಯಕ್ರಮದಲ್ಲಿ ಅಥಿತಿಗಳಾಗಿ ಸಂಸ್ಕಾರ ಪ್ರತಿಷ್ಠಾನ ಸಂಸ್ಥೆಯ ನಿರ್ದೇಶಕ ವಿಠ್ಠಲ್ ಚಿಕಣಿ ಮಾತನಾಡಿ 6 ರಿಂದ 14 ವರ್ಷದೊಳಗಿನ ಮಕ್ಕಳು ಯಾವುದೇ ಉದ್ಯೋಗ ಅಥವಾ ಪ್ರಕಿಯೆಗಳನ್ನು ಹಾಘೂ 18 ವರ್ಷ ವಯಸ್ಸಿನವರೆಗಿನ ಕಿಶೋರರು ಅಪಾಯಕಾರಿ ಉದ್ದಿಮೆಗಳಲ್ಲಿ (ಫ್ಯಾಕ್ಟರಿ, ಮೈನ್ಸ್, ಕೇಮಿಕಲ್ಸ್ ಮತ್ತು ಎಕ್ಸಪ್ಲೋಜಿವ್) ದುಡಿಯುವುದು ಕಂಡು ಬಂದಲ್ಲಿ ಚೈಲ್ಡ್ ಲೈನ್ –1098/112, ಜಿಲ್ಲಾ ಮಕ್ಕಳ ರಕ್ಷಣಾ ಘಟಕ 08472–243219 ಅಥವಾ 080–22453549,08472–256295, 269347, 275278 ಗಳಿಗೆ ದೂರವಾಣಿಗೆ ಕರೆ ಮಾಡಿ ಸಂಪರ್ಕಿಸಲು ಕೋರಲಾಗಿದೆ. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾ ಸರಕಾರಿ ವಕೀಲರು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶಕ ವಿ.ಆರ್. ಕಾಂತಾ, ಸಹಾಯಕ ಸರಕಾರಿ ಅಭಿಯೋಜಕ ಅಂಜನಾದೇವಿ ಆರ್,ತಾಲೂಕಾನ್ಯಾಯಾವಾದಿಗಳ ಸಂಘ ಅಧ್ಯಕ್ಷ ನಾಗರಾಜ್ ಬಿ ಕಡಬೂರ, ಕಲಬುರಗಿ ಉಪವಿಭಾಗದ ಜಿಲ್ಲಾ ಕಾರ್ಮಿಕ ಅಧಿಕಾರಿ ಶರಣಪ್ಪ ಆರ್. ಹಳ್ಳಿಮನಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಆರತಿ ತುಪ್ಪದ್, ಪೊಲೀಸ್ ವೃತ್ತ ನಿರೀಕ್ಷಕ ಚಂದ್ರಶೇಖರ ತಿಗಡಿ, ಕಾರ್ಮಿಕ ನಿರೀಕ್ಷಕ ವಿಕ್ರಮ ಬಡಿಗೇರ್, ಓರಿಯಂಟಲ್ ಕಂಪನಿ ಹೆಚ್‌ಆರ್ ಡಿ.ಜಿ.ಎಂ. ನಿಂಗನಗೌಡಬೆಳ್ಳಿ,ಮಾರ್ಗದರ್ಶಿ ಸಂಸ್ಥೆಯ ನಿರ್ದೇಶಕ ಆನಂದರಾಜ್, ಜಿಲ್ಲಾ ಮಕ್ಕಳ ಸಹಾಯವಾಣಿ–1098/112 ಕಾರ್ಯಕ್ರಮ ಸಂಯೋಜ–ಕ ಬಸವರಾಜ್ ತೆಂಗಳಿ, ವಕೀಲರಾದ ಬಿ.ಎನ್. ಸಿಂದೆ, ಎಸ್. ಎನ್. ನಂದೂರಕರ್, ಎ.ಎಮ್. ಅವಂಟಿ ಸೇರಿದಂತೆ ಓರಿಯಂಟಲ್ ಸಿಮೆಂಟ್ ಕಂಪನಿ ಕಾರ್ಮಿಕರು, ಹೆಚ್. ಆರ್.ಸಿಬ್ಬಂದಿಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಟಿ.ಎಲ್.ಎಸ್.ಎ. ಗಂಗಣ್ಣ ಕಾರ್ಯಕ್ರಮದ ನಿರೂಪಿಸಿದರು. ಹೆಚ್.ಆರ್. ಅಸಿಸ್ಟಂಟ್ ಶಿವಯೋಗಿ ಸ್ವಾಗತಿಸಿದರು.

## ಮಧ್ಯಸ್ಥಿಕೆಯಿಂದಾಗಿಲ್ಲ: ಟ್ರಂಪ್‌ಗೆ ಮೋದಿ ಸ್ಪಷ್ಟನೆ

ಸ್ಪಷ್ಟವಾಗಿ ತಿಳಿಸಿದ್ದಾರೆಂದು ತಿಳಿಸಿದ್ದಾರೆ.

ಜಿ 7 ಶೃಂಗಸಭೆಯ ಹೊರತಾಗಿ ಪ್ರಧಾನಿ ಮೋದಿ ಮತ್ತು ಅಧ್ಯಕ್ಷ ಟ್ರಂಪ್ ಭೇಟಿಯಾಗಬೇಕಿತ್ತು. ಆದರೆ, ಅಧ್ಯಕ್ಷ ಟ್ರಂಪ್ ಅವರು ಅಮೆರಿಕಕ್ಕೆ ಬೇಗನೆ ಹಿಂತಿರುಗಬೇಕಾಯಿತು, ಇದರಿಂದಾಗಿ ಈ ಸಭೆ ನಡೆಯಲು ಸಾಧ್ಯವಾಗಲಿಲ್ಲ. ನಂತರ, ಅಧ್ಯಕ್ಷ ಟ್ರಂಪ್ ಅವರ ಕೋರಿಕೆಯ ಮೇರೆಗೆ, ಉಭಯ ರಾಷ್ಟ್ರಗಳ ನಾಯಕರು ಇಂದು ದೂರವಾಣಿ ಮೂಲಕ ಮಾತನಾಡಿದರು.ಈ ಸಂಭಾಷಣೆ ಸುಮಾರು 35 ನಿಮಿಷಗಳ ಕಾಲ ನಡೆಯಿತು, ಇದರಲ್ಲಿ ಪಹಲ್ಗಾಮ್ ಭಯೋತ್ಪಾದಕ ದಾಳಿ, ಆಪರೇಷನ್ ಸಿಂಧೂರ್ ಮತ್ತು ನಂತರದ ಭಾರತ–ಪಾಕಿಸ್ತಾನ ಉದ್ವಿಗ್ನತೆಯನ್ನು ವಿವರವಾಗಿ ಚರ್ಚಿಸಲಾಯಿತು.ಏಪ್ರಿಲ್ 22 ರ ನಂತರ ಭಾರತವು ಭಯೋತ್ಪಾದನೆಯ ವಿರುದ್ಧ ಕ್ರಮ ಕೈಗೊಳ್ಳುವ ತನ್ನ ದೃಢನಿಶ್ಚಯದ ಬಗ್ಗೆ ಇಡೀ ಜಗತ್ತಿಗೆ ತಿಳಿಸಿದೆ ಎಂದು ಪ್ರಧಾನಿ ಮೋದಿ ಅಧ್ಯಕ್ಷ ಟ್ರಂಪ್ ಅವರಿಗೆ ಸ್ಪಷ್ಟವಾಗಿ ಹೇಳಿದ್ದಾರೆಜಮ್ಮು ಮತ್ತು ಕಾಶ್ಮೀರ ವಿವಾದಕ್ಕೆ ಸಂಬಂಧಿಸಿದಂತೆ ಭಾರತ ಎಂದಿಗೂ ಮೂರನೇ ಶಕ್ತಿಯ ಮಧ್ಯಸ್ಥಿಕೆ ಕೇಳಿಲ್ಲ, ಮುಂದೆಯೂ ಕೇಳುವುದಿಲ್ಲ ಎಂದು ತಿಳಿಸಿದ್ದಾರೆಂದು ಮಿಶ್ರಿ ಅವರು ತಿಳಿಸಿದ್ದಾರೆ.ಭಾರತ–ಅಮೆರಿಕ ವ್ಯಾಪಾರ ಒಪ್ಪಂದ ಮತ್ತು ಭಾರತ ಮತ್ತು ಪಾಕಿಸ್ತಾನ ನಡುವಿನ ಮಧ್ಯಸ್ಥಿಕೆ ಕುರಿತು, ಅಮೆರಿಕದೊಂದಿಗೆ ಯಾವುದೇ ಮಟ್ಟದಲ್ಲಿ ಮಾತುಕತೆ ನಡೆದಿಲ್ಲ. ಮಿಲಿಟರಿ ಕ್ರಮವನ್ನು ನಿಲ್ಲಿಸುವ ಕುರಿತು, ಭಾರತ ಮತ್ತು ಪಾಕಿಸ್ತಾನದ ನಡುವೆ ನೇರವಾಗಿ ಮಾತುಕತೆಗಳು ನಡೆದಿವೆ ಎಂದು ಮಾಹಿತಿ ನೀಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರ ವಿವಾದಕ್ಕೆ ಸಂಬಂಧಿಸಿದಂತೆ, ಭಾರತ ಮೊದಲಿನಿಂದಲೂ ದ್ವಿಪಕ್ಷೀಯ ಮಾತುಕತೆಗೆ ಒತ್ತು ನೀಡಿದೆ. ಇದರಲ್ಲಿ ಮೂರನೇ ಶಕ್ತಿಯ ಮಧ್ಯಸ್ಥಿಕೆಯನ್ನು ಭಾರತ ಎಂದಿಗೂ ಒಪ್ಪಿಕೊಂಡಿಲ್ಲ. ಮುಂದೆ ಒಪ್ಪುವುದೂ ಇಲ್ಲ. ಈ ಪ್ರಾದೇಶಿಕ ವಿವಾದ ಬಗೆಹರಿಯಲು ಮೂರನೇ ಶಕ್ತಿಯ ಅವಶ್ಯಕತೆಯಯೇ ಇಲ್ಲ ಎಂಬುದು ಭಾರತದ ದೃಢವಾದ ನಿಲುವು ಎಂದು ಪ್ರಧಾನಿ ಮೋದಿ ಅವರು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಸ್ಪಷ್ಟವಾಗಿ ಹೇಳಿದ್ದಾರೆ.

ಪ್ರಧಾನಿ ಮೋದಿ ಅವರ ಮಾತನ್ನು ಮೌನವಾಗಿ ಆಲಿಸಿದ ಡೊನಾಲ್ಡ್ ಟ್ರಂಪ್ ಅವರು, ಈ ವಿಚಾರವಾಗಿ ಭಾರತದ ಅಭಿಪ್ರಾಯಕ್ಕೆ ಸಹಮತಿ ಇದೆ ಎಂದು ಹೇಳಿದ್ದಾಗಿ ಮೂಲಗಳು ಖಚಿತಪಡಿಸಿವೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಯಾಗಿ, ಭಾರತ "ಆಪರೇಷನ್ ಸಿಂಧೂರ" ಹೆಸರಿನ ಸೇನಾ ಕಾರ್ಯಾಚರಣೆಯನ್ನು ಕೈಗೊಂಡಿತ್ತು.

ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿದ್ದ ಸುಮಾರು 9 ಭಯೋತ್ಪಾದಕ ಶಿಬಿರಗಳನ್ನು ಗುರಿಯಾಗಿಸಿಕೊಂಡು, ಕ್ಷಿಪಣಿ ದಾಳಿ ನಡೆಸಿತ್ತು. ಇದರಿಂದ ಪಾಕಿಸ್ತಾನ ಭಾರೀ ಹಾನಿ ಎದುರಿಸುವಂತಾಗಿತ್ತು. ಬಳಿಕ ಪಾಕಿಸ್ತಾನ ಕೂಡಲೇ ಕದನ ವಿರಾಮ ಒಪ್ಪಂದಕ್ಕೆ ಭಾರತಕ್ಕೆ ಮನವಿ ಮಾಡಿತ್ತು. ಆದರೆ, ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಾತ್ರ ತಮ್ಮಿಂದಲೇ ಭಾರತ ಹಾಗೂ ಪಾಕಿಸ್ತಾನದ ನಡುವೆ ಕದನ ವಿರಾಮ ಒಪ್ಪಂದವಾಗಿದೆ ಎಂದು ಹೇಳುತ್ತಿದ್ದರು. ಟ್ರಂಪ್ ಅವರ ಈ ಹೇಳಿಕೆಯನ್ನು ಭಾರತ ನಿರಾಕರಿಸಿತ್ತು.

ಭಾರತದ ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಕೂಡ, ಅಮೆರಿಕಾ ಮಧ್ಯಸ್ಥಿಕೆ ವಾದವನ್ನು ನಿರಾಕರಿಸಿದ್ದರು. ಆದರೆ, ಮೋದಿಯವರು ಮೌನ ಕುರಿತು ವಿರೋಧ ಪಕ್ಷಗಳ ನಾಯಕರು ಟೀಕೆ ಮಾಡುತ್ತಿದ್ದರು. ಟ್ರಂಪ್ ಅವರೊಂದಿಗೆ ನೇರವಾಗಿ ಮಾತುಕತೆ ನಡೆಸಿರುವ ಪ್ರಧಾನಿ ಮೋದಿಯವರು ಕಾಶ್ಮೀರ ವಿಚಾರದಲ್ಲಿ ಮೂರನೇ ವ್ಯಕ್ತಿಯ ಮಧ್ಯಸ್ಥಿಕೆಯನ್ನು ಭಾರತ ಎಂದಿಗೂ ಒಪ್ಪುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ರವಾನಿಸಿದ್ದಾರೆ.

## ಜೂ. 20 ರಂದು ಮಿನಿ ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ


ಕಲಬುರಗಿ,ಜೂ.18:ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಿಂದ ಕಲಬುರಗಿ ಸರ್ಕಾರಿ ಐಟಿಐ ಕಾಲೇಜು ಹಿಂದುಗಡೆಯಿರುವ ಜಿಲ್ಲಾ ಉದ್ಯೋಗ ವಿನಿಮಯ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಇದೇ ಜೂನ್ 20 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮಿನಿ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಜೋಯಾಲುಕ್ಕಾಸ್‌ದಲ್ಲಿ ಸೆಲ್ಸ್ ಎಕ್ಸಿಕ್ಯೂಟಿವ್, ಸೆಲ್ಸ್ ಟ್ರೇನಿ ಮತ್ತು ಆಫೀಸ್‌ಬಾಯ್ ಹುದ್ದೆಗಳಿಗೆ ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 32 ವರ್ಷದೊಳಗಿರಬೇಕು. ಫ್ಲಿಪ್‌ಕಾರ್ಟ್‌ದಲ್ಲಿ ಡೆಲಿವರಿ ಎಕ್ಸಿಕ್ಯೂಟಿವ್ ಹುದ್ದೆಗೆ ಎಸ್. ಎಸ್.ಎಲ್.ಸಿ. ವಿದ್ಯಾರ್ಹತೆ ಹೊಂದಿರಬೇಕು.ವಯೋಮಿತಿ 20 ರಿಂದ 38 ವರ್ಷದೊಳಗಿರಬೇಕು. ಹಬ್ ಸೊಟರ್ ಹುದ್ದೆಗೆ ಪಿಯುಸಿ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 20 ರಿಂದ 35 ವರ್ಷದೊಳಗಿರಬೇಕು. ಅನ್ನಪೂರ್ಣ ಮೈಕ್ರೋ ಫೈನಾನ್ಸ್‌ದಲ್ಲಿ ಫೀಲ್ಡ್ ಕ್ರೆಡಿಟ ಆಫೀಸರ್ ಹುದ್ದೆ ಹಾಗೂ ಅಸಿಸ್ಟೆಂಟ್ ಬ್ರ್ಯಾಂಚ್ ಮ್ಯಾನೇಜರ್ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ/ಪಿಯುಸಿ/ಐಟಿಐ/ಡಿಪ್ಲೋಮಾ/ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 28 ವರ್ಷದೊಳಗಿರಬೇಕು. ಯುನಿಟ್ ಮ್ಯಾನೇಜರ್ ಹುದ್ದೆಗೆ ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 21 ರಿಂದ 32 ವರ್ಷದೊಳಗಿರಬೇಕು.

ಬ್ರೈಟ್ ಕಂಪ್ಯೂಟರ್ ಟ್ರೈನಿಂಗ್ ಇನ್ಸ್ಟಿಟ್ಯೂಟ್‌ದಲ್ಲಿ ಅಕೌಂ–ಟೆಂಟ್ ಹುದ್ದೆಗೆ ಬಿ.ಕಾಂ./ಎಮ್.ಕಾಂ. ವಿದ್ಯಾರ್ಹತೆ ಹೊಂದಿರಬೇಕು. ಕಂಪ್ಯೂಟರ್ ಟೀಚರ್ ಹುದ್ದೆಗೆ ಡಿಪ್ಲೋಮಾ ಬಿ.ಇ/ಬಿ.ಎಸ್.ಸಿ (ಸಿ.ಎಸ್). ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 22 ರಿಂದ 40 ವರ್ಷದೊಳಗಿರಬೇಕು. ಸ್ವತಂತ್ರ ಮೈಕ್ರೋ ಫೈನಾನ್ಸ್‌ದಲ್ಲಿ ಕಲೆಕ್ಷನ್ ಆಫೀಸರ್ ಮತ್ತು ಫೀಲ್ಡ್ ಆಫೀಸರ್ ಹುದ್ದೆಗಳಿಗೆ ಪಿಯುಸಿ/ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 28 ವರ್ಷದೊಳಗಿರಬೇಕು. ಶ್ರೀ ಸಾಯಿ ಅರ್ಥ ಮೂವರ್ಸ್‌ದಲ್ಲಿ ಸೆಲ್ಸ್ ಪಿಆರ್‌ಇ, ಸೆಲ್ಸ್ ಇಂಜಿನಿಯರ್, ಸಿ.ಆರ್. ಎಮ್/ಸಿ.ಆರ್.ಇ. ಮತ್ತು ಮಾರ್ಕೇಟಿಂಗ್ ಮ್ಯಾನೇಜರ್ ಹುದ್ದೆಗಳಿಗೆ ಯಾವುದೇ ಪದವಿ ಪಾಸಾಗಿರಬೇಕು. ಸರ್ವಿಸ್ ಇಂಜಿನಿಯರ್ ಹುದ್ದೆಗೆ ಐಟಿಐ/ಡಿಪ್ಲೋಮಾ (ಯಾವುದೇ ಟ್ರೇಡ್) ಪಾಸಾಗಿರಬೇಕು. ವಯೋಮಿತಿ 18 ರಿಂದ 30 ವರ್ಷದೊಳಗಿರಬೇಕು.ಕ್ರೆಡಿಟ್ ಎಕ್ಸೆಸ್ ಗ್ರಾಮೀಣ ಲೀ.ದಲ್ಲಿ ರಿಲೇಷನ್‌ಶೀಫ್ ಆಫೀಸರ್ ಹುದ್ದೆಗೆ ಪಿಯುಸಿ/ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 30 ವರ್ಷದೊಳಗಿರಬೇಕು. ಅಫಜಲಪುರ ತಾಲೂಕಿನ ಚೌಡಾಪುರದ ಪೂಜ್ಯ ಶ್ರೀ ವಿ.ಎಲ್.ಭಟ್ಟ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಇಂಗ್ಲೀಷ ಮತ್ತು ಗಣಿತ ಶಿಕ್ಷಕರ ಹುದ್ದೆಗೆ ಎಮ್.ಎ., ಬಿ.ಎಡ್.ಎಮ್.ಎಸ್.ಸಿ.ಬಿ.ಎಡ್ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 30 ವರ್ಷದೊಳಗಿರಬೇಕು.

ಆಸಕ್ತಿಯುಳ್ಳ ಅಭ್ಯರ್ಥಿಗಳು ತಮ್ಮ ಎಲ್ಲಾ ಅಂಕಪಟ್ಟಿಗಳ ಝೆರಾಕ್ಸ್, ರೆಸ್ಯೂಮ್ (ಬಯೋಡೇಟಾ) ಭಾವಚಿತ್ರಗಳು ಹಾಗೂ ಆಧಾರ್‌ಕಾರ್ಡ್‌ದೊಂದಿಗೆ ಮೇಲ್ಕಂಡ ದಿನದಂದು ನಡೆಯುವ ಮಿನಿ ಉದ್ಯೋಗ ಮೇಳದಲ್ಲಿ ಭಾಗವಹಿಸಬೇಕು. ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆಯನ್ನು ನೀಡಲಾಗುವುದಿಲ್ಲ.

# ಕೊಪ್ಪಳ ಜಿಲ್ಲಾ ಪಂಚಾಯತ ನೂತನ ಸಿಇಓ ಆಗಿ ವರ್ಣಿತ್ ನೇಗಿ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜೂ.18: ಕೊಪ್ಪಳ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ವರ್ಣಿತ್ ನೇಗಿ ಅವರು ಬುಧವಾರ ಅಧಿಕಾರ ಸ್ವೀಕರಿಸಿದರು. ನಿರ್ಗಮಿತ ಸಿಇಓ ರಾಹಲ್ ರತ್ನಂ ಪಾಂಡೇಯ ಅವರು ನೂತನ ಸಿಇಓ ಅವರಿಗೆ ಅಧಿಕಾರಿ ಹಸ್ತಾಂತರಿದರು.


2019 ರ ಐಎಎಸ್ ಬ್ಯಾಚ್‌ನ ಅಧಿಕಾರಿಯಾದ ವರ್ಣಿತ್ ನೇಗಿ ಅವರು ಮೂಲತಃ ಛತ್ತೀಸಗಡ ರಾಜ್ಯದವರಾಗಿದ್ದಾರೆ. ಅವರು ಮೊದಲು ತಮ್ಮ ಪ್ರೋಬೇಷನರಿ ಅವಧಿಯನ್ನು ಕೊಪ್ಪಳದಲ್ಲಿ ಮುಗಿಸಿದ ನಂತರ ಮೈಸೂರು ಜಿಲ್ಲೆಯ ಹುಣಸೂರಿನಲ್ಲಿ ಸಹಾಯಕ ಆಯುಕ್ತರಾಗಿ ಕರ್ತವ್ಯ ನಿರ್ವಹಿಸಿ ನಂತರ ಮೈಸೂರು ಆಡಳಿತ ತರಬೇತಿ ಸಂಸ್ಥೆ(ಎ.ಟಿ.ಐ) ನಲ್ಲಿ ಜಂಟಿ ನಿರ್ದೇಶಕರಾಗಿ ಕರ್ತವ್ಯ ನಿರ್ವಹಿಸಿರುತ್ತಾರೆ.

ಬೆಂಗಳೂರಿನ ಗ್ರಾಮಾಂತರ ಜಿಲ್ಲೆ ಹಾಗೂ ಕೊಡಗು ಜಿಲ್ಲೆಯ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿದ ನಂತರ ಕೆ.ಎಚ್.ಡಿ.ಸಿ ಹುಬ್ಬಳ್ಳಿಯ ಎಂ.ಡಿ ಆಗಿ ಕರ್ತವ್ಯ ನಿರ್ವಸಿದ ಅವರು ಸದ್ಯ ಕೊಪ್ಪಳ ಜಿಲ್ಲೆಯ ನೂತನ ಸಿಇಓ ಆಗಿ ಅಧಿಕಾರ ಸ್ವೀಕರಿಸಿದರು. ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಹಾಗೂ ಜಿಲ್ಲಾ ಪಂಚಾಯತನ ವಿವಿಧ ಶಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.



ಭಾಲ್ಕಿ:ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತ ಆಯೋಗದ ಸದಸ್ಯೆಯಾಗಿ ನೇಮಕಗೊಂಡ ಮನದೀಪ ಕೌರ್ ಮನಪ್ರೀತಸಿಂಗ್ ಕೌರ್ ದಂಪತಿಗಳಿಗೆ ಉದ್ಯಮಿ ಜೈಕಿಶನ ಬಿಯಾಣಿ ಅವರು ಗೌರವಿಸಿ,ಅಭಿನಂದಿಸಿದರು.ರೂಪಾಲಿ ಜೈಕಿಶನ ಬಿಯಾಣಿ ಉಪಸ್ಥಿತರಿದ್ದರು.

# ಹಳೆಯ ಪಿಂಚಣಿ ಯೋಜನೆ ಜಾರಿಗೆ ಯತ್ನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 18 : ರಾಜ್ಯ ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ಯೋಜನೆ ಜಾರಿಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಹೇಳಿದರು.

ನಗರದ ನೌಬಾದ್‌ನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ನಡೆದ ಸಂಘದ ಜಿಲ್ಲಾ ಘಟಕದ ನಾಮ ನಿರ್ದೇಶಿತ ಉಪಾಧ್ಯಕ್ಷ ಶ್ರೀಕಾಂತ ಪಾಟೀಲ ಅವರ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಹಳೆಯ ಪಿಂಚಣಿ ಯೋಜನೆ ಜಾರಿಗೆ ಸಂಬಂಧಿಸಿದಂತೆ ಈಗಾಗಲೇ ಸರ್ಕಾರ ಸಮಿತಿ ರಚಿಸಿದೆ. ಸಮಿತಿ ಸರ್ಕಾರಕ್ಕೆ ವರದಿ ಸಲ್ಲಿಸಿದ ನಂತರ ಶೀಘ್ರ ಜಾರಿಗೆ ಒತ್ತಡ ತರಲಾಗುವುದು ಎಂದು ತಿಳಿಸಿದರು.

ರಾಜ್ಯ ಸರ್ಕಾರಿ ನೌಕರರ ವಿವಿಧ ಬೇಡಿಕೆಗಳ ಈಡೇರಿ–ಕೆಗೆ ಸಂಘ ನಿರಂತರ ಪ್ರಯತ್ನಿಸುತ್ತಿದೆ. ನೌಕರರ ಹಿತ ರಕ್ಷಣೆಗೆ ಬದ್ಧವಾಗಿದೆ ಎಂದು ಹೇಳಿದರು.

ಪ್ರಾಚಾರ್ಯೆ ಜಯಶ್ರೀ ಪ್ರಭಾ, ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು, ಕಾಲೇಜು ಬೋಧಕ ಹಾಗೂ ಬೋಧಕ ಸಿಬ್ಬಂದಿ ಹಾಜರಿದ್ದರು.

# ಗುರು ನಾನಕ ಶಾಲೆಯಲ್ಲಿ ಪ್ರತಿಜ್ಞಾ ಸ್ವೀಕಾರ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 18 : ನಗರದ ನೆಹರು ಸ್ಟೇಡಿಯಂ ಹತ್ತಿರ ವಿರುವ ಗುರು ನಾನಕ ಪಬ್ಲಿಕ್ ಶಾಲೆಯಲ್ಲಿ ಇಂದು ದಿನಾಂಕ18–06–2025ರಂದು ವಿದ್ಯಾರ್ಥಿ ಪ್ರತಿನಿಧಿಗಳ ಪ್ರತಿಜ್ಞಾ ಸ್ವೀಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ದೀಪ ಬೆಳಗಿಸುವುದರ ಮೂಲಕ ಆರಂಭವಾಯಿತು. ಮಕ್ಕಳಿಂದ ಪಥ ಸಂಚಲನ ನಡೆಯಿತು. ನಂತರ ಹೊಸದಾಗಿ ಆಯ್ಕೆಯಾದ ಹೆಡ್ ಬಾಯ್ ಮತ್ತು ಹೆಡ್ ಗರ್ಲ್ ಪ್ರತಿನಿಧಿಗಳಿಗೆ ಸಂಸ್ಥೆಯ ಉಪಾಧ್ಯಕ್ಷೆಯರಾದ ಶ್ರೀಮತಿ ರೇಷ್ಮಾ ಕೌರ ಅವರು ಪ್ರತಿಜ್ಞೆಯನ್ನು ಭೋಧಿಸಿದರು.

ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಮಾಜಿ ಕರ್ನಲ್ ಆರ್.ಡಿ.ಸಿಂಗ್ ಅವರು ಆಗಮಿಸಿ ವಿದ್ಯಾರ್ಥಿಗಳಿಗೆ ಒಳ್ಳೆಯ ನಾಗರಿಕರಾಗುವಂತೆ, ಜೀವದನದಲ್ಲಿ ಶಿಸ್ತನ್ನು ಪಾಲಿಸುವಂತೆ ಕರೆ ಕೊಟ್ಟರು. ಇಂದಿನ ಕಾರ್ಯಕ್ರಮವನ್ನು ನೋಡಿ ನನಗೆ ಬಹಳ ಖುಷಿಯಾಗಿದೆ, ಪರೇಡ್ ಮಾಡುವ ವಿದ್ಯಾರ್ಥಿಗಳನ್ನು ನೋಡಿದರೆ ಒಳ್ಳೆಯ ತರಬೇತಿ ಕೊಟ್ಟಂತೆ ಕಾಣುತ್ತದೆ. ವಿದ್ಯಾರ್ಥಿಗಳು ಮುಂದಿನ ವಿದ್ಯಾಭ್ಯಾಸ ಮಾಡಿ ಭಾರತೀಯ ಸೇನೆಗೆ ಸೇರಿಕೊಳ್ಳಿ ಎಂದು ಕರೆಟಕೊಟ್ಟರು.

ಕಾಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀಮತಿ ರೇಷ್ಮಾ ಕೌರ ಅವರು ಮಾತನಾಡಿ ಮಕ್ಕಳು ಶ್ರಮ ಜೀವಿಗಳಾಗಬೇಕು. ಉತ್ತಮ ಗುರಿಯನ್ನು ಹೊಂದಿರಬೇಕು ಗುರಿಯಿಲ್ಲದೆ ಮುಂದೆ ಸಾಗಲು ಸಾಧ್ಯವಿಲ್ಲ. ಪಾಲಕರ ಕನಸನ್ನು ನೆನಸಾಗಿಸಲು ಒಳ್ಳೆ ರೀತಿಯಲ್ಲಿ ಅಭ್ಯಾಸ ಮಾಡಬೇಕು. ವಿದ್ಯಾರ್ಥಿಗಳು ಶಿಸ್ತಿನ ದಾರಿಯಲ್ಲಿ ಸಾಗಬೇಕು. ಪರೋಪಕಾರದ ಮನೋಭಾವನೆಯನ್ನು ಹೊಂದಿರಬೇಕು. ಮಕ್ಕಳು ತಮ್ಮಲ್ಲಿ ಶಿಸ್ತನ್ನು ಅಳವಡಿಸಿಕೊಳ್ಳಬೇಕು. ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಸುತ್ತಲಿನ ವಾತಾವರಣವನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು ಮತ್ತು ಗುರು ಹಿರಿಯರನ್ನು ಗೌರವಿಸಬೇಕು ಎಂದು ಕರೆ ಕೊಟ್ಟರು.

ಹೆಡ್ ಬಾಯ್ ಮತ್ತು ಹೆಡ್ ಗ್ರಲ್ ಆಯ್ಕೆ :

ಶಾಲೆಯ ಹೆಡ್ ಬಾಯ್‌ಯಾಗಿ 10ನೇ ತರಗತಿಯ ವಿದ್ಯಾರ್ಥಿ ಯಶಸ್ ಸಂತೋಷ್ ಮತ್ತು ಉಪ ಹೆಡ್ ಗ್ರಲ್ ಹಾಜೀರಾ ಎಂ.ಡಿ.ಆಮೇರ್.9ನೇತರಗತೀಯ ಉಪ ಹೆಡ್‌ಬಾಯ್ ಜಯಶ್ ಸಂಗಮೇಶ್ ಮತ್ತು ಉಪ ಹೆಡ್ ಗ್ರಲ್ ಆಫೀಯಾ ಶೇಖ್ ಜಹಾಂಗೀರ್.

ಈ ಕಾರ್ಯಕ್ರಮದಲ್ಲಿ ಶೈಕ್ಷಣಿಕ ಡೀನ್‌ರಾದ ಜಸ್ಮಿನೀತ ಕೌರ್, ಶಾಲೆಯ ಪ್ರಾಂಶುಪಾಲೆ ನಳಿನಿ ಡಿ.ಜಿ., ಶೇಖ್ ಅಮಜದ ಅಲಿ, ಹನುಮಾನ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಅತಿಸಾರ ಭೇದಿ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮ



ಬೀದರ, ಜೂ.18 : ಐದು ವರ್ಷದ ಮಕ್ಕಳ ಸಾವಿಗೆ ಅತೀಸಾರ ಭೇದಿ ಪ್ರಮುಖ ಕಾರಣವಾಗಿದ್ದು,ಮಕ್ಕಳಲ್ಲಿ ಬೇಧಿ ರೋಗ ಪುನರಾವರ್ತನೆಯಾದಾಗ ಮಕ್ಕಳ ತೂಕ ಕ್ಷಿಣಿಸಿ ಅಪೌಷ್ಠಿಕತೆ ಉಂಟಾಗುತ್ತದೆ. ಇದರಿಂದ ಐದು ವರ್ಷದೊಳಗಿನ ಮಕ್ಕಳಲ್ಲಿ ಸಾವಿನ ಪ್ರಮಾಣ ಹೆಚ್ಚು ಸಂಭವಿಸುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಧ್ಯಾನೇಶ್ವರ ನಿರುಗುಡೆ ತಿಳಿಸಿದರು.

ಅವರು ಬುಧವಾರ ಬ್ರಿಮ್ಸ್ ಆಸ್ಪತ್ರೆ ಬೀದರನ ಪೌಷ್ಠಿಕ ಆಹಾರ ಪುನಶ್ಚೇತನ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಜಿಲ್ಲೆಯಾದ್ಯಾಂತ ಜೂನ್ 16 ರಿಂದ 31 ರವರೆಗೆ ಜರುಗುತ್ತಿರುವ "ತೀವ್ರತರ ಅತಿಸಾರ ಭೇದಿ ನಿಯಂತ್ರಣ ಪಾಕ್ಷಿಕ" ಕಾರ್ಯಕ್ರಮದಲ್ಲಿ ಮಕ್ಕಳಿಗೆ ಓಆರ್‌ಎಸ್ ಪೊಟ್ಟಣ ಮತ್ತು ಝಿಂಕ್ ಮಾತ್ರೆ ನೀಡುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

ಸಾಕಷ್ಟು ಸಾವು ನೋವುಗಳು ಸಂಭವಿಸುತ್ತಿದ್ದು ಇದನ್ನು ನಿವಾರಿಸುವ ಸಲುವಾಗಿ 5 ವರ್ಷದೊಳಗಿನ ಎಲ್ಲಾ ಮಕ್ಕಳ ತಾಯಿಂದಿರಿಗೆ ಓ.ಆರ್.ಎಸ್. ಪೊಟ್ಟಣವನ್ನು ಮನೆ–ಮನೆಗೆ ತೆರಳಿ ವಿತರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಓ.ಆರ್.ಎಸ್. ಚಿಕಿತ್ಸೆಯ ವಿಧಾನ, ಓ.ಆರ್.ಎಸ್. ದ್ರಾವಣ ತಯಾರಿಸುವ ಕ್ರಮ ಹಾಗೂ ಬೇಧಿ ಸಂದರ್ಭದಲ್ಲಿ ಓ.ಆರ್.ಎಸ್. ಮತ್ತು ಝಿಂಕ್ ಮೂಲಕ ಉಪಚರಿಸುವ ಕ್ರಮಗಳ ಕುರಿತು ತಾಯಿಂದಿಯರಿಗೆ ತಿಳಿಸಲಾಗುತ್ತಿದೆ. ಅಲ್ಲದೆ ಕೈತೊಳೆಯುವ ಪ್ರಾತ್ಯಕ್ಷಿಕೆ ಮತ್ತು ಕೈತೊಳೆಯುವುದರ ಮಹತ್ವವನ್ನು ಕುರಿತು ವಿವರಿಸಲಾಗುತ್ತದೆ ಎಂದು ತಿಳಿಸಿದರು.ಐದು ವರ್ಷದೊಳಗಿನ ಎಲ್ಲಾ ಮಕ್ಕಳ ತಾಯಿಂದಿರಿಗೆ ಓ.ಆರ್.ಎಸ್. ಪೊಟ್ಟಣವನ್ನು ಮನೆ–ಮನೆಗೆ ತೆರಳಿ ವಿತರಿಸಲಾಗುತ್ತಿದೆ. ಓ.ಆರ್.ಎಸ್. ಚಿಕಿತ್ಸೆಯ ವಿಧಾನ, ಓ.ಆರ್.ಎಸ್. ದ್ರಾವಣ ತಯಾರಿಸುವ ಕ್ರಮ ಹಾಗೂ ಬೇಧಿ ಸಂದರ್ಭದಲ್ಲಿ ಓ.ಆರ್.ಎಸ್. ಮತ್ತು ಝಿಂಕ್ ಮೂಲಕ ಉಪಚರಿಸುವ ಕ್ರಮಗಳ ಕುರಿತು ತಾಯಿಂದಿಯರಿಗೆ ತಿಳಿಸಲಾಗುತ್ತಿದೆ. ಅಲ್ಲದೆ ಕೈತೊಳೆಯುವ ಪ್ರಾತ್ಯಕ್ಷಿಕೆ ಮತ್ತು ಕೈ ತೊಳೆಯುವುದರ ಮಹತ್ವವನ್ನು ಕುರಿತು ವಿವರಿಸಲಾಗುತ್ತಿರುವುದರಿಂದ ಎಲ್ಲಾ ಮಕ್ಕಳ ತಾಯಿಂದಿರು ಈ ಯೋಜನೆಯ ಮಹತ್ವವನ್ನು ಅರಿತುಕೊಂಡು ಅನುಸರಿಸಬೇಕು. ಮೊದಲ ಆರು ತಿಂಗಳಲ್ಲಿ, ಮಗುವಿಗೆ ಕೇವಲ ತಾಯಿ ಹಾಲನ್ನು ಮಾತ್ರ ನೀಡಿರಿ. ಅಡುಗೆ ಮಾಡುವ, ಬಡಿಸುವ ಮುನ್ನ ಮತ್ತು ಮಗುವಿನ ಮಲ ಶುಚಿ ಮಾಡಿದ ನಂತರ ಕೈಗಳನ್ನು ಸೋಪು ಬಳಸಿ ತೊಳೆದುಕೊಳ್ಳಿರಿ ಎಂದರು.

ಬೀದರ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಅಹ್ಮದುದ್ದೀನ್ ಮಾತನಾಡಿ, ಅತಿಸಾರ ಬೇದಿಯಾಗುವಾಗ ಮತ್ತು ನಂತರ ತಾಯಿ ಹಾಲು, ದ್ರಾವಣಗಳು ಹಾಗೂ ಹೆಚ್ಚುವರಿ ಪೌಷ್ಟಿಕ ಆಹಾರ ನೀಡುವುದನ್ನು ಮುಂದುವರೆಸಲು ತಿಳಿಸಿದರು. ಮಕ್ಕಳ ತಜ್ಞರಾದ ಡಾ. ಜಗದೀಶ ಕೋಟೆ ಮಾತನಾಡಿ, ಮಕ್ಕಳಿಗೆ ವಯಸ್ಸಿಗನುಗುಣವಾಗಿ ಲಸಿಕೆಯನ್ನು ಪಡೆದುಕೊಳ್ಳಬೇಕು. ಲಸಿಕೆ ಹಾಕಿಸುವುದರ ಮೂಲಕ ಮಾರಕ ರೋಗಗಳಿಂದ ತಡೆಗಟ್ಟಬಹುದು ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗ ಡಾ. ಶಿವಶಂಕರ.ಬಿ, ಮಕ್ಕಳ ತಜ್ಞರಾದ ಡಾ. ಶಾಂತಲಾ ಕೌಜಲಗಿ, ಬೀದರ ಪ್ರ.ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಅನಿತಾ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ಉಮೇಶ ಬಿರಾದರ, ಜಿಲ್ಲಾ ಕಾರ್ಯಕ್ರಮ ಸಂಯೋಜಕ ಶಿವಶಂಕರ ಬೇಮಳಗಿ, ಲೋಕೇಶ ಐ.ಎಫ್.ಎಂ, ಗಂಗಾಧರ ಕಾಂಬಳೆ ಸಿ.ಹೆಚ್.ಓ, ಭಾಗ್ಯಲಕ್ಷ್ಮಿ ?? ಡಿ.ಎನ್.ಓ, ಅಶೋಕ, ವಿನಾಯಕ, ದೇವಿದಾಸ, ಚನ್ನಬಸವ, ಸನ್ನಿಪಾಲ್ ಸೇರಿದಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿವಿಧ ಅಧಿಕಾರಿ, ಸಿಬ್ಬಂದಿಗಳು ಹಾಗೂ ಮಕ್ಕಳ ತಾಯಿಂದಿರು ಉಪಸ್ಥಿತರಿದ್ದರು.ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಸಂಗಪ್ಪ ಕಾಂಬಳೆ ನಿರೂಪಣೆ ಹಾಗೂ ವಂದನಾರ್ಪಣೆ ನಿರ್ವಹಿಸಿದರು.

# ಸಣ್ಣ ಸಣ್ಣ ವ್ಯಾಪಾರಿಗಳಿಗೆ ಗ್ಯಾರಂಟಿಯಿಲ್ಲದೇ ಸಾಲ:ಡಾ.ಬಸವಲಿಂಗ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ


ಕಮಲನಗರ:ಜೂ.18:ಯಾರಿಗೆ ರಾಷ್ಟೀಕ್ರತ ಬ್ಯಾಂಕ್‌ಗಳು ಸಾಲ ನೀಡುವುದಿಲ್ಲವೋ, ಅಂತಹ ಅಗತ್ಯವುಳ್ಳವರಿಗೆ ಯಾವುದೇ ಗ್ಯಾರಂಟಿಯಿಲ್ಲದೇ ಡಾ.ಚನ್ನಬಸವಪಟ್ಟದ್ದೇವರ ಬ್ಯಾಂಕ್ ಸಾಲ ನೀಡಲಿದೆ ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷರಾದ ನಾಡೋಜ ಶ್ರೀ ಡಾ.ಬಸವಲಿಂಗ ಪಟ್ಟದ್ದೇವರು ನುಡಿದರು.ಪಟ್ಟಣದ ದಾನಾ ಕಾಂಪ್ಲೆಕ್ಸ್‌ನಲ್ಲಿ ಮಂಗಳವಾರ ಡಾ.ಚನ್ನಬಸವ ಪಟ್ಟದ್ದೇವರು ಪತ್ತಿನ ಸಹಕಾರ ಸಂಘದ ನೂತನ ಶಾಖೆಯ ಉದ್ಘಾಟನಾ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಬುಟ್ಟಿನೇಯುವವರಿಗೆ, ಚಪ್ಪಲಿ ಹೊಲಿಯುವವರಿಗೆ, ಕ್ಷೌರಿಕರಿಗೆ, ಸಣ್ಣಸಣ್ಣ ವ್ಯಾಪಾರಿಗಳಿಗೆ ದೊಡ್ಡ ದೊಡ್ಡ ಬ್ಯಾಂಕ್‌ಗಳು ಸಾಲ ನೀಡುವುದಿಲ್ಲ. ಅಂಥವರನ್ನು ಗುರುತಿಸಿ ಪ್ರಥಮ ಆದ್ಯತೆ ಮೇರೆಗೆ ಪಟ್ಟದ್ದೇವರ ಬ್ಯಾಂಕ್ ಸಾಲ ನೀಡಲಿದೆ ಎಂದರು.

ದಿವ್ಯ ನೇತೃತ್ವ ವಹಿಸಿದ್ದ ಭಾಲ್ಕಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು ಮಾತನಾಡಿ, ದೇಶದ ಆರ್ಥಿಕ ಅಭಿವೃದ್ಧಿಯಲ್ಲಿ ಬ್ಯಾಂಕ್‌ಗಳ ಪಾತ್ರ ಹಿರಿದು. ವ್ಯಾಪಾರಿಗಳ ಅನ್ನದಾತರ ಸೇರಿದಂತೆ ಜನ ಸಾಮಾನ್ಯರ ಆರ್ಥಿಕ ಬೆಳವಣಿಗೆಗೆ ಡಾ.ಚನ್ನಬಸವ ಪಟ್ಟದ್ದೇವರ ಬ್ಯಾಂಕ್ ಸದಾ ಸಿದ್ಧವಿದೆ ಎಂದರು.

ಬ್ಯಾಂಕಿನ ಅಧ್ಯಕ್ಷ ಡಿ.ಕೆ ಸಿದ್ರಾಮ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಳೆದ 19 ವರ್ಷಗಳಲ್ಲಿ ಬ್ಯಾಂಕ್ ನೂರಾರು ಕೋಟಿ ವಹಿವಾಟು ಮಾಡಿದೆ. ಭಾಲ್ಕಿ, ಔರಾದ್, ಬೀದರ್‌ನಲ್ಲಿ ಹತ್ತಾರು ಕೋಟಿ ಉಳಿತಾಯ ಠೇವಣಿ ಇರಿಸಲಾಗಿದೆ. ಕೋಟ್ಯಾಂತರ ರೂಪಾಯಿ ಸಾಲ ನೀಡಲಾಗಿದ್ದು, ಶೇ.99ರಷ್ಟು ವಸೂಲಿ ಮಾಡಿದ ಜಿಲ್ಲೆಯ ಚೊಚ್ಚಲ ಬ್ಯಾಂಕ್ ಎಂಬ ಹೆಸರು ಗಳಿಸಿದೆ ಎಂದರು.

ಬ್ಯಾಂಕ ಸಿಇಒ ಗಣಪತಿ ಬಾವಗೆ ಪ್ರಾಸ್ತಾವಿಕವಾಗಿ ಮಾತನಾಡಿದರು.ಗ್ರಾಪಂ ಅಧ್ಯಕ್ಷೆ ಸುಶೀಲಾ ಸಜ್ಜನಶೆಟ್ಟಿ, ಜೈರಾಜ ಖಂಡ್ರೆ, ರಾಜಶೇಖರ ಅಷ್ಟೂರೆ, ಶರದ ಸಿರ್ಸೆ, ಬಂಡೆಪ್ಪ ಕಂಟೆ, ರವೀಂದ್ರ ಮೀಸೆ, ಪ್ರಕಾಶ ಘೂಳೆ, ತಮ್ಮಣ್ಣ ದೇಗಲವಾಡೆ, ಮನ್ಮಥಪ್ಪ ಬಿರಾದಾರ, ರೇಖಾ ಮಹಾಜನ, ಅನಿಲಕುಮಾರ ಹಾಲಕುಡೆ, ಶರಣಪ್ಪ ಬಿರಾದಾರ, ಸುರೇಶ ಸೊಲ್ಲಾಪುರೆ, ರಾಜಕುಮಾರ ಬಿರಾದಾರ, ಪ್ರಶಾಂತ ಮಠಪತಿ, ಅಶೋಕ ಪಾಟೀಲ್, ಗುರುಶಾಂತ ಶಿವಣಕರ, ಚನ್ನಬಸವ ಘಾಳೆ, ಅವಿನಾಶ ಶಿವಣಕರ, ಕಲ್ಲೇಶ ಉದಗಿರೆ, ಡಾ.ವಿಶ್ವನಾಥ ಚಿಕಮುರ್ಗೆ ಇತರರಿದ್ದರು.ವಿರಣ್ಣ ಕುಂಬಾರ ಸ್ವಾಗತಿಸಿದರು. ಜಗನ್ನಾಥ ಚಿಟಮೆ ವಂದಿಸಿದರು. ದೀಪಕ ಠಮಕೆ ನಿರೂಪಣೆ ಮಾಡಿದರು.

# ಬೆಂಗಳೂರು, ಬೆಳಗಾವಿಗೆ ಕಲ್ಯಾಣ ರಥ ಬಸ್ ಓಡಿಸಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 18 : ಬೀದರನಿಂದ ರಾಜಧಾನಿ ಬೆಂಗಳೂರು ಹಾಗೂ ಬೆಳಗಾವಿಗೆ ಕಲ್ಯಾಣ ರಥ ಬಸ್ ಸಂಚಾರ ಆರಂಭಿಸಬೇಕು ಎಂದು ಕನ್ನಡ ಸೇನೆ ಕರ್ನಾಟಕ ಸಂಘಟನೆ ಒತ್ತಾಯಿಸಿದೆ.

ಸಂಘಟನೆಯ ಪದಾಧಿಕಾರಿಗಳು ನಗರದಲ್ಲಿ ಬುಧವಾರ ಪೌರಾಡಳಿತ ಹಾಗೂ ಹಜ್ ಖಾತೆ ಸಚಿವ ರಹೀಂಖಾನ್ ಅವರಿಗೆ ಬರೆದ ಮನವಿ ಪತ್ರವನ್ನು ಸಚಿವರ ಕಚೇರಿ ಸಿಬ್ಬಂದಿಗೆ ಸಲ್ಲಿಸಿದರು.

ಬೀದರನಿಂದ ಬೆಂಗಳೂರು ಹಾಗೂ ಬೆಳಗಾವಿಗೆ ಪ್ರಯಾಣ ಬೆಳೆಸುವವರ ಸಂಖ್ಯೆ ಅಧಿಕ ಇದೆ. ಹೀಗಾಗಿ ಎರಡೂ ನಗರಗಳಿಗೆ ಅತ್ಯಾಧುನಿಕ ಸೌಲಭ್ಯವುಳ್ಳ ಬಸ್ ಸಂಚಾರ ಶುರು ಮಾಡಿದರೆ ಪ್ರಯಾಣಿಕರಿಗೆ ಅನುಕೂಲವಾಗಲಿದೆ ಎಂದು ಸೇನೆಯ ಬೀದರ್ ತಾಲ್ಲೂಕು ಘಟಕದ ಅಧ್ಯಕ್ಷ ರಾಜಶೇಖರ ಮಂಗಲಪೇಟೆ ಹೇಳಿದರು.

ಕಲ್ಯಾಣ ರಥ ಬಸ್ ಸಂಚಾರ ಪ್ರಾರಂಭಿಸಲು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ಸೂಚಿಸಬೇಕು ಎಂದು ಆಗ್ರಹಿಸಿದರು.

ಸೇನೆಯ ತಾಲ್ಲೂಕು ಘಟಕದ ಪದಾಧಿಕಾರಿಗಳು ಇದ್ದರು.

## ಕೊಪ್ಪಳ ಜಿಲ್ಲೆಯ ನೂತನ ಜಿಲ್ಲಾಧಿಕಾರಿಗಳಾಗಿ ಸುರೇಶ ಬಿ. ಇಟ್ನಾಳ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜೂ.18: ಕೊಪ್ಪಳ ಜಿಲ್ಲೆಯ ನೂತನ ಜಿಲ್ಲಾಧಿಕಾರಿಗಳಾಗಿ ಸುರೇಶ ಬಿ. ಇಟ್ನಾಳ ಅವರು ಬುಧವಾರ ಅಧಿಕಾರ ಸ್ವೀಕರಿಸಿದರು. ನಿರ್ಗಮಿತ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ನೂತನ ಡಿಸಿ ಅವರಿಗೆ ಅಧಿಕಾರಿ ಹಸ್ತಾಂತರಿದರು.

ಕರ್ನಾಟಕ ಕೇಡರ್ 2016ರ ಐಎಎಸ್ ಬ್ಯಾಚನ ಅಧಿಕಾರಿಯಾದ ಸುರೇಶ ಬಿ. ಇಟ್ನಾಳ ಅವರು ಮೂಲತಃ ಕರ್ನಾಟಕದವರಾಗಿದ್ದು,ಅವರು ಈ ಮೊದಲು ಕೊಪ್ಪಳ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಅಪರ ಜಿಲ್ಲಾಧಿಕಾರಿಯಾಗಿ, ಬೆಳಗಾವಿ ಅಧಿವೇಶನದ ವಿಶೇಷಾಧಿಕಾರಿಯಾಗಿ, ಹುಬ್ಬಳ್ಳಿ ಧಾರವಾಡ ಮಹಾನಗರಪಾಲಿಕೆ ಆಯುಕ್ತರಾಗಿ ಕಾರ್ಯ ನಿರ್ವಹಿಸಿದ್ದಾರೆ. ನಂತರ ಧಾರವಾಡ ಮತ್ತು ದಾವಣಗೆರೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದು, ಸದ್ಯ ಕೊಪ್ಪಳ ಜಿಲ್ಲೆಯ ನೂತನ ಜಿಲ್ಲಾಧಿಕಾರಿಗಳಾಗಿ ಅಧಿಕಾರಿ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಕಚೇರಿಯ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಪಾಲಕರು ಶಿಕ್ಷಕರಿಗೆ ಸಹಕಾರ ನೀಡಿದಾಗ ಮಾತ್ರ ಗುಣಾತ್ಮಕ ಶಿಕ್ಷಣ ನೀಡಲು ಸಾಧ್ಯ : ಶಿವಪ್ಪ ಉಪ್ಪಾರ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕನೂರ ತಾಲೂಕಿನ ಸಿದ್ನೇಕೊಪ್ಪ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಸುಮಾರು ಎರಡೂವರೆ ವರ್ಷಗಳ ನಂತರ ಶಾಲಾ ಸುಧಾರಣಾ ಸಮಿತಿ ರಚನೆಯಾಗಿದ್ದು ಈ ಸಂದರ್ಭದಲ್ಲಿ ಶಿವಪ್ಪ ಉಪ್ಪಾರ ಮಾತನಾಡುತ್ತಾ ಸತತ ನಾಲ್ಕು ಬಾರಿ ಪ್ರಯತ್ನದ ನಂತರ ಶಾಲೆಯಲ್ಲಿ ಶಾಲಾ ಸುಧಾರಣಾ ಸಮಿತಿ ರಚನೆಯಾಗಿದ್ದು ನೂತನವಾಗಿ ರಚನೆಗೊಂಡ ಸಮಿತಿಯು ಸರ್ಕಾರದ ಅನುದಾನಗಳನ್ನು ಸದ್ಬಳಕೆ ಮಾಡಿಕೊಂಡು ಶಾಲಾ ಅಭಿವೃದ್ಧಿಗೆ ಶ್ರಮಿಸಬೇಕು ಹಾಗೂ ಶಾಲೆಯಲ್ಲಿ ಎಲ್ಲಾ ರೀತಿಯ ಪರಿಣಿತಿ ಹೊಂದಿದ ಶಿಕ್ಷಕರ ಜೊತೆ ಸರ್ಕಾರದ ಹಲವಾರು ಸೌಲಭ್ಯಗಳು ಜಾರಿಯಲ್ಲಿದ್ದು ಅವುಗಳನ್ನು ವಿದ್ಯಾರ್ಥಿಗಳಿಗೆ ತಲುಪಿಸುವಲ್ಲಿ ನ್ಯಾಯಯುತ ಕಾರ್ಯ ನಿರ್ವಹಿಸಬೇಕು. ಜೊತೆಗೆ ಪಾಲಕರ ಸಭೆ ನಡೆಸಿ ಪಾಲಕರ ಜೊತೆ ಬಾಂಧವ್ಯ ವೃದ್ಧಿಸಿಕೊಂಡು ಪಾಲಕರು ಶಿಕ್ಷಕರಿಗೆ ಸಹಕಾರ ನೀಡಿದ ಮಾತ್ರ ಗುಣಾತ್ಮಕ ಶಿಕ್ಷಣ ನೀಡಲು ಸಾಧ್ಯ ಎಂದು ಹೇಳಿದರು.



ಶಾಲಾ ಸುಧಾರಣಾ ಸಮಿತಿ ರಚನೆಯ ಜವಾಬ್ದಾರಿಯನ್ನು ಹೊಂದಿದ್ದ ಯರೇಹಂಚಿನಾಳ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನೀಲಂ ಚಳಗೇರಿ ಮಾತನಾಡುತ್ತ ಶಾಲಾ ಸುಧಾರಣಾ ಸಮಿತಿಯು ಶಾಲೆಯ ಅವಿಭಾಜ್ಯ ಅಂಗವಾಗಿದ್ದು ಈ ಸಮಿತಿಯಿಂದ ರಾಜಕೀಯ ಬಹು ದೂರದಲ್ಲಿರಲಿ ಜೊತೆಗೆ ಶಾಲೆಯಲ್ಲಿ ಉತ್ತಮ ವಾತಾವರಣ ನಿರ್ಮಿಸಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಮಕ್ಕಳಿಗೆ ಒದಗಿಸಿ ಶಾಲೆಯ ಸರ್ವತೋಮುಖ ಬೆಳವಣಿಗೆಗೆ ನೂತನ ಸಮಿತಿಯು ಶ್ರಮಿಸಲಿ ಜೊತೆಗೆ ವಿದ್ಯಾರ್ಥಿಗಳಿಗೆ ಶಿಸ್ತು ಸಂಯಮ ಹಾಗೂ ಸಂಸ್ಕಾರವನ್ನು ಕಲಿಸುತ್ತಾ ಪ್ರತಿಯೊಬ್ಬರ ಸ್ಥಾನಮಾನ ಅರಿತು ಕಾರ್ಯನಿರ್ವಹಿಸಲಿ. ಶಾಲೆಯಲ್ಲಿ ಪ್ರತಿಭಾವಂತ ಶಿಕ್ಷಕರಿದ್ದು ಅವರಿಗೆ ಸರಿಯಾದ ರೀತಿಯಲ್ಲಿ ಕಾರ್ಯ ನಿರ್ವಹಿಸಲು ಪಾಲಕರು ಹಾಗೂ ಸಮಿತಿಯ ಸದಸ್ಯರು ಸಹಕರಿಸಬೇಕು ಎಂದು ಹೇಳಿದರು.

ನೂತನ ಶಾಲಾ ಸುಧಾರಣಾ ಸಮಿತಿ ಅಧ್ಯಕ್ಷರಾಗಿ ಶರಣಪ್ಪ ದೇವಪ್ಪ ಲಕ್ಷಟ್ಟಿ ಹಾಗೂ ಉಪಾಧ್ಯಕ್ಷರಾಗಿ ಲಕ್ಷ್ಮಿ ಈರಪ್ಪ ತಳವಾರ ಅವಿರೋಧವಾಗಿ ಆಯ್ಕೆಗೊಂಡರು. ನೂತನ ಅಧ್ಯಕ್ಷ ಉಪಾಧ್ಯಕ್ಷರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ವೇಳೆಯಲ್ಲಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಶರಣಯ್ಯ ಹಿರೇಮಠ, ಶಾಲೆಯ ಮುಖ್ಯೋಪಾಧ್ಯಾಯ ಶೇಖರಪ್ಪ ಗದುಗಿನ, ಶಿಕ್ಷಕರಾದ ಪ್ರಕಾಶ್ ಪಾಟೀಲ, ಪೂಜಾ ಹಿರೇಮಠ, ಶಾಲಾ ಸುಧಾರಣಾ ಸಮಿತಿಯ ಸದಸ್ಯರು ಪಾಲ್ಗೊಂಡಿದ್ದರು.

# 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 18 : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಯಾದಗಿರಿ ಆಯುಷ್ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ನಗರಸಭೆ, ಯಾದಗಿರಿ ಪತಂಜಲಿ ಯೋಗ ಸಮಿತಿ ಹಾಗೂ ಸರ್ಕಾರದ ಇತರೆ ಇಲಾಖೆ ಮತ್ತು ಇತರೆ ಸಂಘ ಸಂಸ್ಥೆಗಳ ಸಹಯೋಗದಲ್ಲಿ 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು "ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ" 2025ರ ಜೂನ್ 21 ರಂದು ಬೆಳಿಗ್ಗೆ 6.30 ಗಂಟೆಗೆ ಯಾದಗಿರಿ ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯ ಆವರಣ (ಸಪ್ನಾ ಗ್ರೌಂಡ್) ದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ವಂದನಾ ಜೆ.ಗಾಳಿಯವರ ಅವರು ತಿಳಿಸಿದ್ದಾರೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ "ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ" ಕಾರ್ಯಕ್ರಮ ಉದ್ಘಾಟಿಸುವರು

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಶ್ರೀ ದಿನೇಶ ಗುಂಡೂರಾವ್ ಹಾಗೂ ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ ಅವರ ಘನ ಉಪಸ್ಥಿತಿಯಲ್ಲಿ ನೆರವೇರಿಸುವರು.

ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅಧ್ಯಕ್ಷತೆ ವಹಿಸುವರು. ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ, ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ಯಾದಗಿರಿ ನಗರಸಭೆ ಅಧ್ಯಕ್ಷರು ಕುಮಾರಿ ಲಲಿತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ವಿನಾಯಕ ಮಾಲಿ ಪಾಟೀಲ್ ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಕಾರ್ಯಕ್ರಮಕ್ಕೆ ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕ್ರೀಡಾ ಮತ್ತು ಯುವಜನ ಸಬಲೀಕರಣ ಇಲಾಖೆ, ನಗರಸಭೆ, ಸರ್ಕಾರದ ವಿವಿಧ ಇಲಾಖೆಗಳು ಹಾಗೂ ಪತಂಜಲಿ ಯೋಗ ಸಮಿತಿ, ಬಸವ ಯೋಗ ಚಾರಿಟೇಬಲ್ ಟ್ರಸ್ಟ್, ಕನ್ನಡ ಸಾಹಿತ್ಯ ಪರಿಷತ್ತು, ಮಾರವಾಡಿ ಯುವಮಂಚ್, ಯುವಾ ಬ್ರಿಗೇಡ್ ಹಾಗೂ ಇತರೆ ಸಂಘ ಸಂಸ್ಥೆಗಳು ಸರ್ವರಿಗೂ ಹಾರ್ದಿಕ ಸುಸ್ವಾಗತವನ್ನು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶುಲ್ಕ ಮರುಪಾವತಿ ಸೌಲಭ್ಯ ಪಡೆಯಲು ಅರ್ಜಿ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 18 : ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2024-25ನೇ ಸಾಲಿನ ಮೆಟ್ರಿಕ್ ನಂತರದ ಕೋರ್ಸ್ಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಕೋರ್ಸ್ಗಳಿಗೆ "ಶುಲ್ಕ ಮರುಪಾವತಿ" ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಅವಧಿ ವಿಸ್ತರಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸದಾಶಿವ ಎಂ.ನಾರಾಯಣಕರ್ ಅವರು ತಿಳಿಸಿದ್ದಾರೆ.

ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಂದ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಮನವಿ ಮಾಡಿಕೊಂಡಿರುತ್ತಾರೆ, ಹಾಗೂ ಮಾನ್ಯ ಹೈಕೋರ್ಟ್ ಮಧ್ಯಂತರ ಆದೇಶದಂತೆ ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಕೋರ್ಸ್ಗಳಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮಕ್ಕೆ ಮಾತ್ರ ಅರ್ಜಿ ಸಲ್ಲಿಸಲು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ಊ.ಊಥಣಟಚಿಣಡುಥಿ.ಇಚಿಡಿ-ಟಿಚಿಣಚಿಇಚಿ.ರಠತ.ಎಟ ನಲ್ಲಿ 2025ರ ಜೂನ್ 30ರ ವರೆಗೆ ಅರ್ಜಿ ಅವಧಿ ವಿಸ್ತರಿಸಲಾಗಿದೆ.

ಕಾರ್ಯಕ್ರಮಗಳ ವಿವರ, ವಿರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್‌ಸೈಟ್ ಛಿಥಿತಿಜ.ಇಚಿಡಿಟಿಚಿಣಚಿಇಚಿ.ರಠತ.ಎಟ ಗೆ ಭೇಟಿ ನೀಡಿ, ಇಲಾಖಾ ಸಹಾಯವಾಣಿ ದೂ.ಸಂ.8050770005ಗೆ, ಇಮೇಲ್ ಛಿಥಿತಿಜಜುಟಅಟುಟಜ@ ರಟಚುಟ.ಛಿಠಟ ನಲ್ಲಿ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್ ಠಥಣಟಚಿಣಡುಥಿಜಟಅ@ ಇಚಿಡಿಟಿಚಿಣಚಿಇಚಿ.ರಠತ.ಎಟ ನಲ್ಲಿ ದೂ.ಸಂ.1902ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ಕಾನೂನು ತರಬೇತಿ ಭತ್ಯೆ ನೀಡಲು ಅರ್ಜಿ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 18: 2025-26ನೇ ಸಾಲಿನ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ಕಾನೂನು ತರಬೇತಿ ಭತ್ಯೆ ನೀಡಲು ಅರ್ಜಿ ಅವಧಿ ವಿಸ್ತರಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸದಾಶಿವ ಎಂ.ನಾರಾಯಣಕರ್ ಅವರು ತಿಳಿಸಿದ್ದಾರೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಕೀಲರಿಗೆ ಪ್ರೋತ್ಸಾಹಧನ ಕಾರ್ಯಕ್ರಮದಡಿ ಅರ್ಹ ಕಾನೂನು ಪದವೀಧರ ಅಭ್ಯರ್ಥಿಗಳಿಂದ ಈ ಕೆಳಗಿನ ನಿಬಂಧನೆಗೊಳಪಟ್ಟು ಅರ್ಜಿ ಆಹ್ವಾನಿಸಿದೆ.

ನಿಬಂಧನೆಗಳು : ಹಿಂದುಳಿದ ವರ್ಗಗಳ ಪ್ರವರ್ಗ-1ರಲ್ಲಿ ಬರುವ ಸಮುದಾಯದ ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯವು 3.50 ಲಕ್ಷ ರೂ.ಗಳ ಒಳಗಿರಬೇಕು, ಪ್ರವರ್ಗ-2ಎ, 3ಎ, ಎಬಿ ಅಭ್ಯರ್ಥಿಗಳಿಗೆ 2.50 ಲಕ್ಷ ರೂ.ಗಳ ಆದಾಯ ಮಿತಿ ನಿಗದಿಪಡಿಸಲಾಗಿದೆ. ಅಭ್ಯರ್ಥಿ ಬಾರ್ ಕೌನ್ಸಿಲ್‌ನಲ್ಲಿ ಹೆಸರು ನೊಂದಾಯಿಸಿರಬೇಕು, ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕಡೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು ಪ್ರವರ್ಗ 1ರ ಅಭ್ಯರ್ಥಿಗಳಿಗೆ 40 ವರ್ಷ ಒಳಗಿರಬೇಕು.

ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ 38 ವರ್ಷ ಒಳಗಿರಬೇಕು, ಅಭ್ಯರ್ಥಿಯ ಅಂಗೀಕೃತ ವಿಶ್ವವಿದ್ಯಾಲಯದಿಂದ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು, ತರಬೇತಿ ಅವಧಿ ನಾಲ್ಕು ವರ್ಷ ಇರುತ್ತದೆ. ಪ್ರತಿ ಅಭ್ಯರ್ಥಿಗೆ ಮಾಹೆಯಾನ 4000 ರೂ.ಗಳ ದಂತೆ ತರಬೇತಿ ಭತ್ಯೆ ನೀಡಲಾಗುವುದು. ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಜಿ ಭರ್ತಿಮಾಡಿ 2025ರ ಜುಲೈ 1ರ ಒಳಗೆ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕಛೇರಿ ದೂ.ಸಂ.08473253742ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 30 ಗ್ರಾಮ ಪಂಚಾಯತಿಗಳಿಗೆ ಪಿಡಿಓಗಳನ್ನು ನೇಮಕ ಮಾಡಿ:ಜಯ ಕರ್ನಾಟಕ ರಕ್ಷಣಾ ಸೇನೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಾಲೂಕಿನಲ್ಲಿ ಒಟ್ಟು 30 ಗ್ರಾಮ ಪಂಚಾಯತಿಗಳಿವೆ. ಆದರೆ ಕೇವಲ 18 ಪಿಡಿಓಗಳು ಮಾತ್ರ ಕಾರ್ಯನಿರ್ವಹಿಸುತ್ತಿದ್ದಾರೆ. ಇನ್ನು ಅರ್ಧಕ್ಕಿಂತ ಹೆಚ್ಚು ಗ್ರಾಮ ಪಂಚಾಯತಿಗಳಲ್ಲಿ ಪಿಡಿಓಗಳಿಲ್ಲದೇ, ಕಾರ್ಯದರ್ಶಿಗಳೇ ಪಿಡಿಓ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ. ಇದರಿಂದಾಗಿ ತಾಲೂಕಿನ ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಕುಂಠಿತಗೊಂಡಿದೆ. ಸರ್ಕಾರದ ನಿಯಮಗಳ ಪ್ರಕಾರ ಕಾರ್ಯದರ್ಶಿ ಗ್ರೇಡ್-2 ಇವರಿಗೆ ಪಿಡಿಓ ಜವಾಬ್ದಾರಿಯನ್ನು ಕೊಡಲು ಅವಕಾಶವಿಲ್ಲ. ಆದರೆ ನಿಯಮಗಳನ್ನು ಗಾಳಿಗೆ ತೂರಿ ಗ್ರೇಡ್-2 ಕಾರ್ಯದರ್ಶಿಗಳಿಗೆ ಪಿಡಿಓ ಜವಾಬ್ದಾರಿಯನ್ನು ನೀಡಲಾಗಿದೆ. ಇದರಿಂದಾಗಿ ಪಂಚಾಯತಿಯ ಕಾರ್ಯಗಳನ್ನು ಉತ್ತಮವಾಗಿ ನಿಭಾಯಿಸಲು ಇವರಿಂದ ಸಾಧ್ಯವಾಗುತ್ತಿಲ್ಲ. 11 ಗ್ರಾಮ ಪಂಚಾಯತಿಗಳಲ್ಲಿ ಗ್ರೇಡ್-2 ಕಾರ್ಯದರ್ಶಿಗಳೇ ಪಿಡಿಓ ಕಾರ್ಯನಿರ್ವಹಿಸುತ್ತಿದ್ದಾರೆ. ಅಲ್ಲದೇ ಕಾರ್ಯದರ್ಶಿಗಳಿಗೆ ಎರಡು ಎರಡು ಗ್ರಾಮ ಪಂಚಾಯತಿಗಳನ್ನು ನೀಡಿರುವುದರಿಂದ ಬಹಳಷ್ಟು ಅವ್ಯವಹಾರಗಳು ನಡೆಯುತ್ತಿವೆ. ಇದಲ್ಲದೇ ದೇವರಭೂಪೂರು ಗ್ರಾಮ ಪಂಚಾಯತಿ ಪಿಡಿಓ ಜವಾಬ್ದಾರಿಯನ್ನು ಎಸ್‌ಡಿಎಗೆ ನೀಡಿರುವುದು ಅಧಿಕಾರಿಗಳ ಕಾರ್ಯವೈಖರಿಗೆ ಸಾಕ್ಷಿಯಾಗಿದೆ. ಇಂತಹವರಿಂದ ಗ್ರಾಮಗಳ ಅಭಿವೃದ್ಧಿಯನ್ನು ನಿರೀಕ್ಷಿಸುವುದು ಆಕಾಶಕ್ಕೆ ಏಣಿ ಇಟ್ಟಂತೆ.

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಹಳ್ಳ ಹಿಡಿದಿದ್ದು, ಸರಿಯಾಗಿ ಅನುಷ್ಠಾನವಾಗದೇ ಕೂಲಿ ಕಾರ್ಮಿಕರು ಉದ್ಯೋಗ ಸಿಗದೇ ದೂರದ ಮಹಾನಗರಗಳಿಗೆ ಗೂಳೆ ಹೋಗುತ್ತಿದ್ದಾರೆ. ಆದರೂ ಸಹ ಖಾತ್ರಿ ಯೋಜನೆಯ ವೇತನ ಪಾವತಿಯಾಗುತ್ತಿದೆ. ಹೇಳತೀರದಷ್ಟು ಅವ್ಯವಹಾರ ಖಾತ್ರಿ ಯೋಜನೆಯಲ್ಲಿ ನಡೆಯುತ್ತಿದೆ. ಗ್ರಾಮ ಪಂಚಾಯತಿ ಪ್ರತಿಯೊಂದು ಕಾಮಗಾರಿಗಳಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ತಾಂಡವಾಡುತ್ತಿದೆ. ಇದೇ ಪರಿಸ್ಥಿತಿ ಮುಂದುವರೆದರೆ ಗ್ರಾಮ ಪಂಚಾಯತಿಗಳ ಸರ್ವ ನಾಶವಾಗುತ್ತವೆ.

ಕಾರಣ ಗ್ರೇಡ್-2 ಕಾರ್ಯದರ್ಶಿಗಳಿಗೆ ವಹಿಸಿರುವ ಪಿಡಿಓ ಜವಾಬ್ದಾರಿಯನ್ನು ಹಿಂಪಡೆದು ತಾಲೂಕಿನ 30 ಗ್ರಾಮ ಪಂಚಾಯತಿಗಳಿಗೆ ಪಿಡಿಓಗಳನ್ನು ನೇಮಕ ಮಾಡಬೇಕು ಹಾಗೂ ಗ್ರಾಮ ಪಂಚಾಯತಿಗಳಲ್ಲಿ ನಡೆಯುತ್ತಿರುವ ಅವ್ಯವಹಾರಗಳನ್ನು ಉನ್ನತ ಮಟ್ಟದ ತನಿಖೆಗೆ ಒಳಪಡಿಸಿ ಅವ್ಯವಹಾರದಲ್ಲಿ ಭಾಗಿಯಾಗಿರುವವರನ್ನು ಕೂಡಲೇ ಅಮಾನತ್ತು ಮಾಡಬೇಕು ಇಲ್ಲವಾದಲ್ಲಿ ತಮ್ಮ ಕಾರ್ಯಾಲಯದ ಮುಂದೆ ಅನಿರ್ದಿಷ್ಟಾವಧಿ ಧರಣಿಯನ್ನು ಹಮ್ಮಿಕೊಳ್ಳಲಾಗುವುದು. ಜಯ ಕರ್ನಾಟಕ ರಕ್ಷಣಾ ಸೇನೆ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಹನುಮಂತ ನಾಯಕ ಅಧ್ಯಕ್ಷರು, ಪ್ರವೀಣ್‌ಕುಮಾರ್, ಪ್ರಕಾಶ್, ನಿಂಗಪ್ಪ, ಮೋಹಿದ್ದೀನ್, ರಾಯಪ್ಪ ನಾಯಕ, ಆದ್ದಪ್ಪ, ಗಗನ ನಾಯಕ, ಶಿವಾರೆಡ್ಡಿ ನಾಯಕ, ಉಮೇಶ್, ಮಲ್ಲೇಶ್ ನಾಯಕ, ಹನುಮನಗೌಡ, ಆದ್ದಪ್ಪ ನಾಯಕ, ಸೇರಿದಂತೆ ಉಪಸ್ಥಿತರಿದ್ದರು

ಬಿಡಾಡಿ ದನಗಳು, ಹಂದಿಗಳು, ನಾಯಿಗಳಿಂದ

# ಸಾರ್ವಜನಿಕರಿಗೆ ತೊಂದರೆ ಮಾಲೀಕರಿಗೆ ಎಚ್ಚರಿಕೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 18- ರಾಯಚೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮುಖ್ಯ ರಸ್ತೆಗಳಲ್ಲಿ ದನಗಳು, ಹಂದಿಗಳು ಹಾಗೂ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ಇದರಿಂದಾಗಿ ಸಾರ್ವಜನಿಕರಿಗೆ, ವಾಹನ ಸಂಚಾರಕ್ಕೆ ತೊಂದೆಯಾಗುತ್ತಿದೆ. ಕೆಲವೊಮ್ಮೆ ಇವುಗಳಿಂದಾಗಿ ರಸ್ತೆ ಅಪಘಾತಗಳು ಸಂಭವಿಸುತ್ತವೆ. ಆದ್ದರಿಂದ ದನಗಳು, ಹಂದಿಗಳು, ನಾಯಿಗಳಿಗೆ ಸಂಬಂಧಿಸಿದ ಮಾಲೀಕರು ಸಾಕಾಣಿಕೆದಾರರು ತಮ್ಮ ಸಾಕು ಪ್ರಾಣಿಗಳನ್ನು ಜಾನುವಾರುಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಬಿಡದೇ ತಮ್ಮ ವಶಕ್ಕೆ ತೆಗೆದುಕೊಂಡು ಅವುಗಳನ್ನು ಪಾಲನೆ ಮಾಡಬೇಕು.

3 ದಿನಗಳ ಗಡುವು: ದನಗಳು, ಹಂದಿಗಳು ಹಾಗೂ ನಾಯಿಗಳಿಗೆ ಸಂಬಂಧಿಸಿದ ಮಾಲೀಕರು ಹಾಗೂ ಸಾಕಣೆದಾರರು ಈ ಪತ್ರಿಕಾ ಪ್ರಕಟಣೆಯ ದಿನಾಂಕದಿಂದ ಮೂರು ದಿನಗಳೊಳಗಾಗಿ ದನಗಳು, ಹಂದಿಗಳು ಹಾಗೂ ನಾಯಿಗಳನ್ನು ತಮ್ಮ ಸುಪರ್ದಿಗೆ ಪಡೆಯಬೇಕು. ಹಾಗೊಂದು ವೇಳೆ ದನಗಳು, ಹಂದಿಗಳು ಹಾಗೂ ನಾಯಿಗಳಿಂದ ಸಂಭವಿಸಿದ ಅಥವಾ ಸಂಭವಿಸಬಹುದಾದ ಅನಾಹುತ/ ಅಪಘಾತಗಳಿಗೆ ಆಯಾ ಮಾಲೀಕರು ಹಾಗೂ ಸಾಕಣೆದಾರರನ್ನೇ ಹೊಣೆಯಾಗಿಸಲಾಗುವುದು. ಆದ್ದರಿಂದ ದನಗಳು, ಹಂದಿಗಳು ಹಾಗೂ ನಾಯಿಗಳನ್ನು ನಗರದಿಂದ ಹೊರವಲಯದ ಸ್ವಂತ ಒಡೆತನದ ಜಮೀನಿನಲ್ಲಿ ಸಾಕಣೆ ಮಾಡಬೇಕು. ಇದಕ್ಕೆ ತಪ್ಪಿದಲ್ಲಿ ರಾಯಚೂರ ಮಹಾನಗರ ಪಾಲಿಕೆಯಿಂದ ನಗರದಿಂದ ಹೊರಕ್ಕೆ ಸಾಗಣೆ ಮಾಡಿ ಸಾಗಣೆಯ ವೆಚ್ಚವನ್ನು ಮಾಲೀಕರು ಸಾಕಣೆದಾರರಿಂದ ಪಡೆಯಲಾಗುವುದು. ಸಾಗಣೆ ವೇಳೆ ಯಾವುದೇ ಅಪಘಾತ ಸಂಭವಿಸಿದಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ 2005ರಡಿ ಮತ್ತು ಮಹಾನಗರ ಪಾಲಿಕೆಯ ಕಾಯ್ದೆಗಳ ಪ್ರಕಾರ ಕಾನೂನುಕ್ರಮ ಕೈಗೊಳ್ಳಲಾಗುವುದು ಎಂದು ಮಹಾನಗರ ಪಾಲಿಕೆ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. 3 ದಿನಗಳು ಮೀರಿದರೆ ದಂಡ: ಹೋರಿ, ಆಕಳು ಮತ್ತು ಎಮ್ಮೆಗಳಿಗೆ 3 ದಿನಕ್ಕೆ ವಿಧಿಸುವ ದಂಡ 600 ರೂ. ನಂತರ ವಿಧಿಸುವ ದಂಡ ಪ್ರತಿ ದಿನಕ್ಕೆ 300 ರೂ.ಗಳು. ಕ್ಯಾಟಲ್ (ಜಾನುವಾರು) 3 ದಿನಕ್ಕೆ ವಿಧಿಸುವ ದಂಡ 300 ರೂ. ನಂತರ ವಿಧಿಸುವ ದಂಡ ಪ್ರತಿ ದಿನಕ್ಕೆ 50 ರೂ.ಗಳು., ಕುದುರೆಗಳಿಗೆ 3 ದಿನಕ್ಕೆ ವಿಧಿಸುವ ದಂಡ 300 ರೂ. ನಂತರ ವಿಧಿಸುವ ದಂಡ ಪ್ರತಿ ದಿನಕ್ಕೆ 50 ರೂ.ಗಳು., ಹಂದಿ ಮತ್ತು ಕತ್ತೆಗೆ 3 ದಿನಕ್ಕೆ ವಿಧಿಸುವ ದಂಡ 300 ರೂ. ನಂತರ ವಿಧಿಸುವ ದಂಡ ಪ್ರತಿ ದಿನಕ್ಕೆ 25 ರೂ.ಗಳು. ಮೇಕೆ ಮತ್ತು ಕುರಿಗೆ 3 ದಿನಕ್ಕೆ ವಿಧಿಸುವ ದಂಡ 25 ರೂ. ನಂತರ ವಿಧಿಸುವ ದಂಡ ಪ್ರತಿ ದಿನಕ್ಕೆ 25 ರೂ.ಗಳನ್ನು ವಿಧಿಸಲಾಗುತ್ತಿದೆ ಎಂದು ಉಪ ಆಯುಕ್ತರು ತಿಳಿಸಿದ್ದಾರೆ.

# "ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ" ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಜೂ.18-ಪ್ರಸಕ್ತ 2025-26ನೇ ಸಾಲಿಗೆ "ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ" ಆಸಕ್ತಿಯುಳ್ಳ ಅರ್ಹ ಮಕ್ಕಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

ಕಲಬುರಗಿ ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ ಪರಿಸರ ಸಂರಕ್ಷಣೆ, ಕಲೆ ಮತ್ತು ಸಂಸ್ಕೃತಿ ಮತ್ತು ನೂತನ ಆವಿಷ್ಕಾರಗಳನ್ನು ಮಾಡಿ ಉತ್ತಮ ಸಾಧನೆ ಮಾಡಿದ 5 ವರ್ಷ ಮೇಲ್ಪಟ್ಟ ಹಾಗೂ 18 ವರ್ಷದೊಳಗಿನ ಮಕ್ಕಳನ್ನು ಗುರುತಿಸಿ ಈ ಪ್ರಶಸ್ತಿ ನೀಡಲಾಗುತ್ತಿದೆ. ಆಸಕ್ತಿಯುಳ್ಳ ಅರ್ಹ ಮಕ್ಕಳು https://awards.gov.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2025ರ ಜುಲೈ 31 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿಯನ್ನು ಹಾಗೂ ಈ ದೂರವಾಣಿ ಸಂಖ್ಯೆ 08472-243219ಗೆ ಸಂಪರ್ಕಿಸಲು ಕೋರಲಾಗಿದೆ.

## ಐಡಿಸಿಎಫ್ ತೀವ್ರತರ ಅತಿಸಾರಭೇದಿ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮ

# 5 ವರ್ಷದ ಮಕ್ಕಳನ್ನು ಗುರುತಿಸಿ ಅತೀಸಾರ ನೀರ್ಜಲಿಕರಣದಿಂದ ಉಂಟಾಗುವ ಸಾವುಗಳನ್ನು ತಡೆಗಟ್ಟುವಿಕೆ, ನಿಯಂತ್ರಣ ಕ್ರಮ

ಯಾದಗಿರಿ : ಜೂನ್ 18, : ಪ್ರತಿ ನಗರ ಮತ್ತು ಗ್ರಾಮಗಳಲ್ಲಿ 05 ವರ್ಷದ ಮಕ್ಕಳನ್ನು ಗುರುತಿಸಿ ಅತೀಸಾರ ನೀರ್ಜಲಿಕರಣದಿಂದ ಉಂಟಾಗುವ ಸಾವುಗಳನ್ನು ತಡೆಗಟ್ಟುವಿಕೆ ಮತ್ತು ನಿಯಂತ್ರಣಕ್ಕಾಗಿ ತೀವ್ರತರವಾದ ಕಾರ್ಯಕ್ರಮವನ್ನು ಕಾರ್ಯಗತಗೊಳಿಸಬೇಕಾಗಿರುತ್ತದೆ, ಎಲ್ಲಾ ಮಕ್ಕಳಿಗೆ ಓಆರ್‌ಎಸ್ ಜಿಂಕ್ ಮಾತ್ರೆಗಳನ್ನು 5 ವರ್ಷದೊಳಗಿನ ಮಕ್ಕಳಿರುವ ಮನೆಗಳಲ್ಲಿ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು ಮೇಲೆ ತಿಳಿಸಿರುವ ಓಆರ್‌ಎಸ್ ಜಿಂಕ್ ಪ್ಯಾಕೆಟ್ ಹಾಗೂ ಮಾತ್ರೆಗಳನ್ನು ಮನೆ ಮನೆಗೆ ತೆರಳಿ ವಿತರಿಸುತ್ತಿದೆ ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ್ ಬಿರಾದಾರ ಅವರು ಹೇಳಿದರು.

ಯಾದಗಿರಿ ನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ರಾಜೀವ್‌ಗಾಂಧಿ ನಗರದಲ್ಲಿ ಇಂದು ಸೋಮವಾರ ರಂದು ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ಐಡಿಸಿಎಫ್ ತೀವ್ರತರ ಅತಿಸಾರಭೇದಿ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾನತಾಡಿದರು.

ತೀವ್ರತರ ಅತಿಸಾರಭೇದಿ ನಿಯಂತ್ರಣ ಪಾಕ್ಷಿಕ ನಿಯಂತ್ರಣ ಕಾರ್ಯಕ್ರಮ ಯಾದಗಿರಿ ಜಿಲ್ಲೆಯಾದ್ಯಂತ 2025ರ ಜೂನ್ 16 ರಿಂದ ಜುಲೈ 31ರ ವರೆಗೆ ಈ ಪಾಕ್ಷಿಕ ಕಾರ್ಯಕ್ರಮ ನಡೆಯಲಿದ್ದು, ಪ್ರತಿ ನಗರ ಮತ್ತು ಗ್ರಾಮಗಳಲ್ಲಿ 05 ವರ್ಷದ ಮಕ್ಕಳನ್ನು ಗುರುತಿಸಿ ಅತೀಸಾರ ನೀರ್ಜಲಿಕರಣದಿಂದ ಉಂಟಾಗುವ ಸಾವುಗಳನ್ನು ತಡೆಗಟ್ಟುವಿಕೆ ಮತ್ತು ನಿಯಂತ್ರಣಕ್ಕಾಗಿ ತೀವ್ರತರವಾದ ಕಾರ್ಯಕ್ರಮವನ್ನು ಕಾರ್ಯಗತಗೊಳಿಸಬೇಕಾಗಿರುತ್ತದೆ, ಎಲ್ಲಾ



ಮಕ್ಕಳಿಗೆ ಓಆರ್‌ಎಸ್ ಜಿಂಕ್ ಮಾತ್ರೆಗಳನ್ನು 5 ವರ್ಷದೊಳಗಿನ ಮಕ್ಕಳಿರುವ ಮನೆಗಳಲ್ಲಿ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು ಮೇಲೆ ತಿಳಿಸಿರುವ ಓಆರ್‌ಎಸ್ ಜಿಂಕ್ ಪ್ಯಾಕೆಟ್ ಹಾಗೂ ಮಾತ್ರೆಗಳನ್ನು ಮನೆ ಮನೆಗೆ ತೆರಳಿ ವಿತರಿಸುತ್ತಾರೆ. ಅತೀಸಾರ ನೀರ್ಜಲಿಕರಣದಿಂದ ಮುಕ್ತವಾಗಿಸುವ ಕಾರ್ಯಕ್ರಮವಾಗಿರುತ್ತದೆ. ಕೈ ತೊಳೆಯುವ ಬಗ್ಗೆ ಪ್ರಾತ್ಯಕ್ಷಿಕೆಯನ್ನು ನೀಡಲ್ಲಿದ್ದಾರೆ, ಕೈಗಳನ್ನು ತೊಳೆಯುವ ಸರಿಯಾದ 6 ವಿಧಾನಗಳನ್ನು ಬಳಸಬೇಕು. ಶೌಚಾಲಯ ಬಳಸಿದ ನಂತರ, ಮಗುವಿನ ಮಲ ಶುಚಿ ಮಾಡಿದ ನಂತರ, ಆಹಾರ ಸೇವಿಸುವ

ಮೊದಲು, ಕೊಳೆ, ಕಸ ಮತ್ತು ಪ್ರಾಣಿಗಳನ್ನು ಮುಟ್ಟಿದ ನಂತರ, ಅಡುಗೆ ಮಾಡುವ ಮೊದಲು, ಮಗುವಿಗೆ ಹಾಲುಣಿಸುವ ಮೊದಲು ಸರಿಯಾದ ರೀತಿಯಲ್ಲಿ ಕೈ ತೊಳೆದುಕೊಳ್ಳುವ ಮೂಲಕ ಹಲವಾರು ಕಾಯಿಲೆಗಳಿಂದ ನಮ್ಮನ್ನು ನಾವು ರಕ್ಷಿಸಿಕೊಳ್ಳಬಹುದು. ವೈಯಕ್ತಿಕ ಸ್ವಚ್ಛತೆ, ಕುಡಿಯುವ ನೀರಿನ ಸ್ವಚ್ಛತೆ, ಆಹಾರದ ಸ್ವಚ್ಛತೆ ಪರಿಸರದ ಸ್ವಚ್ಛತೆ ಕಡೆ ಗಮಹರಿಸಬೇಕು, ಪೌಷ್ಟಿಕ ಆಹಾರ ಸೇವಿಸಬೇಕು ಸಾರ್ವಜನಿಕರು ಈ ಕಾರ್ಯಕ್ರಮದ ಸದುಪಯೋಗ ಪಡೆದು ಯಶಸ್ವಿಗೊಳಿಸಬೇಕು ತಿಳಿಸಿದರು.

ಯಾದಗಿರಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ.ಮಲ್ಲಪ್ಪ ಕೆ.ನಾಯ್ಕಲ್ ಅವರು ಮಾತನಾಡಿದರು, ನಮ್ಮ ಯಾದಗಿರಿ ಜಿಲ್ಲೆಯಲ್ಲಿ 5 ವರ್ಷದ ಒಳಗಿನ ಮಕ್ಕಳಿಗೆ ಓ.ಆರ್.ಎಸ್ ಪ್ಯಾಕೆಟ್ ಮತ್ತು ಜಿಂಕ್ ಮಾತ್ರೆಗಳನ್ನು ನೀಡಲಾಗುತ್ತದೆ. ಅತೀಸಾರ ಭೇದಿ ಚಿಕಿತ್ಸೆಯಲ್ಲಿ ಅತ್ಯಂತ ಪರಿಣಾಮಕಾರಿಯಾಗಿದೆ. ಓ.ಆರ್.ಎಸ್ ನಿರ್ಜಲೀಕರಣವನ್ನು ತಪ್ಪಿಸಲು ಭೇದಿ ನಿಲ್ಲುವವರೆಗೆ ನೀಡುವುದು. ಜಿಂಕ್ ಮಾತ್ರೆ ದಿನಕ್ಕೆ 1 ರಂತೆ 14 ದಿನಗಳವರೆಗೆ ನೀಡುವುದು. ಇದು ಶಕ್ತಿಯನ್ನು ಹೆಚ್ಚಿಸುತ್ತದೆ ಮತ್ತು 3 ತಿಂಗಳ ವರೆಗೆ ಭೇದಿಯಾಗದಂತೆ ತಡೆಯುತ್ತದೆ. ನಿಮ್ಮ ಮಗುವಿಗೆ ಓ.ಆರ್.ಎಸ್ ಮತ್ತು ಜಿಂಕ್‌ನ ಸುರಕ್ಷತೆಯನ್ನು ನೀಡಿ. ನಿರ್ಜಲೀಕರಣದ ಲಕ್ಷಣಗಳು ಈ ಕೆಳಕಂಡಂತೆ ಇರುತ್ತದೆ, ಮಗು ಚಡಪಡಿಕೆ, ರಚ್ಚೆ ಹಿಡಿಯುವಿಕೆ, ಮಂಪರು ಅಥವಾ ಎಚ್ಚರ ತಪ್ಪಿದ್ದರೆ, ಕಣ್ಣುಗಳು ಗುಳಿಬಿದ್ದಂತೆ ಕಂಡು ಬಂದರೆ, ಮಗುವು ಅತೀವ ಬಾಯಾರಿಕೆ ಅಥವಾ ನೀರು ಕುಡಿಯಲು ಸಾಧ್ಯವಾಗದ ಪರಿಸ್ಥಿತಿ ಇದ್ದರೆ (2 ತಿಂಗಳಿಗಿಂತಾ ಕಡಿಮೆ ವಯಸ್ಸಿನ ಮಕ್ಕಳಿಗೆ ಅನ್ವಯಿಸುವುದಿಲ್ಲ), ಚರ್ಮವನ್ನು ಮೆಲ್ಲಗೆ ಚಿವುಟಿದಾಗ ಅದು ತಮ್ಮ ಮೊದಲ ಸ್ಥಿತಿಗೆ ನಿಧಾನವಾಗಿ ಬರುತ್ತದೆ (ಚರ್ಮದ ಸ್ಥಿತಿಸ್ಥಾಪಕ ಶಕ್ತಿ ಕಡಿಮೆಯಾಗಿರುವಿಕೆ) ಓಆರ್‌ಎಸ್ ದ್ರಾವಣದ ಉಪಯುಕ್ತತೆಗಳು, ಶರೀರದಲ್ಲಿ ಲವಣ ಮತ್ತು ಅಗತ್ಯವಾದ ಪೋಷಕಾಂಶಗಳ ಕೊರತೆಯನ್ನು ನೀಗಿಸುತ್ತದೆ, ವಾಂತಿ ಮತ್ತು ಅತಿಸಾರ ಭೇದಿಯನ್ನು ಕಡಿಮೆ ಮಾಡುತ್ತದೆ, ನೀರಿನ ಅಂಶವನ್ನು ಮರುಪೂರಣ ಮಾಡುತ್ತದೆ ಮತ್ತು ಭೇದಿಯಿಂದ ಗುಣವು ಖರಾಗುವುದನ್ನು ತ್ವರಿತಗೊಳಿಸುತ್ತದೆ. ಜಿಂಕ್ ಮಾತ್ರೆಯ ಉಪಯುಕ್ತತೆಗಳು, ಭೇದಿಯ ಅವಧಿ ಮತ್ತು ತೀವ್ರತೆಯನ್ನು ಕಡಿಮೆ ಮಾಡುತ್ತದೆ, 3 ತಿಂಗಳ ವರೆಗೆ ಭೇದಿಯಿಂದ ರಕ್ಷಣೆ ನೀಡುತ್ತದೆ, ದೀರ್ಘಾವಧಿಯವರೆಗೆ ರೋಗ ನಿರೋಧಕ ಶಕ್ತಿಯನ್ನು ಉಂಟು ಮಾಡುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಾದ ಡಾ.ವಿನುತಾ, ಅಂಗನವಾಡಿ ಮೇಲ್ವಿಚಾರಕಿಯಾದ ಶ್ರೀಮತಿ ರಜಿಯಾ ಬೇಗಂ, ಪ್ರಭಾರಿ ಡಿಎನ್‌ಓ ಶ್ರೀಮತಿ ರತ್ನಮ್ಮ, ಪಿಹೆಚ್‌ಸಿಓ ಶ್ರೀಮತಿ ಶಹಜಾದಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಹನಮಂತಾ ರಾವ್ ಕುಲ್ಕರ್ಣಿ, ಹೆಚ್‌ಐಓ ರವಿ ಬಂಡಿ, ಶ್ರೀ ಬಾಗಣ್ಣ, ಇಮಾನ್‌ವೆಲ್ ಪಿಹೆಚ್‌ಸಿಓ ಸಿಲ್ವಿಯಾ, ಶ್ರೀ ರಾಣೋಜಿ, ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯರು, ಶಾಲಾ ಶಿಕ್ಷಕ, ಶಿಕ್ಷಕಿಯರು ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ತುಳಸಿರಾಮ ಚವ್ಹಾಣ್ ಕಾರ್ಯಕ್ರಮ ನಿರೂಪಿಸಿದರು, ವಂದಾನಾರ್ಪಣೆ ನೆರವೇರಿಸಿದರು.

ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರು, ಸದಸ್ಯರ ವಿವಿಧೆಡೆ ಭೇಟಿ–ಪರಿಶೀಲನೆ

# ಶಿಕ್ಷಣದ ಬೇಸಾಯ ಕೈಗೊಳ್ಳಿ: ಕೆ.ನಾಗಣ್ಣ ಗೌಡ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.18–ಶಾಲೆ ಮತ್ತು ವಸತಿ ನಿಲಯಗಳಲ್ಲಿ ಗ್ರಾಮೀಣ ಭಾಗದಿಂದ ಮಕ್ಕಳು ಶಿಕ್ಷಣ ಪಡೆಯಲು ಬರುತ್ತಾರೆ. ಮಕ್ಕಳಿಗೆ ಎಲ್ಲಾ ಸೌಲಭ್ಯಗಳನ್ನೊಳಗೊಂಡ ಪೂರಕ ವಾತಾವರಣ ಕಲ್ಪಿಸಬೇಕು. ಅವರಲ್ಲಿ ಶಿಕ್ಷಣದ ಬೇಸಾಯ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಡಾ.ನಾಗಣ್ಣ ಗೌಡ ಅವರು ಹೇಳಿದರು.



ಅವರು, ನಗರದ ಕೋಟೆ ಪ್ರದೇಶದ ಬಾಲಕಿಯರ ವಸತಿ ನಿಲಯ, ವಿದ್ಯಾನಗರದ ನಂದ ವಸತಿ ಶಾಲೆ, ಇಂದಿರಾನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ ಮತ್ತು ತಾಳೂರು ರಸ್ತೆಯ ಬಾಲಭಾರತಿ ಕೇಂದ್ರಿಯ ವಿದ್ಯಾಲಯಕ್ಕೆ ಭೇಟಿ ನೀಡಿ, ಅಲ್ಲಿನ ಸ್ಥಿತಿ–ಗತಿಗಳ ಪರಿಶೀಲನೆ ನಡೆಸಿ ಸೂಕ್ತ ಮಾರ್ಗದರ್ಶನ ನೀಡಿ ಅವರು ಮಾತನಾಡಿದರು.

ಮಕ್ಕಳ ಉತ್ತಮ ಜೀವನ ರೂಪಿಸಿಕೊಳ್ಳಲು ವಸತಿನಿಲಯಗಳು ಪೂರಕವಾಗಿದ್ದು, ಇಲ್ಲಿ ಅವರಿಗೆ ಸ್ನೇಹಮಯಿ ವಾತವರಣ ರೂಪಿಸಬೇಕು. ಇದರಿಂದ ಅವರು ದೇಶದ ಅಡಿಪಾಯ ಆಗುತ್ತಾರೆ ಎಂದರು.

ಕೋಟೆ ಪ್ರದೇಶದಲ್ಲಿನ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ನಂತರದ ಬಾಲಕಿಯರ ವಸತಿ ನಿಲಯದಲ್ಲಿ ಸುಮಾರು 400 ಕ್ಕೂ ಹೆಚ್ಚು ವಿದ್ಯಾರ್ಥಿಗಳಿದ್ದು, ನಿರ್ವಹಣೆಯೂ ಅಷ್ಟೇ ಸೂಕ್ತವಾಗಿರಬೇಕು. ವಸತಿನಿಲಯದಲ್ಲಿ ಸ್ವಚ್ಛತೆ, ಶೌಚಾಲಯಗಳ ಶುಚಿತ್ವ, ಗುಣಮಟ್ಟದ ಉಟೋಪಚಾರ ಮತ್ತು ಹೆಣ್ಣುಮಕ್ಕಳಿಗೆ ಅಗತ್ಯ ಸ್ಯಾನಿಟರ್ ಪ್ಯಾಡ್ಸ್ ವಿತರಣೆ ಮಾಡಬೇಕು ಎಂದು ನಿಲಯಪಾಲಕರಿಗೆ ಸೂಚಿಸಿದರು.

ವಸತಿನಿಲಯಗಳಲ್ಲಿ ಒಂದೆಡೆ ಎಲ್ಲರಿಗೂ ಗೋಚರಿಸುವಂತೆ ಗೋಡೆಯ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ನ್ನು ದೊಡ್ಡದಾಗಿ ಬರೆಸಬೇಕು. ಪೋಕ್ಸೋ ಮತ್ತು ಬಾಲ್ಯ ವಿವಾಹ ಕುರಿತಂತೆ ನೀತಿ ಶಿಕ್ಷಣ ಹೇಳಬೇಕು. ಮುಖ್ಯವಾಗಿ ಹೆಣ್ಣುಮಕ್ಕಳ ವಸತಿನಿಲಯಗಳಲ್ಲಿ ಮಕ್ಕಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಹೇಳಿದರು.

ಅನುತ್ತೀರ್ಣರಾದ ಮಕ್ಕಳ ಬಗ್ಗೆ ನಿಗಾವಹಿಸಬೇಕು. ಅವರು ವಿದ್ಯಾಭ್ಯಾಸ ಮುಂದುವರೆಸುತ್ತಿದ್ದಾರೆಯೇ?,ಅಥವಾ ಬಾಲ್ಯ ವಿವಾಹವಾಗಿದ್ದಾರೆಯೇ? ಎಂಬುದನ್ನು ಪರಿಶೀಲಿಸಿಕೊಳ್ಳಬೇಕು. ಅನುತ್ತೀರ್ಣರಾಗಿದ್ದಲ್ಲಿ, ಬಾಲ್ಯವಿವಾಹ ನಡೆಯುವ ಸಾಧ್ಯತೆ ಹೆಚ್ಚು ಇರುತ್ತದೆ. ಕಠಿಣ ಎನಿಸುವ ವಿಷಯಗಳ ಕುರಿತು ಮಕ್ಕಳಿಗೆ ಹೆಚ್ಚಿನ ಬೋಧನೆಗೆ ಶಿಕ್ಷಕರು ಮುತುವರ್ಜಿ ವಹಿಸಲು ತಿಳಿಸಬೇಕು ಎಂದರು.

ವಸತಿನಿಲಯದಲ್ಲಿ ಸಿಬ್ಬಂದಿ ಕೊರತೆಯಿರುವುದರಿಂದ, ಅಗತ್ಯ ಸಿಬ್ಬಂದಿ ನೇಮಕಕ್ಕಾಗಿ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಪತ್ರ ಬರೆಯಿರಿ; ಈ ಕುರಿತು ಆಯುಕ್ತರ ಜೊತೆ ಚರ್ಚಿಸಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದರು.

***ಸರ್ಕಾರದ ನಿಯಮಗಳಡಿ ಕಡ್ಡಾಯವಾಗಿ ಕಾರ್ಯನಿರ್ವಹಿಸಬೇಕು:***

ಬಳಿಕ ವಿದ್ಯಾನಗರದ ನಂದ ವಸತಿ ಶಾಲೆಗೆ ಭೇಟಿ ನೀಡಿದ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಡಾ.ನಾಗಣ್ಣ ಗೌಡ ಅವರು ಸರ್ಕಾರವು ಕಾಲ–ಕಾಲಕ್ಕೆ ಹೊರಡಿಸುವ ಸುತ್ತೋಲೆ ನಿಯಮಗಳನ್ವಯ ಖಾಸಗಿ ಶಾಲೆಗಳು ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ಖಾಸಗಿ ಶಾಲೆಗಳು ಆಡಳಿತಾತ್ಮಕ, ಅಕಾಡೆಮಿ ಮತ್ತು ಮಕ್ಕಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಕಾರ್ಯನಿರ್ವಹಿಸಬೇಕು. ಶಾಲಾ ಶುಲ್ಕಗಳ ಕುರಿತು ಪಾರದರ್ಶಕತೆ ಕಾಯ್ದುಕೊಳ್ಳಬೇಕು. ಶುಲ್ಕಗಳ ಸುತ್ತೋಲೆಗಳನ್ನು ಹೊರಡಿಸಬೇಕು. ಇವುಗಳ ಪ್ರತಿ ಡಿಡಿಪಿಐ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಗಳಿಗೆ ನೀಡಬೇಕು. ಶುಲ್ಕ ವಸೂಲಿ ಸಂಬಂಧಿಸಂತೆ ಪೋಷಕರ ಜೊತೆ ಚರ್ಚಿಸಬೇಕು. ಮಕ್ಕಳ ಗಮನಕ್ಕೆ ತಂದು, ವಿನಾಕಾರಣ ಕಿರುಕುಳ ನೀಡಿದಲ್ಲಿ ಅದು ಅಪರಾಧವಾಗುತ್ತದೆ ಎಂದು ತಿಳಿಸಿದರು.

ಶಾಲೆಯಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆಗಳಾದ 1098 ಮತ್ತು 112 ಬರೆಸಬೇಕು. ಅಹವಾಲು ಪೆಟ್ಟಿಗೆಯನ್ನು ಸಿಸಿ ಟಿವಿ ಇರುವ ಜಾಗದಲ್ಲಿ ಅಳವಡಿಸಿ ಅವರಿಗೆ ದೂರು ನೀಡಲು ಭಯ ಪಡುವ ಹಾಗೆ ಮಾಡಬಾರದು. ಬೋಧನೆಗೆ ನೇಮಿಸಿಕೊಳ್ಳುವ ಶಿಕ್ಷಕರ ಅರ್ಹತೆ, ಸೇವಾನುಭಾವ ಹಾಗೂ ಅರ್ಹತೆಗಳು ಕಡ್ಡಾಯವಾಗಿರಬೇಕು. ಮುಖ್ಯವಾಗಿ ಮಕ್ಕಳೊಂದಿಗೆ ಕಾರ್ಯನಿರ್ವಹಿಸುವ ಪ್ರತಿಯೊಬ್ಬರ ಕುರಿತು ಪೊಲೀಸ್ ಪರಿಶೀಲನೆಯಾಗಿರಬೇಕು ಎಂದು ಸೂಚಿಸಿದರು.

ಮಕ್ಕಳ ಭವಿಷ್ಯ ರೂಪುಗೊಳ್ಳುವಲ್ಲಿ ದೈಹಿಕ ಶಿಕ್ಷಣವು ಒಂದಾಗಿದ್ದು, ಶಾಲೆಗಳಲ್ಲಿ ದೈಹಿಕ ಶಿಕ್ಷಣ ಮತ್ತು ಕ್ರೀಡಾ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು. ಒಂದು ಮಗು ಕನಿಷ್ಠ 45 ನಿಮಿಷಗಳ ವರೆಗೆ ಆಟಗಳಲ್ಲಿ ತೊಡಗಿಸಿಕೊಂಡರೆ ಆ ಮಗು ದೈಹಿಕ ಮತ್ತು ಮಾನಸಿಕವಾಗಿ ಸದೃಢನಾಗುತ್ತಾನೆ. ಹಾಗಾಗಿ ವಾರದಲ್ಲಿ ಕನಿಷ್ಠ 5 ತರಗತಿಗಳನ್ನು ದೈಹಿಕ ಶಿಕ್ಷಣಕ್ಕಾಗಿ ಮೀಸಲಿರಿಸಬೇಕು ಎಂದರು.

ಮುಖ್ಯವಾಗಿ ಪ್ರಾಂಶುಪಾಲರು, ಶಿಕ್ಷಕರು ಮಕ್ಕಳೊಂದಿಗೆ ಸಂವಾದ ನಡೆಸಬೇಕು. ಇದರಿಂದ ಅವರ ಅಹವಾಲುಗಳು ಬೆಳಕಿಗೆ ಬರುತ್ತವೆ. ಶಾಲೆಗಳು ಮಕ್ಕಳಿಗೆ ಸ್ನೇಹಮಯಿಯಾಗಿರಬೇಕು. ನಿಯಮಿತವಾಗಿ ಪೋಷಕರ ಸಭೆ ನಡೆಸಬೇಕು. ಶಾಲಾ ವಾಹನಗಳು ಸುಸ್ಥಿತಿಯಲ್ಲಿರಬೇಕು. ಈ ಕುರಿತು ವಾಹನ ಚಾಲಕರಿಗೆ ಸೂಕ್ತ ನಿರ್ದೇಶನ ನೀಡಬೇಕು. ಶಾಲೆ ನಡೆಸುವ ಅರ್ಹತೆ ನವೀಕರಣ ಮಾಡಿಕೊಳ್ಳುತ್ತಿರಬೇಕು. ಸಂಜೆ ವೇಳೆಯಲ್ಲಿ ಪದವಿ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿಗಳಿಗಾಗಿ ಕೋಚಿಂಗ್ ನಡೆಸುತ್ತಿದ್ದರೆ ಕಡ್ಡಾಯವಾಗಿ ಸರ್ಕಾರದಿಂದ ಅನುಮತಿ ಪಡೆಯಬೇಕು ಎಂದು ತಿಳಿಸಿದರು.

ಬಳಿಕ ಅಧ್ಯಕ್ಷರು ಇಂದಿರಾನಗರ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗೆ ಭೇಟಿ ನೀಡಿ, ಅಲ್ಲಿನ ಶಾಲೆಯ ಮೈದಾನ ಸೂಕ್ತ ನಿರ್ವಹಣೆಗೆ ನಿರ್ದೇಶನ ನೀಡಿದರು. ಶಾಲೆಗಳನ್ನು ಪರೀಕ್ಷೆ ಮೌಲ್ಯಮಾಪನ, ಚುನಾವಣೆ ಮತ್ತು ಇತರೆ ಕಾರ್ಯಗಳಿಗಾಗಿ ಬಳಸಿಕೊಂಡಾಗ, ಮೂಲ ಸ್ಥಿತಿಯಲ್ಲಿದ್ದಂತೆಯೇ ಇರಬೇಕು ಎಂದು ಅವರಿಗೆ ತಿಳಿಸಬೇಕು, ಇದರಿಂದ ಶಾಲೆಗಳು ಅಂದಗೆಡುವುದಿಲ್ಲ ಮತ್ತು ಯಾವುದೇ ಶಾಲಾ ವಸ್ತುಗಳು ಹಾನಿಯಾಗುವುದಿಲ್ಲ ಎಂದರು.

ಶಾಲೆಯಲ್ಲಿ ನಲಿ–ಕಲಿ ಕಲಿಕೆಯು ಗುಣಮಟ್ಟದ್ದಾಗಿದ್ದು, ಇನ್ನೂ ಹೆಚ್ಚಿನ ಮಕ್ಕಳನ್ನು ಶಾಲೆಗೆ ದಾಖಲಿಸಲು ಕ್ರಮವಹಿಸಬೇಕು. ಈ ಕುರಿತು ಹತ್ತಿರದ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸುವಂತೆ ಸಮನ್ವಯತೆ ಕೈಗೊಳ್ಳಬೇಕು ಎಂದು ಹೇಳಿದರು.

ಇದೇ ವೇಳೆ ಶಾಲೆಯ 'ನಲಿ–ಕಲಿ' ತರಗತಿಯೊಂದರ ಮಕ್ಕಳು 'ನಲಿಯೋಣ ಬಾ–ಕಲಿಯೋಣ ಬಾ' ಎಂಬ ಗೀತೆಯನ್ನು ನೃತ್ಯದ ಮುಖಾಂತರ ಪ್ರಸ್ತುತಪಡಿಸಿದ್ದಕ್ಕೆ ಅಧ್ಯಕ್ಷ ಕೆ.ನಾಗಣ್ಣ ಗೌಡ ಅವರು ಮಕ್ಕಳನ್ನು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ವೆಂಕಟೇಶ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಬಿ.ಮಲ್ಲಿಕಾರ್ಜುನ, ಸಹಾಯಕ ನಿರ್ದೇಶಕರಾದ ಮಮತಾ, ವಸತಿ ನಿಲಯಪಾಲಕರಾದ ಉಷಾಕುಮಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ, ಬಿಇಒ ಸಿದ್ಧಲಿಂಗಮೂರ್ತಿ, ಸಿಆರ್‌ಪಿ ಸಿದ್ದಪ್ಪ, ನಂದ ವಸತಿ ಶಾಲೆಯ ಪ್ರಾಂಶುಪಾಲರಾದ ಸರೀತಾ, ಇಂದಿರಾನಗರ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಮುಖ್ಯಗುರುಗಳಾದ ಕಣುಮಕ್ಕ ಸೇರಿದಂತೆ ಇತರೆ ಅಧಿಕಾರಿಗಳು ಹಾಜರಿದ್ದರು.

## ವಸತಿ ನಿಲಯ, ಬಿಎಂಸಿಆರ್‌ಸಿ ವಿಶೇಷ ನವಜಾತ ಶಿಶುಗಳ ಆರೈಕೆ ಘಟಕಕ್ಕೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯರ ಭೇಟಿ–ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.18–ನಗರದ ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದ ಎನ್‌ಆರ್‌ಸಿ ಘಟಕ, ವಿಶೇಷ ನವಜಾತ ಶಿಶುಗಳ ಆರೈಕೆ ಘಟಕ ಹಾಗೂ ಹೆರಿಗೆ ವಾರ್ಡ್ಗೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ್ ಕೋಸಂಬೆ, ಡಾ.ತಿಪ್ಪೇಸ್ವಾಮಿ ಕೆ.ಟಿ ನೇತೃತ್ವದ ತಂಡ ಬುಧವಾರ ಭೇಟಿ ನೀಡಿ ಪರಿಶೀಲಿಸಿದರು.



ಜಿಲ್ಲೆಯಲ್ಲಿ ಕಳೆದ ಐದು ತಿಂಗಳಲ್ಲಿ ನೂರಕ್ಕೂ ಹೆಚ್ಚು ನವಜಾತ ಶಿಶುಗಳ ಮೃತಪಟ್ಟಿರುವುದು ಕಳವಳಕಾರಿ ಸಂಗತಿಯಾಗಿದ್ದು, ವೈದ್ಯರು ಇದನ್ನು ಗಂಭೀರವಾಗಿ ಪರಿಗಣಿಸಬೇಕು. ನವಜಾತ ಶಿಶುಗಳ ಸಾವಿಗೆ ನಿಖರವಾಗಿ ಕಾರಣ ತಿಳಿದು, ಪರಿಹಾರ ಕಂಡುಕೊಳ್ಳಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯ ಶಶಿಧರ್ ಕೋಸಂಬೆ ಅವರು ಸೂಚಿಸಿದರು.

ಮಕ್ಕಳ ಅಪೌಷ್ಟಿಕ ಪುನಃಶ್ಚೇತನ ಘಟಕಕ್ಕೆ ಭೇಟಿ ನೀಡಿದ ತಂಡ ದಾಖಲಾದ ಮಕ್ಕಳ ಸ್ಥಿತಿಗತಿ ವಿಚಾರಿಸಿ, ಶೌಚಾಲಯಗಳನ್ನು ಪರಿಶೀಲಿಸಿದರು. ಬಾಲ ಚೈತನ್ಯ ಯೋಜನೆಯಡಿ 23 ಮಕ್ಕಳ ದಾಖಲಾಗಿವೆ. ಆರ್‌ಬಿಎಸ್‌ಕೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಜಿಲ್ಲೆಯಲ್ಲಿರುವ ಅಪೌಷ್ಟಿಕ ಮಕ್ಕಳನ್ನು ದಾಖಲಿಸಲು ಕ್ರಮಕೈಗೊಳ್ಳಬೇಕು ಎಂದು ತಿಳಿಸಿದರು.

ಕಳೆದ ವರ್ಷ 48,569 ನವಜಾತ ಶಿಶುಗಳನ್ನು ಮಕ್ಕಳ ಚಿಕಿತ್ಸಾ ವಿಭಾಗದಲ್ಲಿ ದಾಖಲಾಗಿದ್ದವು. ಅದರಲ್ಲಿ 293 ನವಜಾತ ಶಿಶುಗಳು ವಿವಿಧ ಕಾರಣಗಳಿಂದ ಮೃತಪಟ್ಟಿವೆ. ಪ್ರಸಕ್ತ ವರ್ಷ ಜನವರಿಯಿಂದ ಏಪ್ರೀಲ್‌ವರೆಗೆ 1,119 ನವಜಾತ ಶಿಶುಗಳು ದಾಖಲಾಗಿದ್ದು, 103 ನವಜಾತ ಶಿಶುಗಳು ಮೃತಪಟ್ಟಿವೆ. ಮಕ್ಕಳ ಸಾವಿನ ಬಗ್ಗೆ ನಿಖರವಾದ ಕಾರಣ ತಿಳಿಯಬೇಕು ಎಂದು ವೈದ್ಯರಿಗೆ ನಿರ್ದೇಶನ ನೀಡಿದರು.

ಬಿಎಂಸಿಆರ್‌ಸಿ ಯ ವಿಶೇಷ ನವಜಾತ ಶಿಶುಗಳ ಆರೈಕೆ ಘಟಕ ಮತ್ತು ಹೆರಿಗೆ ವಾರ್ಡ್ನಲ್ಲಿ ಸೆಖೆ ಇದ್ದರೂ ಯಾಕೆ ಎಸಿ ಹಾಕಿಲ್ಲ ಎಂದು ವೈದ್ಯರನ್ನು ಪ್ರಶ್ನಿಸಿದರು. ಕೂಡಲೇ ಎಸಿ ಅಳವಡಿಕೆ ಸೂಚನೆ ನೀಡಿದರು. ಇದೇ ವೇಳೆ ದಾಖಲಾಗದ ಮಕ್ಕಳ ಮಾಹಿತಿ ಪಡೆದರು.

ಹೆರಿಗೆ ವಾರ್ಡ್ನಲ್ಲಿನ ಶೌಚಾಲಯ ಹಾಗೂ ಸ್ನಾನ ಗೃಹಗಳನ್ನು ಪರಿಶೀಲಿಸಿದರು. ಇಲ್ಲಿ ತಿಂಗಳಿಗೆ 700ಕ್ಕಿಂತ ಹೆಚ್ಚು ಹೆರಿಗೆ ಆಗುತ್ತಿವೆ. ಸ್ನಾನ ಗೃಹಗಳಲ್ಲಿ ಚಿಕ್ಕ ಗ್ರಾತದ ಗೀಜರ್‌ಯಿಂದ ಬರುವ ಬಿಸಿನೀರು ಬಾಣಂತಿಯರ ಸ್ನಾನಕ್ಕೆ ಸಾಕುಗುತ್ತದೆಯೇ ಎಂದು ವಿಚಾರಿಸಿದ ಅವರು ಬಾಣಂತಿಯರ ಸ್ನಾನಕ್ಕೆ ಬಿಸಿನೀರು ಕೊಡುವುದು ಕರ್ತವ್ಯವಾಗಿದೆ ಎಂದು ತಿಳಿಸಿದರು.

ಬಳಿಕ ನಗರದ ಕಪ್ಪಗಲ್ಲು ರಸ್ತೆಯ ಪರಿಶಿಷ್ಟ ಪಂಗಡದ ಮೆಟ್ರಿಕ್ ನಂತರದ ಬಾಲಕೀಯರ ವಸತಿ ನಿಲಯಕ್ಕೆ ಆಯೋಗದ ಸದಸ್ಯರು ಭೇಟಿ ನೀಡಿ ದಾಖಲಾತಿ, ಕೊಠಡಿ, ಶೌಚಾಲಯ ಸೇರಿದಂತೆ ಅಡುಗೆ ಕೋಣೆ ಪರಿಶೀಲಿಸಿದರು.

ಬಳಿಕ ಸಿರಿವಾರ ಗ್ರಾಮದ ಸರ್ಕಾರಿ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಂಜೆ ನಂತರ ಶಾಲಾ ಆವರಣದಲ್ಲಿ ಹೊರಗಿನವರು ಬಂದು ಅಹಿತಕರ ಚಟುವಟಿಕೆ ಕೈಗೊಳ್ಳುತ್ತಿರುವುದು ಸ್ಥಳೀಯರು ಗಮನಕ್ಕೆ ತಂದಿದ್ದು, ಪೊಲೀಸರು ನಿಯಮಿತವಾಗಿ ಬಿಟ್ ನಡೆಸಬೇಕು ಎಂದು ಸೂಚಿಸಿದರು.

ಇನ್ನೋರ್ವ ಸದಸ್ಯರಾದ ವೆಂಕಟೇಶ್ ಅವರು, ಅಲ್ಲೀಪುರ ಗ್ರಾಮದ ಬಳಿಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ವಸತಿ ಕಾಲೇಜು ಮತ್ತು ನಿಲಯ–ಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಡಿಎಚ್‌ಒ ಡಾ.ವೈ.ರಮೇಶ್ ಬಾಬು, ಪರಿಶಿಷ್ಟ ವರ್ಗಗಳ ಕಲ್ಯಾಣಾಕಾರಿ ದಿವಾಕರ್ ಕೆ ಶಂಕಿನದಾಸರ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಎಳೆ ನಾಗಪ್ಪ ಸೇರಿದಂತೆ ಇತರರು ಇದ್ದರು.

## ಜೂ.20 ರಂದು ಜಿಲ್ಲಾ ಮಟ್ಟದ ಜಾಥಾ ಮತ್ತು ಹದಿಹರೆಯದ ಹೆಣ್ಣುಮಕ್ಕಳ ಸಮಾವೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.02–ಿಡ್ಸ್ ಸಂಸ್ಥೆ, ಮಕ್ಕಳ ವಿಶೇಷ ಪೊಲೀಸ್ ಘಟಕ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಜೂ.20 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಬಿ.ಡಿ.ಎ.ಎ ಸಭಾಂಗಣದಲ್ಲಿ ಬಾಲ್ಯವಿವಾಹ ನಿಷೇಧ ಕಾಯ್ದೆ–2006, ಪೋ–ಕ್ಸೋ ಕಾಯ್ದೆ ಮತ್ತು ಬಾಲ ಕಾರ್ಮಿಕ ಪದ್ದತಿ ನಿಷೇದದ ಬಗ್ಗೆ ಹದಿಹರೆಯದ ಹೆಣ್ಣುಮಕ್ಕಳಿಗೆ ಜಿಲ್ಲಾಮಟ್ಟದ ಸಮಾವೇಶ ಏರ್ಪಡಿಸಲಾಗಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್. ಎನ್.ಹೊಸಮನೆ ಅವರು ಅಂ–ದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಮಟ್ಟದ ಜಾಥಾವನ್ನು ಉದ್ಘಾಟನೆ ಮಾಡುವರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ಶೋಭಾರಾಣಿ ವಿ.ಜೆ ಅವರು ಸಮಾವೇಶ ಉದ್ಘಾಟಿಸುವರು.

ರೀಡ್ಸ್ ಸಂಸ್ಥೆಯ ಅಧ್ಯಕ್ಷ ಸಿ. ತಿಪ್ಪೇಶಪ್ಪ ಅವರು ಅಧ್ಯಕ್ಷತೆ ವಹಿಸುವರು.

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ರಾಮಕೃಷ್ಣ ನಾಯಕ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಎಳೆನಾಗಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯರಾದ ಡಾ.ಹೆಚ್.ಸಿ.ರಾಘವೇಂದ್ರ, ವಕೀಲರಾದ ಶಿವಲೀಲಾ, ಸೈಬರ್ ಕ್ರೈಂ ಪೊಲೀಸ್ ಠಾಣೆಯ ಡಿ.ವೈ.ಎಸ್.ಪಿ. ಸಂತೋಷ್ ಚೌಹಾಣ್ ಸೇರಿದಂತೆ ರೀಡ್ಸ್ ಸಂಸ್ಥೆ ಸಿಬ್ಬಂದಿಗಳು ಹಾಗೂ ಮಕ್ಕಳ ವಿಶೇಷ ಘಟಕ ಸಿಬ್ಬಂದಿ ವರ್ಗ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಜೂ.20 ರಂದು ಗ್ರಾಮೀಣ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.18–ಬಳ್ಳಾರಿ ಗ್ರಾಮೀಣ ಜೆಸ್ಕಾಂ ವ್ಯಾಪ್ತಿಯ 110/11ಕೆ.ವಿಯ ಬಿಸಲಹಳ್ಳಿ ಉಪ–ಕೇಂದ್ರದ ವಿದ್ಯುತ್ ವಿತರಣಾ ಕೇಂದ್ರದ ತ್ರೈಮಾಸಿಕ ನಿರ್ವಹಣೆ ಮತ್ತು ದುರಸ್ತಿ ಕಾರ್ಯ ಕೈಗೊಳ್ಳುತ್ತಿರುವುದರಿಂದ ಹಾಗೂ 33/11ಕೆ.ವಿಯ ರೂಪನಗುಡಿ ಉಪ–ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಮಾರ್ಗಗಳಲ್ಲಿ ಜೂ.20 ರಂದು ಬೆಳಿಗ್ಗೆ 11 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬಳ್ಳಾರಿ ಗ್ರಾಮೀಣ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮೋಹನ್ ಬಾಬು ಅವರು ತಿಳಿಸಿದ್ದಾರೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಎಫ್–52 ಶಂಕರಬಂಡೆ ಐಪಿ ಫೀಡರ್ ಮಾರ್ಗದ ತಿರುಮಲನಗರ, ಶಂಕರಬಂಡೆ, ಬೂಬ್ಬುಕುಂಟೆ, ಇಬ್ರಾಹಿಂಪುರ, ಎತ್ತಿನಬೂದಿಹಾಳ್, ಬೆಂಚಿಕೊಟ್ಟಾಲ್, ಕಮ್ಮರಚೇಡು ಕೃಷಿ ಪ್ರದೇಶಗಳು.

ಎಫ್–53 ಶಂಕರಬಂಡೆ ಎನ್.ಜೆ.ವೈ ಫೀಡರ್ ಮಾರ್ಗದ ತಿರುಮಲನಗರ, ಶಂಕರಬಂಡೆ, ಬೂಬ್ಬುಕುಂಟೆ, ಇಬ್ರಾಹಿಂಪುರ, ಎತ್ತಿನಬೂದಿಹಾಳ್, ಬೆಂಚಿಕೊಟ್ಟಾಲ್ ಮಿಂಚೇರಿ, ಬುರ್ರನಾಯಕನಹಳ್ಳಿ ಗ್ರಾಮಗಳು.

ಎಫ್–54 ಬಿಸಲಹಳ್ಳಿ ಎನ್.ಜೆ.ವೈ ಫೀಡರ್ ಮಾರ್ಗದ ಬಿಸಲಹಳ್ಳಿ, ಜನತಾನಗರ, ಸೋಲಾರ್ ತಗ್ಗಿನಬೂದಿಹಾಳ್ ಗಾಮಗಳು. ಎಫ್–55 ಅಸುಂಡಿ ಐಪಿ ಫೀಡರ್ ಮಾರ್ಗದ ಬಿಸಲಹಳ್ಳಿ, ಜನತಾನಗರ, ತಗ್ಗಿನಬೂದಿಹಾಳ್, ಅಮರಾಪುರ, ಬೇವಿನಹಳ್ಳಿ, ಅಸುಂಡಿ, ಕಕ್ಕಬೇವಿನಹಳ್ಳಿ ಕೃಷಿ ಪ್ರದೇಶಗಳು.

ಎಫ್–56 ಕಮ್ಮರಚೇಡು ಎನ್.ಜೆ.ವೈ ಫೀಡರ್ ಮಾರ್ಗದ ತಲಮಾಮಿಡಿ, ಕಮ್ಮರಚೇಡು, ತಗ್ಗಿನಬೂದಿಹಾಳ್, ಅಮರಾಪುರ, ಗೋಡೆಹಾಳ್, ಬೇವಿನಹಳ್ಳಿ, ಅಸುಂಡಿ, ಕಕ್ಕಬೇವಿನಹಳ್ಳಿ, ವಿಘ್ನೇಶ್ವರ ಕ್ಯಾಂಪ್, ಧನಲಕ್ಷ್ಮೀ ಕ್ಯಾಂಪ್, ಕೆರೆ ಕ್ಯಾಂಪ್, ಮಾಳೆಗಡ್ಡೆ ಕ್ಯಾಂಪ್ ಗ್ರಾಮಗಳು. ಎಫ್–95 ರೂಪನಗುಡಿ ಐಪಿ ಫೀಡರ್ ಮಾರ್ಗದ ರೂಪನಗುಡಿ, ರಾಯಾಪುರ, ಕುಂಟನಹಾಳ್ ಕೃಷಿ ಪ್ರದೇಶಗಳು. ಎಫ್–96 ರೂಪನಗುಡಿ ಫೀಡರ್ ಎನ್.ಜೆ.ವೈ ಮಾರ್ಗದ ರೂಪನಗುಡಿ, ರಾಯಾಪುರ, ಕುಂಟನಹಾಳ್ ಗ್ರಾಮಗಳು ಸೇರಿದಂತೆ ಮುಂತಾದ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಹಾಗೂ ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ 21 ರಂದು ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.18–ಕೇಂದ್ರ ಆಯುಷ್ ಮಂತ್ರಾಲಯ, ರಾಷ್ಟ್ರೀಯ ಆಯುಷ್ ಅಭಿಯಾನ, ಆಯುಷ್ ಇಲಾಖೆ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಜಿಲ್ಲೆಯ ವಿವಿಧ ಯೋಗ ಸಂಘ–ಸಂಸ್ಥೆಗಳು ಇವರ ಸಂಯುಕ್ತಾಶ್ರಯದಲ್ಲಿ 'ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ' ಎಂಬ ಘೋಷವಾಕ್ಯದಡಿ ಜೂ.21 ರಂದು ಬೆಳಿಗ್ಗೆ 06 ಗಂಟೆಗೆ ನಗರದ ಕಪ್ಪಗಲ್ಲು ರಸ್ತೆಯ ಶೆಟ್ರ ಗುರುಶಾಂತಪ್ಪ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಆಯುಷ್ ಸೇವೆಗಳ ಸಚಿವ ದಿನೇಶ್ ಗುಂಡೂರಾವ್ ಅವರು ಘನ ಉಪಸ್ಥಿತಿ ಇರುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಆಯುಷ್ ಇಲಾಖೆಯ ಆಯುಕ್ತ ವಿಪಿನ್ ಸಿಂಗ್, ಆಯುಷ್ ಇಲಾಖೆ ಯೋಗ ಮತ್ತು ಪ್ರಕೃತಿ ಚಿಕಿತ್ಸೆಯ ಉಪನಿರ್ದೇಶಕ ಡಾ.ಹರೀಶ್ ಬಾಬು, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಡಾ.ಕಣೇಕಲ್ ಮಹಾಂತೇಶ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಎಂ.ವಿರುಪಾಕ್ಷ ಸೇರಿದಂತೆ ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಯೋಗ ಸಂಸ್ಥೆಗಳ ಪದಾಧಿಕಾರಿಗಳು, ಆಯುಷ್ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ವ್ಯಕ್ತಿ ಕಾಣೆ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.18–ಸಿರುಗುಪ್ಪ ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ಡಿಪೋ ಎದುರುಗಡೆ 15ನೇ ವಾರ್ಡ್ ಬಾಲಾಜೀ ಲೇ–ಔಟ್‌ನ ಹತ್ತಿರ ಮ್ಯಾನೇಜರ್ ಕೆಲಸ ನಿರ್ವಹಿಸುತ್ತಿದ್ದ ಅಂಬರೇಶ್. ಎಸ್ ಎನ್ನುವ 53 ವರ್ಷದ ವ್ಯಕ್ತಿ ಜೂ.14 ರಂದು ಕಾಣೆಯಾಗಿದ್ದು, ಪತ್ತೆಗೆ ಸಹಕರಿಸಬೇಕೆಂದು ಸಿರಗುಪ್ಪ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಅವರು ಮನವಿ ಮಾಡಿದ್ದಾರೆ.

**ವ್ಯಕ್ತಿಯ ಚಹರೆ:**

ಎತ್ತರ 5.10 ಅಡಿ, ಕೋಲು ಮುಖ, ಗೋದಿ ಮೈಬಣ್ಣ, ಸಾಧಾರಣ ಮೈಕಟ್ಟು ಇದ್ದು, ಮುಖದ ಎಡಭಾಗದಲ್ಲಿ ಕಪ್ಪು ಮಚ್ಚೆ ಹೊಂದಿರುತ್ತಾನೆ.

ವ್ಯಕ್ತಿಯು ಕಾಣೆಯಾದ ಸಂದರ್ಭದಲ್ಲಿ ಕ್ರೀಮ್ ಕಲರ್ ತುಂಬು ತೋಳಿನ ಅಂಗಿ, ಅರ್ಧ ತೋಳಿನ ಬಿಳಿ ಬಣ್ಣದ ಬನಿಯನ್, ಲೈಟ್ ಬ್ರೌನ್ ಕಲರಿನ ಚಿಕ್ಕ ಲೈನ್‌ಗಳಿರುವ ಪ್ಯಾಂಟ್ ಮತ್ತು ನೀಲಿ ಅಂಡರ್‌ವೇರ್ ಧರಿಸಿರುತ್ತಾನೆ. ಕನ್ನಡ, ತೆಲುಗು ಭಾಷೆ ಮಾತನಾಡುತ್ತಾನೆ.

ಮೇಲ್ಕಂಡ ಚಹರೆ ಗುರುತುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಸಿರುಗುಪ್ಪ ಪೊಲೀಸ್ ಠಾಣೆಯ ಪಿ.ಎಸ್.ಐ ದೂ:08396–220333 ಅಥವಾ ಸಿ.ಪಿ.ಐ ಸಿರುಗುಪ್ಪ ವೃತ್ತ ದೂ:08396–220003, ಸಿರುಗುಪ್ಪ ಉಪ–ವಿಭಾಗ ಡಿ.ಎಸ್.ಪಿ ದೂ:08396–276000, ಬಳ್ಳಾರಿ ಎಸ್.ಪಿ ದೂ:08392–258400 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ.20 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.18–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 110/11 ಕೆವಿಯ ಬಿಸಿಲಹಳ್ಳಿ ಮುಸ್‌ನಿಂದ ವಿದ್ಯುತ್ ಸರಬರಾಜು ಆಗುವ ಎಫ್–63 ಮತ್ತು ಎಫ್–64 ನ ನಿರ್ವಹಣೆ ಕಾಮಗಾರಿ ಕೈಗೊಳ್ಳುತ್ತಿರುವುರಿಂದ ಜೂ.20 ರಂದು ಬೆಳಿಗ್ಗೆ 11 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

## ಜೂ.25 ರಂದು ಪಿಂಚಣಿ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.18–ಅಂಚೆ ಇಲಾಖೆಯಿಂದ ನಿವೃತ್ತರಾದ ಸರ್ಕಾರದಿಂದ ಪಿಂಚಣಿ ಪಡೆಯುತ್ತಿರುವ ಇಲಾಖಾ ನೌಕರರಿಗಾಗಿ ಮತ್ತು ಕುಟುಂಬ ಪಿಂಚಣಿ ಪಡೆಯುತ್ತಿರುವ ನಿವೃತ್ತ ಅಂಚೆ ನೌಕರರ ಕುಟುಂಬದವರಿಗಾಗಿ ಜೂ.25 ರಂದು ಸಂಜೆ 04 ಗಂಟೆಗೆ ಬಳ್ಳಾರಿ ವಿಭಾಗೀಯ ಅಂಚೆ ಕಚೇರಿಯಲ್ಲಿ ಪಿಂಚಣಿ ಅದಾಲತ್ ಆಯೋಜಿಸಲಾಗಿದೆ. ಪಿಂಚಣಿದಾರರು ತಮ್ಮ ಕುಂದು–ಕೊರತೆಗಳಿದ್ದಲ್ಲಿ ಬಳ್ಳಾರಿ ವಿಭಾಗದ ಕೋಟೆ ಪ್ರದೇಶದ ಅಂಚೆ ವಿಭಾಗೀಯ ಕಾರ್ಯಾಲಯ ಅಧೀಕ್ಷಕರ ಕಚೇರಿಗೆ ಜೂ.23 ರೊಳಗಾಗಿ ಮುಂಚಿತವಾಗಿ ತಲುಪುವಂತೆ ಪತ್ರ ಮೂಲಕ ಅಥವಾ doballari.ka@indiapost.gov.in ಗೆ ಇ–ಮೇಲ್ ಮುಖಾಂತರ ಕಳುಹಿಸಿಕೊಡಬಹುದು. ತಮ್ಮ ಅಹವಾಲುನೊಂದಿಗೆ ಜೂ.25 ರಂದು ನಡೆಯುವ ಪಿಂಚಣಿ ಅದಾಲತ್‌ನಲ್ಲಿ ಭಾಗವಹಿಸಬಹುದು. ಅದಾಲತ್‌ನಲ್ಲಿ ಭಾಗವಹಿಸುವವರಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ ಎಂದು ಬಳ್ಳಾರಿ ವಿಭಾಗ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೂತನ ಕಟ್ಟಡಕ್ಕೆ ಕಚೇರಿ ಸ್ಥಳಾಂತರ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 18–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಆವರಣದಲ್ಲಿ ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಸರ್ಕಾರಿ ವೀಕ್ಷಣಾಲಯ ಮತ್ತು ಬಾಲನ್ಯಾಯಮಂಡಳಿ ರಾಯಚೂರ ಕಚೇರಿಯನ್ನು ಇದೀಗ ರಾಯಚೂರ ನಗರದ ಅಜಾದನಗರದಲ್ಲಿನ ಸಂಜೀವಿನಿ ಆಸ್ಪತ್ರೆಯ ಹಿಂದುಗಡೆ ಇರುವ ಶೇಖ್ ಇಮಾಮ್ ರಸಿಡೆನ್ಸಿ 1ನೇ ಮಹಡಿಗೆ ಸ್ಥಳಾಂತರಿಸಲಾಗಿದೆ.

ಇನ್ನು ಮುಂದೆ ಗ್ರಾಹಕರು, ಸರ್ಕಾರಿ ವೀಕ್ಷಣಾಲಯ ಮತ್ತು ಬಾಲ ನ್ಯಾಯಮಂಡಳಿಯ ಕಚೇರಿಯ ಕೆಲಸಗಳಿಗಾಗಿ ಈ ಮೇಲಿನ ವಿಳಾಸಕ್ಕೆ ಮತ್ತು ದೂರವಾಣಿ ಸಂ:08532–229928ಗೆ ಸಂಪರ್ಕಿಸಬಹುದಾಗಿದೆ ಎಂದು ಸರ್ಕಾರಿ ವೀಕ್ಷಣಾಲಯ ಮತ್ತು ಬಾಲ ನ್ಯಾಯಮಂಡಳಿ ಕಚೇರಿಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳೆ ವಿಮೆ ನೋಂದಣಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.18– ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ–ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ರೈತರು ಅಧಿಸೂಚಿತ ಬೆಳೆಗಳಿಗೆ ನೋಂದಣಿ ಮಾಡಿಸಬೇಕಾಗಿದೆ.

ಬೆಳೆಸಾಲ ಪಡೆದ ರೈತರಿಗೆ ಯೋಜನೆ ಕಡ್ಡಾಯವಾಗಿದ್ದು, ಭಾಗವಹಿಸದಿರುವ ರೈತರು ಅಂತಿಮ ದಿನಾಂಕಕ್ಕಿಂತ 7 ದಿನ ಮೊದಲು ಬ್ಯಾಂಕಿಗೆ ಲಿಖಿತ ಪತ್ರ ಕೊಡಬೇಕು. ಬೆಳೆಸಾಲವಿಲ್ಲದ ರೈತರಿಗೆ ಯೋಜನೆ ಐಚ್ಛಿಕವಾಗಿದ್ದು, ಬಾಗಲಕೋಟೆ ಜಿಲ್ಲೆಗೆ ಯುನಿವರ್ಸಲ್ ಸೊಂಪೊ ಜಿ.ಐ.ಸಿ. ವಿಮಾ ಕಂಪನಿ ಆಯ್ಕೆಯಾಗಿದೆ.

ಆಹಾರ ಬೆಳೆಗಳಿಗೆ ಶೇಕಡಾ 2 ಮತ್ತು ವಾಣಿಜ್ಯ ಬೆಳೆಗಳಿಗೆ ಶೇಕಡಾ 5 ರಷ್ಟು ಕಂತು ಪಾವತಿ ಅನಿವಾರ್ಯ, ಬೆಳೆ ನಷ್ಟದ ಮಾಹಿತಿ 72 ಗಂಟೆಯೊಳಗೆ ನೀಡಬೇಕು. ಕಟಾವಿನ ನಂತರ 14 ದಿನಗಳಲ್ಲಿ ನಷ್ಟವಾದರೂ ಸಹ ಪರಿಹಾರ ಸಿಗಲಿದೆ. ನೋಂದಣಿಗೆ ಫ್ರೂಟ್ಸ್ ಎಫ್‌ಐಡಿ ಕಡ್ಡಾಯ. ಹೆಚ್ಚಿನ ಮಾಹಿತಿಗಾಗಿ www.samrakshane.karnataka,gov.in ಹಾಗೂ ಸಮೀಪದ ರೈತ ಸಂಪರ್ಕ ಕೇಂದ್ರ, ತಾಲೂಕಾ ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಹಾಗೂ ಬೆಳೆ ವಿಮೆ ಸಂಸ್ಥೆ ಕಛೇರಿಗೆ ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ ಜಿಲ್ಲಾ ವಿಜ್ಞಾನ ಕೇಂದ್ರದಿಂದ ವಿವಿಧ ಕಾರ್ಯಕ್ರಮಗಳ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.18– ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಇದೇ ಜೂನ್ 20 ರಿಂದ 21 ರಂದು ಕೆಳಕಂಡ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದ ಮಲ್ಲಮ್ಮ ನುಡಿ ವಾರ್ತೆ ಅಧಿಕಾರಿಗಳು ತಿಳಿಸಿದ್ದಾರೆ.

ಜೂನ್ 20 ರಂದು ಬೆಳಿಗ್ಗೆ 11 ಗಂಟೆಗÉ 'Finding Harmony Within: Exploring the Benefits of Yoga' ಕುರಿತು ಕಲಬುರಗಿ ಆಯುಷ್ ಇಲಾಖೆಯ ಯೋಗಾ ತರಬೇತಿದಾರ ಸುದೀಪ ಮಾಳಗಿ ಅವರು ಉಪನ್ಯಾಸ ನೀಡಲಿದ್ದು, ಪ್ರೌಢಶಾಲಾ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಬೆಳಿಗ್ಗೆ 11.45 ಗಂ–ಟೆಗೆ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ "Yoga for One Earth, One Health" ವಿಷಯ ಕುರಿತು ಸೆಮಿನಾರ್ ಸ್ಪರ್ಧೆ ಆಯೋಜಿಸಲಾಗಿದೆ.

ಜೂನ್ 21 ರಂದು ಬೆಳಿಗ್ಗೆ 7.45 ರಿಂದ ಬೆಳಿಗ್ಗೆ 8.30 ಗಂಟೆಯವರೆಗೆ ಯೋಗಾಭ್ಯಾಸ ನಡೆಯಲಿದೆ. ಬೆಳಿಗ್ಗೆ 11 ಗಂಟೆಗೆ 'ಯೋಗಾಸನಗಳು ಮತ್ತು ಅದರ ಪ್ರಯೋಜನಗಳು' ಕುರಿತು ಮುಕ್ತ ರಸಪ್ರಶ್ನೆ ಕಾರ್ಯಕ್ರಮ ಜರುಗಲಿದ್ದು, 15 ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರ ದೂರವಾಣಿ ಸಂಖ್ಯೆ 08472–270608 ಅಥವಾ ಮೊಬೈಲ್ ಸಂಖ್ಯೆ 9788078048 / 9447541616 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

### ಉದ್ಯೋಗ ಮೇಳ : 200 ವಿದ್ಯಾರ್ಥಿಗಳ ಆಯ್ಕೆ

# ಬದುಕಿನ ಭದ್ರತೆಗೆ ಉದ್ಯೋಗ ಮುಖ್ಯ : ಡಾ.ಅರುಣಕುಮಾರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.18–ಬದುಕಿನ ಭದ್ರತೆಗೆ ಉದ್ಯೋಗ ಮುಖ್ಯವಾಗಿದ್ದು, ವಿದ್ಯಾರ್ಥಿಗಳು ಉದ್ಯೋಗಿಗಳಾಗಿ ಉದ್ಯಮಿಗಳಾಗಬೇಕು ಎಂದು ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಹೇಳಿದರು.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬುಧವಾರ ಬೆಂಗಳೂರಿನ ಸ್ಪೆಕ್ಟ್ರಂ ಟ್ಯಾಲೆಂಟ್ ಮ್ಯಾನೇಜಮೆಂಟ್ ಪ ಕಂಪನಿಯ ಸಹಯೋಗದಲ್ಲಿ ಆಯೋಜಿಸಿದ್ದ 2025ರ ಉದ್ಯೋಗ ಮೇಳಕ್ಕೆ ಸಸಿಗೆ ನೀರುಣಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸ ಮುಗಿಸಿದ ನಂತರ ಉದ್ಯೋಗಕ್ಕಾಗಿ ಅಲೆದಾಡುವ ಪರಿಸ್ಥಿತಿ ಇತ್ತು, ನಮ್ಮ ಕಾಲೇಜಿನಲ್ಲಿ ಶಿಕ್ಷಣ ನೀಡುವದರ ಜೊತೆಗೆ ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಪ್ರತಿ ವರ್ಷವೂ ಉದ್ಯೋಗ ಮೇಳ ಆಯೋಜನೆ ಮಾಡಿದ್ದು, ವಿದ್ಯಾರ್ಥಿಗಳಿಗೆ ಅವರ ಶೈಕ್ಷಣಿಕ ಅರ್ಹತೆಗೆ ಅನುಗುಣವಾಗಿ ಉದ್ಯೋಗ ಪಡೆಯಲು ಸಾಧ್ಯವಾಗುತ್ತಿದೆ. ಇಂತಹ ಮೇಳಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸಿ ಉದ್ಯೋಗವನ್ನು ಹೊಂದಬೇಕು ಎಂದು ಅವರು ಹೇಳಿದರು.

ಸ್ಪೆಕ್ಟ್ರಂ ಟ್ಯಾಲೆಂಟ್ ಮ್ಯಾನೇಜಮೆಂಟ್ ಕಂಪನಿಯ ಮಾನವ ಸಂಪನ್ಮೂಲ ಅಧಿಕಾರಿ ಪ್ರಭು ಎಸ್. ಮಾತನಾಡಿ, ವಿದ್ಯಾರ್ಥಿಗಳು ಪದವಿ ಶಿಕ್ಷಣ ಮುಗಿಸಿದ ನಂತರ ಅವರ ಜೀವನ ಆರ್ಥಿಕವಾಗಿ ಸದೃಢವಾಗಬೇಕಾದರೆ ಮೊದಲು ಉದ್ಯೋಗವನ್ನು ಮಾಡುವ ಮನೋಭಾವವನ್ನು ಬೆಳೆಸಿಕೊಳ್ಳಬೇಕೆಂದು ಹೇಳಿದರು.

ಡಾ.ಜಿ.ಜಿ.ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿಗಳಿಗೆ ಉದ್ಯೋಗ ನೀಡುವ ಸದಾಶಯದೊಂದಿಗೆ ಉದ್ಯೋಗ ಕೊಡುವವರನ್ನು ಹಾಗೂ ಉದ್ಯೋಗ ಆಕಾಂಕ್ಷಿಗಳನ್ನು ಈ ಮೇಳದ ಮೂಲಕ ಒಂದೇ ವೇದಿಕೆಯಲ್ಲಿ ಕರೆ ತಂದು ಉದ್ಯೋಗ ಅವಕಾಶವನ್ನು ಕಲ್ಪಿಸುವ ಕಾರ್ಯವನ್ನು ಕಾಲೇಜು ಮಾಡುತ್ತಿದೆ ಎಂದರು.

ಕಂಪನಿಯ ಇನ್ನೋರ್ವ ಮಾನವ ಸಂಪನ್ಮೂಲ ಅಧಿಕಾರಿ ಸುಷ್ಮಿತಾ ಉಪಸ್ಥಿತರಿದ್ದರು. ಉಪನ್ಯಾಸಕ ಡಾ.ಚಂದ್ರಶೇಖರ ಕಾಳನ್ನವರ ಸ್ವಾಗತಿಸಿದರು. ಡಾ.ಸುಮಂಗಲಾ ಮೇಟಿ ನಿರೂಪಿಸಿದರು. ಉಪನ್ಯಾಸಕ ದೇವೇಂದ್ರನಾಯಕ ವಂದಿಸಿದರು.

ಕಾಲೇಜಿನ ಬಿ.ಎ, ಬಿ.ಕಾಂ, ಬಿ.ಎಸ್ಸಿ,ಬಿ.ಸಿ.ಎ,ಪದವಿ ಪಡೆದಿರುವ 486 ವಿದ್ಯಾರ್ಥಿಗಳು ಉದ್ಯೋಗ ಮೇಳದಲ್ಲಿ ಪಾಲ್ಗೊಂಡಿದ್ದರು. ಇದರಲ್ಲಿ 200 ವಿದ್ಯಾರ್ಥಿಗಳು ಆಯ್ಕೆಯಾಗಿದ್ದು, ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳಿಗೆ 14,700 ಸಂಬಳದೊಂದಿಗೆ ವಸತಿ, ಊಟ ಹಾಗೂ ಸಾರಿಗೆ ವೆಚ್ಚವನ್ನು ಉಚಿತವಾಗಿ ನೀಡಲಾಗುತ್ತದೆಂದು ಎಂದು ಸ್ಪೆಕ್ಟ್ರಂ ಟ್ಯಾಲೆಂಟ್ ಮ್ಯಾನೇಜಮೆಂಟ್ ಕಂಪನಿಯ ಮಾನವ ಸಂಪನ್ಮೂಲ ಅಧಿಕಾರಿ ಪ್ರಭು ಎಸ್ ತಿಳಿಸಿದರು.

## ಬಾಗಲಕೋಟೆ ಜಿಲ್ಲಾಧಿಕಾರಿಯಾಗಿ ಸಂಗಪ್ಪ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.18– ಬಾಗಲಕೋಟೆ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ಸಂಗಪ್ಪ ಎಂ. ಬುಧವಾರ ಅಧಿಕಾರ ಸ್ವೀಕರಿಸಿದರು. ನಿಕಟಪೂರ್ವ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ನೂತನ ಜಿಲ್ಲಾಧಿಕಾರಿಗಳಿಗೆ ಪುಷ್ಪ ನೀಡಿ ಸ್ವಾಗತಿಸಿ ಅಧಿಕಾರ ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಜಿಪಂ ಸಿಇಓ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿಗಳಾದ ಸಂತೋಷ ಜಗಲಾಸರ, ಶ್ವೇತಾ ಬೀಡಿಕರ ಸೇರಿದಂತೆ ಆಯಾ ತಾಲೂಕಿನ ತಹಶೀಲ್ದಾರರು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಪುಷ್ಪ ಅರ್ಪಿಸಿ ನೂತನ ಜಿಲ್ಲಾಧಿಕಾರಿಯನ್ನು ಸ್ವಾಗತಿಸಿದರು. ಪರಿಚಯ:ನೂತನ ಜಿಲ್ಲಾಧಿಕಾರಿಗಳು ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲೂಕಿನವರಾಗಿದ್ದು, ಪ್ರಾಥಮಿಕ ಶಿಕ್ಷಣವನ್ನು ಬೀಳಗಿ, ಮುಧೋಳ, ಬಾಗಲಕೋಟೆಯಲ್ಲಿ ಮುಗಿಸಿದ್ದಾರೆ. ಮಾಧ್ಯಮಿಕ ಹಾಗೂ ಕಾಲೇಜು ಶಿಕ್ಷಣವನ್ನು ಬಾಗಲಕೋಟೆ ಬಸವೇಶ್ವರ ಮಹಾವಿದ್ಯಾಲಯದಲ್ಲಿ ಪಡೆದು ಎಂ.ಎಸ್.ಸಿ ಮೈಕ್ರೋ ಬಯಾಲಜಿಯನ್ನು ಬೆಂಗಳೂರಿನ ಜಿ.ಕೆ.ವಿ.ಕೆ ಮಹಾವಿದ್ಯಾಲಯದಲ್ಲಿ ಮುಗಿಸಿದ್ದಾರೆ.

2007ರಲ್ಲಿ ವಿಶೇಷ ಭೂಸ್ವಾಧೀನ ಅಧಿಕಾರಿಯಾಗಿ (ಎಸ್.ಎಲ್.ಓ) ಮುನಿರಾಬಾದ್, ಮೈಬೂಬನಗರ ರೈಲ್ವೆಯೋಜನೆಯಲ್ಲಿ ಕಾರ್ಯನಿರ್ವಹಿಸಿದ್ದಾರೆ. 2009ರಲ್ಲಿ ಗುಲಬರ್ಗಾದ ಉಪವಿಭಾಗಾಧಿಕಾರಿ, ಬೆಂಗಳೂರಿನ ಕೆಐಡಿಬಿ ವಿಶೇಷ ಭೂಸ್ವಾಧೀನ ಅಧಿಕಾರಿಯಾಗಿ ಕಾರ್ಯನಿರ್ವಹಿಸಿ, ನಂತರ ಬಿಬಿಎಂಪಿ ಚುನಾವಣಾ ವಿಭಾಗದ ಉಪವಿಭಾಗ ಅಧಿಕಾರಿಯಾಗಿ, ಬೆಂಗಳೂರಿನ ಆರ್‌ಟಿಐ ಕಾರ್ಯದರ್ಶಿಗಳಾಗಿ ಕಾರ್ಯನಿರ್ವಹಿಸಿದ್ದಾರೆ. ಕೋಲ್ಹಾರ ಜಿಲ್ಲೆಯ ಅಪರ ಜಿಲ್ಲಾಧಿಕಾರಿಯಾಗಿ ಕಾರ್ಯನಿರ್ವಹಿಸಿ, ನಂತರ 2014ರಲ್ಲಿ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಾಗಿ ಸಹ ಕೆಲಸ ನಿರ್ವಹಿಸಿದ್ದಾರೆ. ಬೆಂಗಳೂರಿನ ಬುಡಕಟ್ಟು ಕಲ್ಯಾಣ ಇಲಾಖೆಯ ನಿರ್ದೇಶಕರಾಗಿ, 2016ರಲ್ಲಿ ಬೆಂಗಳೂರು ನಗರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಹಾಗೂ ಬೆಂಗಳೂರು ನಗರ ಹೆಚ್ಚುವರಿ (ಪ್ರಭಾರ) ಜಿಲ್ಲಾಧಿಕಾರಿಗಳಾಗಿ ಕಾರ್ಯನಿರ್ವಹಿಸಿದ್ದಾರೆ. ನಂತರ ಕಿಯೋನಿಕ್ಸ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾಗಿ, ಸುವರ್ಣ ಆರೋಗ್ಯ ಟ್ರಸ್ಟ್‌ನ ಕಾರ್ಯನಿರ್ವಾಹಕ ನಿರ್ದೇಶಕರಾಗಿ ಕಾರ್ಯನಿರ್ವಹಿಸಿದ್ದಾರೆ.

# ಜೂ.20 ರಿಂದ ಉಡುಪಿ ಪೇಜಾವರ ಶ್ರೀಗಳ ವರ್ಧಂತಿ ಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.18– ಉಡುಪಿ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನತೀರ್ಥ ಶ್ರೀಪಾದಂಗಳವರ 60ನೇ ವರ್ಧಂತಿ ಮಹೋತ್ಸವ ಶ್ರೀಗಳ ಉಪಸ್ಥಿತಿಯಲ್ಲಿ ಜೂ.20 ರಿಂದ 27ರವರೆಗೆ ಬಾಗಲಕೋಟೆ ನಗರದಲ್ಲಿ ಅದ್ದೂರಿಯಾಗಿ ಜರುಗಲಿದೆ ಎಂದು ಪಂ.ರಘೋತ್ತಮಾಚಾರ್ಯ ನಾಗಸಂಪಿಗೆ ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಯೋಧ್ಯ ಶ್ರೀರಾಮ ಮಂದಿರದ ಟ್ರಸ್ಟಿಗಳೂ ಆಗಿರುವ ಶ್ರೀಗಳು ಗೋಶಾಲೆ, ವಿಕಲಚೇತನ ಮಕ್ಕಳ ಪಾಲನಾ ಕೇಂದ್ರ, ಶಿಕ್ಷಣ ಸಂಸ್ಥೆ, ಶಾಸ್ತ್ರಸೇವೆ, ಧಾರ್ಮಿಕ ಕೇಂದ್ರಗಳ ಮೂಲಕ ಸಮಾಜ ಸುಧಾರಣಾ ಕಾರ್ಯಗಳನ್ನು ಮಾಡುತ್ತಿದ್ದಾರೆ. ಶ್ರೀಗಳ 60 ನೇ ವರ್ಧಂತಿಯನ್ನು ಅತ್ಯಂತ ವಿಜೃಂಭಣೆಯಿಂದ ಜರುಗಿಸಲಾಗುತ್ತಿದೆ ಎಂದು ಹೇಳಿದರು.

ಜೂ.20ರಂದು ಸಂಜೆ 5.30ಕ್ಕೆ ಶ್ರೀಗಳು ಪುರಪ್ರವೇಶಿಸಲಿದ್ದು, ವಿದ್ಯಾಗಿರಿ ಕಾಲೇಜು ಸರ್ಕಲ್‌ನಿಂದ ವಿಪ್ರ ಅಭಿವೃದ್ಧಿ ಸಂಘದ ರಾಯರ ಮಠದವರೆಗೆ ಬೃಹತ್ ಶೋಭಾ ಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ. 6.30ಕ್ಕೆ ಪಂ.ಆನಂದತೀರ್ಥಾಚಾರ್ಯ ನಾಗಸಂಪಗಿ ಅವರು ಪ್ರವಚನ ನೀಡಲಿದ್ದು, ನಂತರ ಶ್ರೀಗಳು ಅನುಗ್ರಹ ಸಂದೇಶ ನೀಡುವರು.

ಜೂ.21ರಂದು ಸಂಜೆ 6 ರಿಂದ 8.30ರವರೆಗೆ ಬೆಂಗಳೂರಿನ ಪಂ. ರಾಮವಿಠ್ಠಲಾಚಾರ್ಯ ಅವರಿಂದ ಉಪನ್ಯಾಸ, ಜೂ.22 ಸಂಜೆ ಪಂ. ವೇಣುಗೋಪಾಲಾಚಾರ್ಯ ಅಗ್ನಿಹೋತ್ರಿ ಅವರಿಂದ ಪ್ರವಚನ, ಜೂ.23 ಸಂಜೆ ಪಂ.ಮಧ್ವಾಚಾರ್ಯ ಮೊಕಾಶಿ ಅವರಿಂದ ಪ್ರವಚನ, ಜೂ.24ರ ಸಂಜೆ ಚಕ್ರವರ್ತಿ ಸೂಲಿಬೆಲೆ ಅವರಿಂದ ಲೌಕಿಕ ಉಪನ್ಯಾಸ, ಜೂ.25 ಸಂಜೆ ಪಂ. ಕೃಷ್ಣರಾಜಕುತ್ಪಾಡಿಯಾಚಾರ್ಯರಿಂದ ಉಪನ್ಯಾಸ, ಜೂ.26 ಬೆಂಗಳೂರಿನ ಪಂ.ಬ್ರಹ್ಮಣ್ಯಾಚಾರ್ಯರಿಂದ ಪ್ರವಚನ ಕಾರ್ಯಕ್ರಮ ಜರುಗಲಿದೆ ಎಂದು ರಘೋತ್ತಮಾಚಾರ್ಯರು ವಿವರಿಸಿದರು. ಪ್ರತಿದಿನ ಸಂಜೆ ಪ್ರವಚನ ಕಾರ್ಯಕ್ರಮಗಳು ವಿದ್ಯಾಗಿರಿ ವಿಪ್ರ ಅಭಿವೃದ್ಧಿ ಸಂಘದ ಆವರಣದಲ್ಲಿ ಜರುಗಲಿವೆ. ಜೂ.27ರಂದು ಬೆಳಗ್ಗೆ 7 ರಿಂದ 10.30ರವರೆಗೆ ಪಾದಪೂಜೆ ಜರುಗಲಿದೆ. ಶ್ರೀಗಳಿಂದ ಪ್ರತಿದಿನ ಶ್ರೀಮಧ್ವಕರಾರ್ಚಿತ ಶ್ರೀರಾಮವಿಠ್ಠಲ ದೇವರ ಪೂಜೆ ಜರುಗಲಿದೆ. ಶ್ರೀಗಳು ಸಾಮಾಜಿಕ ಕ್ಷೇತ್ರದಲ್ಲಿ ಅದರಲ್ಲೂ ಹಿಂದೂ ಸಮಾಜದ ಸಂಘಟನೆಯಲ್ಲಿ ತೊಡಗಿರುವುದರಿಂದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸೇರಬೇಕೆಂದು ಕೋರಿದರು.

ಕಾರ್ಯಕ್ರಮದ ಸ್ವಾಗತ ಸಮಿತಿ ಉಪಾಧ್ಯಕ್ಷ ಡಾ.ಗಿರೀಶ ಮಾಸೂರಕರ ಮಾತನಾಡಿ, ಶ್ರೀಗಳ ಕಾರ್ಯಕ್ರಮ ನಗರದಲ್ಲಿ ಅದ್ದೂರಿಯಾಗಿ ಜರುಗಲಿದೆ. ಸಕಲ ಹಿಂದೂ ಸಮಾಜದ ಸಂಘಟನೆಗೆ ಶ್ರೀಗಳು ಶ್ರಮಿಸುತ್ತಿದ್ದಾರೆ.

ಅಯೋಧ್ಯೆ ರಾಮಮಂದಿರ ನಿರ್ಮಾಣದ ನಂತರ 48 ದಿನಗಳ ಮಂಡಲ ಪೂಜೆಯಲ್ಲೂ ಶ್ರೀಗಳು ಭಾಗಿಯಾಗಿದ್ದರು ಎಂದು ವಿವರಿಸಿದರು. ಶ್ರೀಗಳ ಕಾರ್ಯಕ್ರಮಕ್ಕಾಗಿ ಸ್ವಾಗತ ಸಮಿತಿ ರಚನೆಯಾಗಿದೆ. ಪಂ. ರಘೋತ್ತಮಾಚಾರ್ಯ ನಾಗಸಂಪಿಗೆ, ಪಂ.ಭೀಮಸೇನಾಚಾರ್ಯ ಪಾಂಡುರಂಗಿ, ಪಂ.ಬಿಂದುಮಾಧವಾಚಾರ್ಯ ನಾಗಸಂಪಿಗೆ ಮಾರ್ಗದರ್ಶಕರಾಗಿದ್ದು, ಹಿರಿಯರಾದ ಎಸ್.ಬಿ.ಸತ್ಯನಾರಾಯಣ ಗೌರವಾಧ್ಯಕ್ಷರು, ಕೆ.ರಾಘವೇಂದ್ರ ರಾವ್ ಅಧ್ಯಕ್ಷರಾಗಿದ್ದಾರೆ. ಜೊತೆಗೆ ಗಣ್ಯರು ಸಮಿತಿಯಲ್ಲಿದ್ದಾರೆ ಎಂದರು.

ಸ್ವಾಗತ ಸಮಿತಿ ಉಪಾಧ್ಯಕ್ಷ ನರಸಿಂಹ ಆಲೂರ, ಕಾರ್ಯದರ್ಶಿಗಳಾದ ಎಸ್.ಕೆ.ಕುಲಕರ್ಣಿ, ನಾರಾಯಣ ದೇಸಾಯಿ, ಶ್ರೀಹರಿ ಪಾಟೀಲ, ಗೌರವ ಕಾರ್ಯದರ್ಶಿ ಪವನ ಸೀಮಿಕೇರಿ, ಸಹಕಾರ್ಯದರ್ಶಿ ಅನಂತ ಮಳಗಿ, ಅನಂತ ಬೆಳ್ಳುಬ್ಬಿ ಇದ್ದರು.

## ವಿದ್ಯಾರ್ಥಿಗಳಿಗೆ ಗ್ರಾಹಕರ ಹಕ್ಕುಗಳ ಅರಿವು ಅವಶ್ಯ–ಡಾ.ವೀಣಾ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.18–ಇಂದು ವಿದ್ಯಾರ್ಥಿಗಳಿಗೂ ಸಹ ಗ್ರಾಹಕರ ಹಕ್ಕುಗಳ ಬಗ್ಗೆ ಜಾಗೃತಿ ಅವಶ್ಯ ಎಂದು ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ದೆಹಲಿಯ ಅಧಿಕಾರಿ ಡಾ.ವೀಣಾ ದೀಕ್ಷಿತ್ ಹೇಳಿದ್ದಾರೆ.

ಅವರು ಇಂದು ಸಮೃದ್ಧಿ ಗುರುಕುಲದ ಶೇಖರಗೌಡ ಶಿರೂರ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಗ್ರಾಹಕರ ಹಕ್ಕುಗಳ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿ, ಗ್ರಾಹಕರಿಗೆ ಆಗುವ ಮೋಸ, ವಂಚನೆಗಳ ಕುರಿತು ತಿಳಿಸಿದರು.

ಅಖಿಲ ಭಾರತೀಯ ಗ್ರಾಹಕ ಪಂಚಾಯತಿ ಕರ್ನಾಟಕ ಪ್ರಾಂತದ ಕಾರ್ಯದರ್ಶಿ ಗಾಯತ್ರಿ ಮಾತನಾಡಿ, ಅನೇಕ ಬಾರಿ ಪಾಲಕರು ಮಕ್ಕಳನ್ನು ಏನಾದರೂ ತರಲು ಅಂಗಡಿಗಳಿಗೆ ಕಳಿಸುತ್ತಾರೆ. ನೀವು ಕೂಡಾ ನಿಮಗೆ ಬೇಕಾದ ವಸ್ತುಗಳನ್ನು ನೀವೇ ನಿಮ್ಮ ಸ್ನೇಹಿತರೊಂದಿಗೆ ತರಲು ಹೋಗುತ್ತೀರಿ. ಅಲ್ಲಿ ಎಮ್‌ಆರ್‌ಪಿ ಎಷ್ಟಿದೆ, ವಸ್ತುವಿನ ಅವಧಿ ಮೀರಿದೆಯೆ ಹೇಗೆ, ತೂಕ ಅಳತೆ ಸರಿಯಾಗಿ ಇದೆಯೆ ಇತ್ಯಾದಿ ವಿವರಗಳನ್ನು ಚೌಕಾಶಿ ಮಾಡಿ ವ್ಯವಹಾರ ಮಾಡಬೇಕೆಂದು ತಿಳಿಸಿದರು.

ಬಾಗಲಕೋಟ ಜಿಲ್ಲೆಯ ಕಾನೂನು ಸಲಹೆಗಾರ ಮತ್ತು ನ್ಯಾಯವಾದಿ ಜಯತೀರ್ಥ ಕುಲಕರ್ಣಿ ಕಾನೂನಿನಲ್ಲಿ ಇರುವ ಗ್ರಾಹಕ ಕಾಯ್ದೆ ಕುರಿತು ಮಾತನಾಡಿದರು.

ಶಾಲೆಯ ಪ್ರಾಚಾರ್ಯೆ ಶ್ರೀಮತಿ ಕಲಗುಡಿ ಸ್ವಾಗತಿಸಿ, ವಿದ್ಯಾರ್ಥಿ ಮಟ್ಟದಲ್ಲಿಯೇ ಗ್ರಾಹಕರ ಹಕ್ಕುಗಳ ತಿಳುವಳಿಕೆ ನೀಡಿದರೆ ಮುಂದೆ ಉತ್ತಮ ಸಮಾಜ ನಿರ್ಮಾಣ ಸಾಧ್ಯವೆಂದು ಹೇಳಿದರು.

ಡಾ.ಮಹಾದೇವ ದೀಕ್ಷಿತ ವಂದಿಸಿದರು. ವೇದಿಕೆಯಲ್ಲಿ ಅಖಿಲ ಭಾರತೀಯ ಗ್ರಾಹಕ ಪಂಚಾಯತಿ ಕರ್ನಾಟಕ ಪ್ರಾಂತ ನೂತನ ಸಂಘಟನಾ ಮಂತ್ರಿ ರಂಗನಗೌಡ ದಂಡಣ್ಣವರ. ಶಾಲೆಯ ಶಿಕ್ಷಕ ಮತ್ತು ಶಿಕ್ಷ–ಕೇತರ ಸಿಬ್ಬಂದಿ, ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಬಾಗಲಕೋಟ ಜಿಮಖಾನ ಸಂಸ್ಥೆಯಿಂದ ಕ್ಯಾನ್ಸರ್ ಪೀಡಿತ ವಿದ್ಯಾರ್ಥಿಗೆ ಆರ್ಥಿಕ ನೆರವು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.18–ನಗರದ ಬಾಗಲಕೋಟ ಜಿಮಖಾನ ಸಂಸ್ಥೆ ಕ್ಯಾನ್ಸರ್ ಪೀಡಿತ ವಿದ್ಯಾರ್ಥಿಯೊಬ್ಬನ ಚಿಕಿತ್ಸೆಗೆ 25ಸಾವಿರ ರೂ.ಗಳ ನೆರವು ನೀಡುವ ಮೂಲಕ ಮಾನವೀಯತೆ ಮರೆದಿದೆ.

ಜಿಮಖಾನ ಸಂಸ್ಥೆಯಲ್ಲಿ ಅರೆಕಾಲಿಕ ಸೇವಕನಾಗಿರುವ ಈರಪ್ಪ ಅಕ್ಕಸ್ತಿ ಅವರ 13 ವರ್ಷದ ಪುತ್ರ ಶಶಾಂಕ್ ಆರ್‌ಎಮ್‌ಎಸ್‌ಎ ಸ್ಕೂಲನಲ್ಲಿ 8 ನೇ ತರಗತಿ ಓದುತ್ತಿದ್ದು, ಆತ ಕ್ಯಾನ್ಸರ್ ಪೀಡಿತನಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ.

ಆತನ ವೈದ್ಯಕೀಯ ಚಿಕಿತ್ಸೆಗೆ ಸಂಸ್ಥೆ ವತಿಯಿಂದ ಕಾರ್ಯದರ್ಶಿ ಪ್ರೊ.ಎಸ್.ಬಿ.ಗೌಡರ ವಿದ್ಯಾರ್ಥಿಯ ತಾಯಿ ವಿದ್ಯಾ ಅವರಿಗೆ 25 ಸಾವಿರ ರೂ.ಗಳ ಚೆಕ್ ನೀಡಿದರು. ಸಂಸ್ಥೆಯ ಹಿರಿಯ ಸದಸ್ಯರಾದ ಡಾ.ಸಿ.ಕೆ.ಪಾಟೀಲ ಹಾಗೂ ಡಾ.ಬಿ.ಎಸ್.ಮರೇಗುದ್ದಿ ಇದ್ದರು.

# ತಾಲುಕಾ ಹಡಪದ ಸಮಾಜ ಸಂಘದ ಪೂರ್ವಭಾವಿ ಸಭೆ



ಲಿಂಗಸುಗೂರು :– ಜೂನ್ 22 ರಂದು ತಂಗಡಗಿ ಯಲ್ಲಿ ನಡೆಯುವ ಹಡಪದ ಅಪ್ಪಣ್ಣ ಮಹಾಸಂಸ್ಥಾನ ಮಠದ ಮೊದಲ ಪೀಠಾಧಿಪತಿ ಬಸವ ಪ್ರಿಯ ಅಪ್ಪಣ್ಣ ಶರಣರ ಪುಣ್ಯ ಸ್ಮರಣೆ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ತಾಲುಕಾ ಹಡಪದ ಸಮಾಜ ಸೇವಾ ಸಂಘದ ಅಧ್ಯಕ್ಷ ಜಗನ್ನಾಥ ಚಿತ್ತಾಪುರ ಕರೆ ನೀಡಿದರು.

ಮಂಗಳವಾರ ಪಟ್ಟಣದ ಕಲಬುರ್ಗಿ ರಸ್ತೆಯ ಮಾರ್ಗದಲ್ಲಿರುವ ಹಡಪದ ಅಪ್ಪಣ್ಣ ಸಮುದಾಯ ಭವನದಲ್ಲಿ ತಾಲುಕಾ ಹಡಪದ ಸಮಾಜ ಸೇವಾ ಸಂಘದ ವತಿಯಿಂದ ನಡೆದ ಪುಣ್ಯ ಸ್ಮರಣೆ ಮತ್ತು ಜಯಂತಿಯ ಪೂರ್ವ ಭಾವಿ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಆಂದ್ರ,ಮಹಾರಾಷ್ಟ್ರ ಸೇರಿದಂತೆ ರಾಜ್ಯದ ಉದ್ದಗಲಕ್ಕೂ ಜ್ಯೋತಿ ಯಾತ್ರೆಯ ಮೂಲಕ ಸಮಾಜ ಸಂಘಟನೆ ಮಾಡಿದ ಬಸವಪ್ರಿಯ ಶರಣರು ಬಹುಬೇಗ ನಮ್ಮನ್ನಗಲಿದ್ದು ಬಹುದೊಡ್ಡ ನಷ್ಟ , ಅವರ ಕೊಡುಗೆ ಸಮಾಜಕ್ಕೆ ಅಪಾರವಾಗಿದೆ. ಹಾಗಾಗಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಜೂನ್ 22 ರಂದು ತಂಗಡಗಿ ಯಲ್ಲಿ ನಡೆಯುವ 17 ನೇ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಭಾಗಿಯಾಗಿ ಯಶಸ್ವಿಗೊಳಿಸುವಂತೆ ಸಮಾಜ ಬಂಧುಗಳಿಗೆ ಕರೆ ನೀಡಿದರು.

ನಂತರ ಮಾತನಾಡಿದ ಜಿಲ್ಲಾ ಅಧ್ಯಕ್ಷ ಗದ್ದೆಪ್ಪ ಜಕ್ಕೆರಮಡು,ಸಮಾಜದ ಸಂಘಟನೆಗೆ ಹೆಚ್ಚಿನ ಒತ್ತು ನೀಡಬೇಕು,ಸಂಘಟನೆ ಹೋರಾಟದಿಂದ ಮಾತ್ರ ನಮಗೆ ನ್ಯಾಯ ಸಿಗಲು ಸಾಧ್ಯ ಎಂದರು.ಈ ವೇಳೆ ತಾಲುಕಾ ಪ್ರದಾನ ಕಾರ್ಯದರ್ಶಿ ಶರಣಬಸವ ಈಚನಾಳ, ಅಮರೇಶ ಮಟ್ಟೂರು ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಈ ಸಂಧರ್ಭದಲ್ಲಿ ಉಪಾಧ್ಯಕ್ಷ ಮುತ್ತಣ್ಣ ಗುಡಿಹಾಳ,ಹಿರಿಯ ಮುಖಂಡರಾದ ಗುಂಡಪ್ಪ ಮುದಗಲ್,ಮಲ್ಲಿಕಾರ್ಜುನ ಗೆಜ್ಜಲಗಟ್ಟಾ,ಶಿವಣ್ಣ ಖೈರವಾಡಗಿ,ಚನ್ನಪ್ಪ ಆನೆಹೊಸುರು,ಅಮರೇಶ ಗುರುಗುಂಟಾ,ತಿಪ್ಪಣ್ಣ ಮುದಗಲ್,ಪತ್ರೆಪ್ಪ ಮೇದನಾಪುರ,ಬಸವರಾಜ ಯಲಗಟ್ಟಿ,ಮಲ್ಲಿಕಾರ್ಜುನ, ಮಂಜುನಾಥ, ಹನುಮಂತ, ಸತೀಶ ಕರಡಕಲ್,ವೀರೇಶ ಗುಂಡಸಾಗರ,ಮೌನೇಶ, ಆದೇಶ,ಆನಂದ,ಅಮರೇಶ, ಸೇರಿದಂತೆ ಇತರರಿದ್ದರು.

# ಮಕ್ಕಳ ಶೈಕ್ಷಣಿಕ ಪ್ರಗತಿಗೆ ಕೈ ಜೋಡಿಸಿ : ಈರಪ್ಪ ಕಾರಭಾರಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲ್ಲೂಕಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಹಿರೆ ಸೂಳಿಕೇರಿತಾಂಡಾ ಹಾಗೂ ಕಲಿಕೆ ಟಾಟಾ ಟ್ರಸ್ಟ್ ನ ಸಹಯೋಗದೊಂದಿಗೆ ವಿಶೇಷ ದಾಖಲಾತಿ ಮತ್ತು ಹಾಜರಾತಿ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷರಾದ ಈರಪ್ಪ ಕಾರಭಾರಿ ಕಾರ್ಯಕ್ರಮವನ್ನು ಉದ್ಘಾಟಿಸುವ ಮುಖಾಂತರ ಜಾತಾಗೆ ಚಾಲನೆಯನ್ನು ನೀಡಿದರು. ಗ್ರಾಮದ ಶಾಲೆಯಿಂದ ಆರಂಭವಾದ ಆಂದೋಲನದಲ್ಲಿ ವಿದ್ಯಾರ್ಥಿಗಳು ಕುಂಭ, ವೇಷಭೂಷಣ ಹಾಗೂ ನಗಾರಿ ಬಾರಿಸುವ ಮೂಲಕ ಬಂಜಾರ ನೃತ್ಯವನ್ನು ಮಾಡುತ್ತಾ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಅರಿವು ಮೂಡಿಸಲಾಯಿತು.


ಮುಖ್ಯಶಿಕ್ಷಕರಾರ ಮಂಜುನಾಥ ಹಣವಾಳ ಅವರು ಮಾತನಾಡಿ ಸರಕಾರಿ ಶಾಲೆಗಳಿಗೆ ಸರ್ಕಾರ ಅನೇಕ ಯೋಜನೆಗಳನ್ನು ಜಾರಿ ಮಾಡಲಾಗಿದ್ದು, ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲು ಮಾಡಿಕೊಳ್ಳುವ ಮೂಲಕ ಎಲ್ಲಾ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದರು.

ಕಲಿಕೆ ಟಾಟಾ ಟ್ರಸ್ಟ್ ನ ಸಂಯೋಜಕರಾದ ಶ್ರೀ ಮೌನೇಶ ಬಡಿಗೇರ ಅವರು 5 ವರ್ಷ5 ತಿಂಗಳ ವಯೋಮಾನದ ಮಕ್ಕಳನ್ನು ದಾಖಲಾತಿಯನ್ನು ಮಾಡಿಸುವುದು, ಮತ್ತು ದಾಖಲಾದ ಮಕ್ಕಳು ಪ್ರತಿದಿನ ಶಾಲೆಗೆ ಹಾಜರಾಗುವಂತೆ ಮಾಡುವುದು ಪಾಲಕರ ಕರ್ತವ್ಯವಾಗಿದೆ, ಮಕ್ಕಳನ್ನು ಕೂಲಿ ಕೆಲಸಕ್ಕೆ ಕಳುಹಿಸುವುದನ್ನು ಬಿಡಬೇಕು ಎಂದು ತಿಳಿಸಿದರು. ನಂತರ ಕಲಿಕೆ ಟಾಟಾ ಟ್ರಸ್ಟ್ ನ ಕಾರ್ಯಕ್ರಮಗಳ ಬಗ್ಗೆ ಸವಿವರವಾಗಿ ವಿವರಿಸಿದರು. ಮಕ್ಕಳಿಗಾಗಿ ಆಸ್ತಿಯನ್ನು ಮಾಡದೆ ಮಕ್ಕಳಿಗೆ ಉತ್ತಮ ಶಿಕ್ಷಣವನ್ನು ನೀಡಿ ಮಕ್ಕಳನ್ನು ಆಸ್ತಿಯನ್ನಾಗಿ ಮಾಡಿ ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ಊರಿನ ಯುವಕರಾದ ಅನಿಲ ನಾಯಕ ಮಾತನಾಡಿ ಶಿಕ್ಷಕರಿಗೆ ಊರಿನ ಪಾಲಕರು ಸಹಕಾರ ನೀಡುವುದು ಬಹಳ ಉತ್ತಮ ಇದರಿಂದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರಕಲು ಸಾಧ್ಯವಾಗುತ್ತದೆ.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷರಾದ ಹನುಮಂತ, ಗ್ರಾಮ ಪಂಚಾಯತ ಸದಸ್ಯರಾದ ಮಂಜುನಾಥ ನಾಯಕ, ಶಿಕ್ಷಕರಾದ ಪಂಚಯ್ಯ , ಶರಣಪ್ಪ, ಹನುಮೇಶ , ಮಹಾಂತೇಶ , ಕಲಿಕೆ ಟಾಟಾ ಟ್ರಸ್ಟ್ ನ ಕಾರ್ಯಕ್ರಮ ಸಂಯೋಜ–ಕರಾದ ಮೌನೇಶ್ ಬಡಿಗೇರ್, ಮಂಜುನಾಥ್ ಕುರಿ, ಕಲಿಕೆ ಟಾಟಾ ಟ್ರಸ್ಟ್ ನ ಪ್ರೇರಕರಾದ ಕವಿತಾ ಹಾಗೂ ಎಸ್ ಡಿ ಎಮ್ ಸದಸ್ಯರು, ಶಿಕ್ಷಕರು, ಗ್ರಾಮಸ್ಥರು, ಯುವಕರು ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.

### ವಿಜ್ಞಾನಿ – 2025 ಕಾರ್ಯಕ್ರಮ ಸುವರ್ಣ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಿ:ನಬಿಸಾಬ ಆನೆಹೊಸೂರು



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ಜುಲೈ ತಿಂಗಳಿನಲ್ಲಿ 8 ನೇ ತರಗತಿಯಿಂದ ಪಿಯುಸಿವರಗಿನ ವಿದ್ಯಾರ್ಥಿಗಳಿಗೆ ಟೆಲಿಸ್ಕೋಪ ತಯಾರಿಸುವ 8 ದಿನಗಳ ತರಬೇತಿಯನ್ನು ಅನುಭವಿ ಸಂಪನ್ಮೂಲ ವ್ಯಕ್ತಿಗಳಿಂದ ಬೆಂಗಳೂರ ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ಹತ್ತಿರ ಇರುವ ಬ್ಯಾಸೆಂಟ ಉದ್ಯಾನವನ (ಸೌಟ್ ಕ್ಯಾಂಪೆ) ದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರಣ ಈ ಸುವರ್ಣ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಲು ತಮ್ಮ ಶಾಲಾಕಾಲೇಜಿನ ವಿಜ್ಞಾನದಲ್ಲಿ ಆಸಕ್ತ ಇರುವ ವಿದ್ಯಾರ್ಥಿಯನ್ನು ಆಯ್ಕೆ ಮಾಡಿ ತರಬೇತಿಗೆ ಕಳುಹಿಸಿಕೊಡಲು ವಿನಂತಿಸಲಾಗಿದೆ. ವಿದ್ಯಾರ್ಥಿಗಳು ತಯಾರಿಸಿದ ಟೆಲಿಸ್ಕೋಪವನ್ನು ವಿಧಾನ ಸೌದ ಬೆಂಗಳೂರುನಲ್ಲಿ ಪ್ರದರ್ಶನ ಮಾಡಲಾಗುವದು. ಸದರಿ ಕಾರ್ಯಕ್ರಮಕ್ಕೆ ಲಿಮ್ಕಾ, ಗಿನ್ನಿಸ್, ಇಂಡಿಯನ ಬುಕ ಆಫ ದಾಖಲೆ ಮಾಡಿಸಲು ಸಂಬಂಧಿಸಿದ ಕಂಪನಿಗಳನ್ನು ಆಗಮಿಸುವಂತೆ ಮಾಡಿ ವಿದ್ಯಾರ್ಥಿಗಳಿಗೆ ಪ್ರಶಸ್ತಿಪತ್ರ ವಿತರಿಸಲಾಗುವದು.

**ನಿಭಂದನೆಗಳು;**

ಶಾಲಾಕಾಲೇಜಿನಿಂದ ವಿದ್ಯಾರ್ಥಿಯ ವಿವರವನ್ನು ಅನುಭಂದ ರಲ್ಲಿ ಭರ್ತಿಮಾಡಿ ಪರಿಷತ್ತಿಗೆ ಸಲ್ಲಿಸುವದು . ಟೆಲಿಸ್ಕೋಪ ತಯಾರಿಕೆ ಸಾಮಗ್ರಿಯ ವೆಚ್ಚ ರೂ 15000.00 ಇದ್ದು, ಇನ್ನು ವಿದ್ಯಾರ್ಥಿಯ ಪಾಲಕರು/ಶಾಲಾ ಆಡಳಿತ ಮಂಡಳಿಯವರು ಭರಿಸತಕ್ಕದ್ದು.

ಸದರಿ ಮೊತ್ತವನ್ನು ಕರ್ನಾಟಕ ರಾಜ್ಯ ವೈಜ್ಞಾನಿಕ ಪರಿಷತ್ತು (ರಿ) ದೊಡ್ಡಬಳ್ಳಾಪೂರ ಪರಿಷತ್ತಿನ ಹೆಸರಿನಲ್ಲಿ ಡಿಡಿ ಪಡೆದು ಸಲ್ಲಿಸುವದು.

ವಿದ್ಯಾರ್ಥಿ ತಯಾರಿಸಿದ ಟೆಲಿಸ್ಕೋಪ ಹಣ ಸಂದಾಯ ಮಾಡಿದ ಪಾಲಕರಿಗೆ ಅಥವಾ ಹಣ ಸಂದಾಯ ಮಾಡಿದ ಶಾಲಾ ಆಡಳಿತ ಮಂಡಲಿಗೆ ನೀಡಲಾಗುವದು.. 8 ದಿನಗಳ ತರಬೇತಿಯ ವಸತಿ ಊಟ ಪರಿಷತ್ತಿನ ಪರವಾಗಿ ಉಚಿತ ನೀಡಲಾಗುವದು.

ಹೆಚ್ಚನ ಮಾಹಿತಿಗಾಗಿ ನಬಿಸಾಬ ಆನೆಹೊಸೂರು ಜಿಲ್ಲಾಧ್ಯಕ್ಷರು ಕರ್ನಾಟಕ ರಾಜ್ಯ ವೈಜ್ಞಾನಿಕ ಪರಿಷತ್ತು ಸಂಪರ್ಕಿಸಿ ಮೊ: 9008354975 ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಮಾನ ದುರಂತದಲ್ಲಿ ಸಾವು ಗೆದ್ದ ವಿಶ್ವಾಸ್ ಆಸ್ಪತ್ರೆಯಿಂದ ಡಿಸ್ಚಾರ್ಜ್



ಮಲ್ಲಮ್ಮ ನುಡಿ ವಾರ್ತೆ

ಗಾಂಧೀನಗರ:ಜೂ.18: ಅಹಮದಾಬಾದ್‌ನಲ್ಲಿ ಸಂಭವಿಸಿದ್ದ ಏರ್ ಇಂಡಿಯಾ ವಿಮಾನ ಭೀಕರ ಅಪಘಾತದಲ್ಲಿ ಬದುಕುಳಿದಿದ್ದ ಏಕೈಕ ಪ್ರಯಾಣಿಕ ವಿಶ್ವಾಸ್ ಕುಮಾರ್ ರಮೇಶ್ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ.

ಹಾಸ್ಟೆಲ್‌ವೊಂದಕ್ಕೆ ವಿಮಾನ ಡಿಕ್ಕಿಯಾಗಿ ಅವಘಡ ಸಂಭವಿಸಿದಾಗ, ತುರ್ತು ನಿರ್ಗಮನ ಬಾಗಿಲು ತೆರೆದು ವಿಶ್ವಾಸ್ ಜಿಗಿದು ಬದುಕುಳಿದಿದ್ದರು. ಸಣ್ಣಪುಟ್ಟ ಗಾಯಗಳಿಂದ ಅಹಮದಾಬಾದ್‌ನ ಸಿವಿಲ್ ಆಸ್ಪತ್ರೆಗೆ ದಾಖಲಾಗಿದ್ದರು. ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಅನೇಕ ಗಣ್ಯರು ಗಾಯಾಳು ಆರೋಗ್ಯ ವಿಚಾರಿಸಿದ್ದರು.

ಚಿಕಿತ್ಸೆ ಬಳಿಕ ವಿಶ್ವಾಸ್ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆದರು. ನಂತರ ತನ್ನ ಸಹೋದರನ ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದರು. ತನ್ನ ಜೊತೆ ಪ್ರಯಾಣಿಸಿದ್ದ ಸಹೋದರ ವಿಮಾನ ಪತನದಲ್ಲಿ ಮೃತಪಟ್ಟಿದ್ದ.

ಜೂನ್ 12 ರಂದು ನಡೆದ ಏರ್ ಇಂಡಿಯಾ ವಿಮಾನ ಅಪಘಾತದಲ್ಲಿ ಬದುಕುಳಿದ ಏಕೈಕ ವ್ಯಕ್ತಿ 40 ವರ್ಷದ ಬ್ರಿಟಿಷ್ ಪ್ರಜೆ ವಿಶ್ವಾಸ್. ವಿಮಾನ ಅಪಘಾತದ ಸುದ್ದಿ ತಿಳಿದ ನಂತರ ವಿಶ್ವಾಸ್ ಅವರ ಕುಟುಂಬ ಯುಕೆಯಿಂದ ಆಗಮಿಸಿತು. ವಿಶ್ವಾಸ್ ಮತ್ತು ಅವರ ಸಹೋದರ ಇಬ್ಬರೂ ದಿಯು ಮೂಲದವರಾಗಿದ್ದು, ಕೇಂದ್ರಾಡಳಿತ ಪ್ರದೇಶದಲ್ಲಿ ತಮ್ಮ ಕುಟುಂಬದೊಂದಿಗೆ ಸಮಯ ಕಳೆಯಲು ಭಾರತಕ್ಕೆ ವಿಮಾನದಲ್ಲಿ ಬಂದಿದ್ದರು.

ಬುಧವಾರ ಬೆಳಗ್ಗೆ ಅಜಯ್ ಅವರ ಅಂತ್ಯಕ್ರಿಯೆಯನ್ನು ಕುಟುಂಬವು ದಿಯುನಲ್ಲಿ ನಡೆಸಿದೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ. ಡಿಎನ್‌ಎ ಮಾದರಿಯು ಅವರ ಗುರುತನ್ನು ದೃಢಪಡಿಸಿದ ನಂತರ ದೇಹವನ್ನು ಕುಟುಂಬಕ್ಕೆ ಹಸ್ತಾಂತರಿಸಲಾಗಿತ್ತು.

ಅಹಮದಾಬಾದ್‌ನ ಸರ್ದಾರ್ ವಲ್ಲಭಭಾಯಿ ಪಟೇಲ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಹೊರಟ ಕೆಲವೇ ನಿಮಿಷಗಳಲ್ಲಿ ಬೋಯಿಂಗ್ 787 ಡ್ರೀಮ್‌ಲೈನರ್ ಏರ್ ಇಂಡಿಯಾ ವಿಮಾನ 171 ಅಪಘಾತಕ್ಕೀಡಾಗಿದೆ. ದುರಂತದಲ್ಲಿ 270 ಮಂದಿ ಮೃತಪಟ್ಟಿದ್ದಾರೆ.

# ಲಕ್ಷ ರೂ. ಲಂಚ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಬಲೆಗೆ ಬಿದ್ದ ದ್ವಿತೀಯ ದರ್ಜೆ ಸಹಾಯಕ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.18:ಸಿ.ಸಿ ರೋಡ್ ಕಾಮಗಾರಿ ಮಾಡಿರುವುದರ ಅನುಮತಿ ಪತ್ರ ಕೊಡುವುದಕ್ಕಾಗಿ 1 ಲಕ್ಷ ರೂ. ಲಂಚ ಪಡೆಯುತ್ತಿದ್ದ ವೇಳೆ ದ್ವಿತೀಯ ದರ್ಜೆ ಸಹಾಯಕರೊಬ್ಬರು ಲೋಕಾಯುಕ್ತ ಬಲೆಗೆ ಬಿದ್ದಿರು ಘಟನೆ ಮಂಗಳವಾರ ಕಾಳಗಿ ತಹಶೀಲ್ದಾರ್ ಕಚೇರಿಯಲ್ಲಿ ನಡೆದಿದೆ.

ದ್ವಿತೀಯ ದರ್ಜೆ ಸಹಾಯಕ ಶರಣಪ್ಪ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿರುವ ಸಿಬ್ಬಂದಿ ಎಂದು ತಿಳಿದುಬಂದಿದೆ. ಶರಣಪ್ಪ ಅವರು, ಸಿಸಿ ರೋಡ್ ಕಾಮಗಾರಿ ಅನುಮತಿ ಪತ್ರ ಕೊಡುವುದಕ್ಕಾಗಿ ಗುತ್ತಿಗೆದಾರ ಅಣವೀರಯ್ಯ ಅವರ ಬಳಿ 1 ಲಕ್ಷ ರೂ. ಹಣ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಈ ಮಾಹಿತಿಯನ್ನು ಅಣವೀರಯ್ಯ ಅವರು ಲೋಕಾಯುಕ್ತ ಪೊಲೀಸರಿಗೆ ಮಾಹಿತಿ ನೀಡಿದ್ದರು. ಎಸ್.ಡಿ.ಎ ಸಿಬ್ಬಂದಿ ಶರಣಪ್ಪ ಲಂಚ ಪಡೆ

ಪಡೆಯುತ್ತಿದ್ದ ವೇಳೆಯೇ ಲೋಕಾಯುಕ್ತ ಪೊಲೀಸರ ಎದುರು ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ. ಲೋಕಾಯುಕ್ತ ಎಸ್ಪಿ ಬಿ.ಕೆ.ಉಮೇಶ್ ಮಾರ್ಗದರ್ಶನದಲ್ಲಿ ಡಿವೈಎಸ್ಪಿ ಗೀತಾ ಬೆನಾಳ, ಪೊಲೀಸ್ ಇ???ಸ್ಪೆಕ್ಟರ್ ರಾಜಶೇಖರ್, ಸಿಬ್ಬಂದಿಗಳಾದ ಬಸವರಾಜ್ ಎಂ.ಜಿ.ರಾಣುಜಿ, ಪ್ರದೀಪ್, ಫೈಮೋದಿನ್, ಸಂತೋಷಮ್ಮ, ಮಲ್ಲಿನಾಥ್, ಮಲ್ಲಿಕಾರ್ಜುನ್ ಅವರನ್ನು ಒಳಗೊಂಡ ತಂಡ ದಾಳಿ ನಡೆಸಿತ್ತು.

# ವಿಮಾನ ದುರಂತ: ಎಲ್ಲಾ ಆಯಾಮಗಳಲ್ಲಿ ತನಿಖೆ



ಮಲ್ಲಮ್ಮ ನುಡಿ ವಾರ್ತೆ

ಅಹಮದಾಬಾದ್:ಜೂ.18: ಜೂನ್ 12 ರಂದು ಸಂಭವಿಸಿದ ಏರ್ ಇಂಡಿಯಾದ ಎಐ–171 ವಿಮಾನ ಅಪಘಾತ ಕುರಿತು ಎಲ್ಲಾ ಆಯಾಮಗಳಲ್ಲಿ ಕೇಂದ್ರಿಯ ಭದ್ರತಾ ಏಜೆನ್ಸಿಗಳು ತನಿಖೆ ನಡೆಸುತ್ತಿವೆ.

ಅಹಮದಾಬಾದ್ ನ ಸರ್ದಾರ್ ವಲ್ಲಭಾಯಿ ಪಟೇಲ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ನಿರ್ವಹಣಾ ಸಿಬ್ಬಂದಿಯನ್ನು ವಿಚಾರಣೆ ನಡೆಸಿದ್ದು, ಫೋರೆನ್ಸಿಕ್ ವಿಶ್ಲೇಷಣೆಗಾಗಿ ಅವರ ಮೊಬೈಲ್ ಫೋನ್ ಗಳನ್ನು ವಶಕ್ಕೆ ಪಡೆದಿದ್ದಾರೆ. ವಿಮಾನ ಪೂರ್ವ ತಪಾಸಣೆ ಮತ್ತು ಗ್ರೌಂಡ್ ಆಪರೇಷನ್ ನಲ್ಲಿ ತೊಡಗಿದ್ದ ಎಲ್ಲಾ ಸಿಬ್ಬಂದಿಯನ್ನು ವಿಚಾರಣೆಗೆ ಒಳಪಡಿಸಲಾಗಿದ್ದು, ಅವರ ಹೇಳಿಕೆಗಳನ್ನು ಔಪಚಾರಿಕವಾಗಿ ದಾಖಲಿಸಲಾಗಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ಸುದ್ದಿ ಸಂಸ್ಥೆಗೆ ದೃಢಪಡಿಸಿದ್ದಾರೆ. ಯಾವುದೇ ಅನುಮಾನಾಸ್ಪದ ಚಟುವಟಿಕೆ ಅಥವಾ ಮಾತುಕತೆ ನಡೆದಿದ್ದೆಯೇ? ಎಂಬುದನ್ನು ಪರೀಕ್ಷಿಸಲು ವಿಮಾನ ಟೇಕಾಫ್ ಗೂ ಮುನ್ನಾ ಅದನ್ನು ನಿರ್ವಹಿಸಿದ ಸಿಬ್ಬಂದಿಯ ಫೋನ್‌ಗಳನ್ನು ವಶಕ್ಕೆ ಪಡೆಯಲಾಗಿದೆ. ತನಿಖೆ ಪ್ರಗತಿಯಲ್ಲಿದ್ದು, ಏಜೆನ್ಸಿಗಳು ವಿಮಾನ ನಿಲ್ದಾಣದ ಆವರಣದ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲನೆ ನಡೆಸಿದ್ದಾರೆ. ಯಾವುದೇ ವಿವರಗಳನ್ನು ಕಡೆಗಣಿಸುವುದಿಲ್ಲ ಎಂದು ಖಾತ್ರಿಪಡಿಸಲಾಗಿದೆ. ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆ–ಯುತ್ತಿದೆ. ಯಾವುದೇ ಊಹೆಗಳಿಗೆ ಅವಕಾಶವಿಲ್ಲದಂತೆ ಮಾನವ ದೋಷ, ತಾಂತ್ರಿಕ ವೈಫಲ್ಯ ಮತ್ತು ವಿಧ್ವಂಸಕತೆ ಸೇರಿದಂತೆ ಎಲ್ಲಾ ದಿಕ್ಕಿನಲ್ಲಿ ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ಸುದ್ದಿಸಂಸ್ಥೆಗೆ ತಿಳಿಸಿದರು. ಜೂನ್ 12 ರಂದು ಏರ್ ಇಂಡಿಯಾದ ಬೋಯಿಂಗ್ 787–8 ಡ್ರೀಮ್ ಲೈನರ್ ವಿಮಾನ ಎಐ–171 ಟೇಕಾಫ್ ಆದ ಕೆಲ ಸೆಕೆಂಡ್ ಗಳಲ್ಲಿ ಮಧ್ಯಾಹ್ನ 1–30ರ ವೇಳೆಯಲ್ಲಿ ಅಪಘಾತಕ್ಕೀಡಾಗಿತ್ತು. ಏರ್ ಟ್ರಾಫಿಕ್ ಕಂಟ್ರೋಲ್ ಗೆ 'ಮೇ ಡೇ' ಎಂದು ಪೈಲಟ್ ಕರೆ ನೀಡಿದ ತಕ್ಷಣವೇ ವಿಮಾನ ಕೆಳಗೆ ಬಿದ್ದಿತ್ತು. ಜೂನ್ 16 ರಂದು ಅಹಮದಾಬಾದ್ ಗೆ ಬಂದಿಳಿದ ಬೋಯಿಂಗ್ ನ ತಾಂತ್ರಿಕ ತಂಡವೊಂದು ತನಿಖೆ ತಂಡವನ್ನು ಸೇರಿಕೊಂಡಿದೆ. ಕಾಕ್‌ಪಿಟ್ ಧ್ವನಿ ರೆಕಾರ್ಡರ್ ಮತ್ತು ವಿಮಾನದ ಎರಡನೇ ಬ್ಲಾಕ್ ಬಾಕ್ಸ್ ನ್ನು ತನಿಖಾ ತಂಡಗಳು ವಶಕ್ಕೆ ಪಡೆದಿವೆ. ಕಳೆದ ಶುಕ್ರವಾರ ವಿಮಾನದ ಮೊದಲ ಬ್ಲಾಕ್ ಬಾಕ್ಸ್ ಪತ್ತೆಯಾಗಿತ್ತು. ಏರ್‌ಕ್ರಾಫ್ಟ್ ಆಕ್ಸಿಡೆ–ಂಟ್ ಇನ್ವೆಸ್ಟಿಗೇಷನ್ ಬ್ಯೂರೋ ನೇತೃತ್ವದಲ್ಲಿ ತನಿಖೆ ನಡೆಸಲಾಗುತ್ತಿದೆ.

# ಕಾರಾಗೃಹದ ಕೈದಿಗಳಿಗೆ ಯೋಗ ತರಬೇತಿ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.18:11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಪೂರ್ವಭಾವಿಯಾಗಿ ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ ಅಡಿಯಲ್ಲಿ ಬರುವ ಯೋಗ ಧನುಷ್ ಕಾರ್ಯಕ್ರಮದ ಪ್ರಯುಕ್ತ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಆಯುಷ್ ಇಲಾಖೆಯ ವತಿಯಿಂದ ಯೋಗ ತರಬೇತಿದಾರರಿಂದ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಬುಧವಾರ ಕಾರಾಗೃಹದ ಕೈದಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಯೋಗ ತರಬೇತಿ ನೀಡಲಾಯಿತು. ಈಸಂದರ್ಭದಲ್ಲಿ ಅನುಷ್ಠಾನಾಧಿಕಾರಿ ಡಾ.ಸಂಜಯ್ ಕುಲಕರ್ಣಿ, ವೈದ್ಯಾಧಿಕಾರಿ ಡಾ.ಸ್ಮಿತಾ ಅಂಬುರೆ ಹಾಗೂ ಯೋಗ ತರಬೇತಿದಾರ ಸುದೀಪ್ ಮಾಳಗಿ, ಶಶಿಕಲಾ ಹಾಗೂ ಸಂಸ್ಥೆಯ ಮುಖ್ಯಸ್ಥರಾದ ಡಾ॥ ಅನಿತಾ ಆರ್., ಅಧೀಕ್ಷಕ ಎಂ.ಹೆಚ್. ಆಶೇಖಾನ್, ಸಹಾಯಕ ಅಧೀಕ್ಷಕ ಚನ್ನಪ್ಪ, ಹಾಗೂ ಸಂಸ್ಥೆಯ ಜೈಲರ್‌ಗಳಾದ ಸುನಂದ ವಿ., ಸಾಗರ್ ಪಾಟೀಲ್, ಶ್ರೀ ಶ್ರೀಮಂತಗೌಡ ಹಾಗೂ ಶಿಕ್ಷಕ ನಾಗರಾಜ ಮೂಲಗೆ ಉಪಸ್ಥಿತರಿದ್ದರು.

# ಆಳಂದ ರಸ್ತೆ ಅಗಲೀಕರಣ: ಟೆಂಡರ್ ಕರೆಯುವಂತೆ ಡಿ.ಸಿ. ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.18 ಆಳಂದ ಪಟ್ಟಣದಲ್ಲಿ ಸುಗಮ ಸಂಚಾರ ನಿರ್ವಹಣೆ ದೃಷ್ಟಿಯಿಂದ ಕೂಡಲೆ ರಸ್ತೆ ಅಗಲೀಕರಣಕ್ಕೆ ಟೆಂಡರ್ ಕರೆಯುವಂತೆ ಮುಖ್ಯಾಧಿಕಾರಿ ಸಂಗಮೇಶ ಪನಶೆಟ್ಟಿ ಅವರಿಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಸೂಚನೆ ನೀಡಿದರು.

ಮಂಗಳವಾರ ಆಳಂದ ಪಟ್ಟಣ ಪ್ರವಾಸ ಕೈಗೊಂಡಿದ್ದ ಜಿಲ್ಲಾಧಿಕಾರಿಗಳು, ತಹಶೀಲ್ದಾರ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಹಾಗೂ ಸ್ಥಳೀಯ ಶಾಸಕ ಬಿ.ಆರ್.ಪಾಟೀಲ ಅವರ ಜೊತೆಗೆ ಪುರಸಭೆಯ ಪ್ರಗತಿ ಪರಿಶೀಲನೆ ನಡೆಸಿದ ಅವರು, ರಸ್ತೆ ಅಗಲೀಕರಣಕ್ಕೆ ಪುರಸಭೆಯಿಂದ 11 ಕೋಟಿ ರೂ. ಮೀಸಲಿರಿಸಿದ್ದು, ಅದನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. 15ನೇ ಹಣಕಾಸು ಮತ್ತು ಎಸ್.ಎಫ್.ಸಿ ಅನುದಾನದಲ್ಲಿ ಪಟ್ಟಣದಾದ್ಯಂತ ನಡೆಯುತ್ತಿರುವ ಕಾಮಗಾರಿಗಳಲ್ಲಿ ಗುಣಮಟ್ಟ ಕಾಪಾಡುವುದರ ಜೊತೆಗೆ ಕಾಲಮಿತಿ ಪೂರ್ಣಗೊಳಿಸಬೇಕೆಂದು ಪುರಸಭೆ ಅಧಿಕಾರಿಗಳಿಗೆ ತಾಕೀತು ಮಾಡಿದರು. ಇದಕ್ಕೂ ಮುನ್ನ ಆಳಂದ ಪುರಸಭೆಯ ಘನತ್ಯಾಜ್ಯ ವಸ್ತು ವಿಲೇವಾರಿ ಘಟಕಕ್ಕೆ ಭೇಟಿ ನೀಡಿದ ಡಿ.ಸಿ ಅವರು, ಅಲ್ಲಿ ತ್ಯಾಜ್ಯದಿಂದ ವೈಜ್ಞಾನಿಕವಾಗಿ ಸಾವಯುವ ರಸಗೊಬ್ಬರ ತಯಾರಿಕೆ ಪ್ರಕ್ರಿಯೆ ವೀಕ್ಷಿಸಿದರು. ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಹೊಸದಾಗಿ ಖರೀದಿಸಲಾದ ಟ್ರ್ಯಾಕ್ಟರ್, ಗೊಬ್ಬರ ತಯಾರಿಸುವ ಯಂತ್ರ, ಬೇಲಿಂಗ್ ಯಂತ್ರಕ್ಕೆ ಚಾಲನೆ ನೀಡಿದರು. ಇದಲ್ಲದೆ ಅಮೃತ 2.0 ಯೋಜನೆಯಡಿ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಪೈಪ್ ಲೈನ್ ಮತ್ತು ಓವರ್ ಹೆಡ್ ಟ್ಯಾಂಕ್ ಕಾಮಗಾರಿ ವೀಕ್ಷಿಸಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಲಬುರಗಿ ವಿಭಾಗದ ಇ.ಇ. ನರಸಿಂಹರೆಡ್ಡಿ ಅವರಿಂದ ಕಾಮಗಾರಿಯ ಮಾಹಿತಿ ಪಡೆದುಕೊಂಡರು. ಇನ್ನು ಇಂದಿರಾ ಕ್ಯಾಂಟೀನ್ ಕಾಮಗಾರಿ ಸ್ಥಳಕ್ಕೂ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಸಣ್ಣ–ಪುಟ್ಟ ಕೆಲಸಗಳನ್ನು ಕೂಡಲೆ ಮುಗಿಸಿ ಸಾರ್ವಜನಿಕರಿಗೆ ಸಮರ್ಪಿಸಬೇಕು ಎಂದರು. ತ್ರಿಕಚಕ್ರ ವಾಹನ ವಿತರಣೆ:

ಇದೇ ಸಂದರ್ಭದಲ್ಲಿ ಆಳಂದ ಪುರಸಭೆ

ಕಾರ್ಯಾಲಯದಲ್ಲಿ 2020–21 ರಿಂದ 2024–25ನೇ ಸಾಲಿನವರೆಗಿನ ಎಸ್.ಎಫ್.ಸಿ. ಶೇ.5ರ ಅನುದಾನದಡಿ ಏಳು ಜನ ವಿಶೇಷಚೇತನರಿಗೆ ಶಾಸಕ ಬಿ.ಆರ್.ಪಾಟೀಲ ಅವರಿಂದ ತ್ರಿಚಕ್ರ ವಾಹನ ವಿತರಣೆ ಸಮಾರಂಭದಲ್ಲಿ ಭಾಗಿಯಾದರು.

ಆಳಂದ ತಹಶೀಲ್ದಾರ ಅಣ್ಣಾರಾಯ ಪಾಟೀಲ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮುನಾವರ ದೌಲಾ, ಪುರಸಭೆ ಅಧ್ಯಕ್ಷ ಫಿರ್ದೋಶ್ ಅನ್ಸಾರಿ ಗೌಡ, ಉಪಾಧ್ಯಕ್ಷೆ ಕವಿತಾ ಸಂಜು ನಾಯಕ್, ಲೋಕೋಪಯೋಗಿ ಇಲಾಖೆಯ ಎ.ಇ.ಇ. ಆನಂದ ಸೇರಿದಂತೆ ಇತರೆ ತಾಲೂಕಾ ಹಂತದ ಅಧಿಕಾರಿಗಳಿದ್ದರು.

# ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಿಂದ ಸಮಾಜದಲ್ಲಿ ಶಾಂತಿ, ಸಾಮರಸ್ಯ ಗಟ್ಟಿ: ರಂಭಾಪುರಿ ಜಗದ್ಗುರುಗಳು



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜೂ.18:ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಿಂದ ಸಮಾಜದಲ್ಲಿ ಶಾಂತಿ ಹಾಗೂ ಸಾಮರಸ್ಯ ಗಟ್ಟಿಗೊಳ್ಳಲಿದೆ ಎಂದು ಪರಮ ಪೂಜ್ಯ ಶ್ರೀ ರಂಭಾಪುರಿ ಜಗದ್ಗುರುಗಳು ತಿಳಿಸಿದರು.

ಜಿಲ್ಲೆಯ ಬಸವಕಲ್ಯಾಣ ನಗರದ ಬಸವಕಲ್ಯಾಣ ಅಭಿವೃದ್ಧಿ ಪ್ರಾಧಿಕಾರದ ಸಭಾಂಗಣದಲ್ಲಿ ಸೆ.22ರಿಂದ ಅ..2ರ ವರೆಗೆ ಬಸವಕಲ್ಯಾಣದಲ್ಲಿ ಜರುಗಲಿರುವ ಶರನ್ನವರಾತ್ರಿ 34ನೇ ದಸರಾ ಧರ್ಮ ಸಮ್ಮೇಳನದ ದ್ವಿತೀಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇಂದು ಧರ್ಮ, ಧರ್ಮಗಳ ಹಾಗೂ ಜಾತಿ, ಜಾತಿಗಳ ನಡುವೆ ಕಲಹ ಉಲ್ಬಣಗೊಂಡಿವೆ. ಸಮಾಜದಲ್ಲಿನ ಸೌಹಾರ್ದತೆ ಹಾಗೂ ಭಾತೃತ್ವ ಭಾವನೆ ಅಳಿವಿನ ಅಂಚಿನಲ್ಲಿದೆ. ವಿನಾಶದ ಅಂಚಿಗೆ ಜಾರುತ್ತಿರುವ ಶಾಂತಿ, ಸೌಹಾರ್ದತೆ, ಸಹಬಾಳ್ವೆ, ಸದಾಚಾರ, ಸಂಸ್ಕಾರ, ಸಂಪ್ರದಾಯ, ಸಮೃದ್ಧಿ ಬಲಗೊಳ್ಳಬೇಕಾದರೆ ಈ ಧರ್ಮ ಸಮ್ಮೇಳನದ ಅಗತ್ಯವಿದೆ ಎಂದು ಪುನರೂಚ್ಚರಿಸಿದರು.

1992ರಲ್ಲಿ ವಿಜಯಪುರ ಜಿಲ್ಲೆಯ ನಿಡಗುಂದಿಯಲ್ಲಿ ಪ್ರಥಮ ದಸರಾ ದರ್ಬಾರ ಜರುಗಿದ್ದು, ಕಳೆದ ವರ್ಷ 33ನೇ ದಸರಾ ದರ್ಬಾರ ಗದಗ ಜಿಲ್ಲೆಯ ರೋಣ ತಾಲೂಕಿನ ಅಬ್ಬಿಗೆರೆ ಗ್ರಾಮದಲ್ಲಿ ಜರುಗಿತು. ಆ ಸಮಯದಲ್ಲಿ ಅಲ್ಲಿಗೆ ಆಗಮಿಸಿದ ಬಸವಕಲ್ಯಾಣ ಶಾಸಕ ಶರಣು ಸಲಗಾರ ಹಾಗೂ ಜಗದ್ಗುರುಗಳ ಬಳಗ 34ನೇ ದಸರಾ ದರ್ಬಾರ್ ಬಸವಕಲ್ಯಾಣದಲ್ಲಿ ಮಾಡುವುದಾಗಿ ಕೇಳಿಕೊಂಡಿದ್ದರು ಅದಕ್ಕೆ ಜಗದ್ಗುರುಗಳು ಒಪ್ಪಿಗೆ ಸೂಚಿಸಿ ಈ ವರ್ಷ 34ನೇ ದಸರಾ ದರ್ಬಾರ್ ಬಸವಣ್ಣನವರ ಕರ್ಮ ಭೂಮಿ ಬಸವಕಲ್ಯಾಣದಲ್ಲಿ ಜರುಗುತ್ತಿರುವುದು ಜಗದ್ಗುರುಗಳಿಗೆ ಹಂಡೆ ಹಾಲು ಕುಡಿದಷ್ಟು ಸಂತೋಷವಾಗಿದೆ. ಕಳೆದ ಒಂದು ವರೆ ತಿಂಗಳ ಹಿಂದಷ್ಟೇ ಹಾರಕೂಡ ಶ್ರೀಮಠದಲ್ಲಿ ದಸರಾ ದರ್ಬಾರ್ ನ ಮೊದಲನೇ ಪೂರ್ವಭಾವಿ ಸಭೆ ಜರುಗಿದ್ದು, ಆ ಸಮಯದಲ್ಲಿ ಹರಕುಡ ಶ್ರೀಗಳ ಶಿಷ್ಯವೃಂದದವರಿಂದ ಅರ್ಧ ಕೋಟಿಗೂ ಅಧಿಕ ಹಣ ಸಂಗ್ರಹಣೆ ಮಾಡಿರುವುದು ಬಹಳ ಸಂತೋಷದ ವಿಷಯ. ಇಂದು ಎರಡನೇ ಸಭೆ ಜರುಗುತ್ತಿದ್ದು ಇದು ಸಮಾಜದಲ್ಲಿ ಒಂದು ವಿಶಿಷ್ಟತೆ ಹಾಗೂ ಐಕ್ಯತೆ ಭಾವನೆ ಬೇರೂರಲು ಇದು ಸಹಕಾರಿಯಾಗಲಿದೆ ಎಂದರು.

8ನೇ ಶತಮಾನದಲ್ಲಿ ತ್ರಿಪುರ ಅಂತ ಕೆರೆ ನಿರ್ಮಿಸಿದವರು ಪರಮಪೂಜ್ಯ ರೇವಣಸಿದ್ದ ಜಗದ್ಗುರುಗಳು, ಈ ಪರಿಸರದಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬಂದವರು ಪೂಜ್ಯರುದ್ರಮಣಿ ಜಗದ್ಗುರುಗಳು ಅವರ ಜೀವಂತ ಸಮಾಧಿ ತ್ರಿಪುರಾಂತ ಗವಿಮಠದಲ್ಲಿದೆ. ಗವಿಮಠದ ಬಗ್ಗೆ ಅಪಪ್ರಚಾರ ಮಾಡುವುದಾಗಲಿ ಅಥವಾ ಹೀಯಾಳಿಸುವುದಾಗಲಿ ಮಾಡಿದರೆ ಅಂಥವರ ಪಾಲಿಗೆ ಕೆಟ್ಟ ಘಳಿಗೆ. ಇಲ್ಲಿಯ ಬಸವೇಶ್ವರ ದೇವಸ್ಥಾನದಲ್ಲಿ ಬಸವಣ್ಣನವರ ಮೂರ್ತಿ ಅನಾವರಣವನ್ನು ರಂಭಾಪುರಿ ಜಗದ್ಗುರುಗಳು ಮಾಡಿರುವುದು ಬಹಳ ಸಂತಸದ ವಿಷಯ ಬಸವಣ್ಣನವರ ಬಗ್ಗೆ ಬಹಳಷ್ಟು ಹೇಳಿಕೊಳ್ಳುವವರು ಆ ಸಮಯದಲ್ಲಿ ಯಾರು ಬಂದಿರಲಿಲ್ಲ. ಸ್ವತಃ ರಂಭಾಪುರಿ ಜಗದ್ಗುರುಗಳು ಬಂದು ಬಸವಣ್ಣನವರ ಮೂರ್ತಿ ಅನಾವರಣ ಮಾಡಿರುವುದು ಸಮಾಜಕ್ಕೆ ಒಂದು ಹೊಸ ಸಂದೇಶ ನೀಡಿದೆ ಎಂದು ಮಾಜಿ ಮಂತ್ರಿಗಳು ಶತಾಯುಷಿಗಳಾದ ಡಾ.ಭೀಮಣ್ಣ ಖಂಡ್ರೆ ಅವರು ಹೇಳಿದ್ದರು. ಬಸವಣ್ಣನವರು ಅನುಭವ ಮಂಟಪದಲ್ಲಿ ಸರ್ವ ಸಮುದಾಯವನ್ನು ಗೌರವಿಸಿದ ಹಾಗೆ ಅದಕ್ಕೂ ಪೂರ್ವದಲ್ಲಿ ಜಗದಾದಿ ಜಗದ್ಗುರು ರೇಣುಕಾಚಾರ್ಯರು 18 ಜಾತಿ ಪಂಗಡದವರಿಗೆ ಲಿಂಗ ದೀಕ್ಷೆ ನೀಡಿ ಆ ಕಾಲದಲ್ಲಿಯೇ ವೀರಶೈವ ಪರಂಪರೆಗೆ ಭದ್ರ ಬುನಾದಿ ಹಾಕಿದರು ಎಂದರು.

ಮೇ 22 ರಿಂದ ಆ ಎರಡರವರೆಗೆ ನಡೆಯಲಿರುವ ಈ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ ಜಗದ್ಗುರುಗಳು 10 ದಿವಸ ವಿಶಿಷ್ಟ ಪೋಷಕದಲ್ಲಿ ವಿಭಿನ್ನವಾಗಿ ಕಾಣುವರು. ಹಾಗೆ ಬೆಳಿಗ್ಗೆಯಿಂದ ನಿರಂತರವಾಗಿ ವೇದ ಘೋಷದೊಂದಿಗೆ ಆರಂಭವಾಗುವ ಬೆಳಗಿನ ಕಾರ್ಯಕ್ರಮವು ಇಷ್ಟಲಿಂಗ ಪೂಜಾ ಅನುಷ್ಠಾನ, ಧರ್ಮ ಸಮ್ಮೇಳನ ಇತರೆ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿದ್ದು ಈ ಭಾಗದಲ್ಲಿ ಒಂದು ಹೊಸ ಆಯಾಮವನ್ನು ಈ ಸಮ್ಮೇಳನದಿಂದ ನಿರ್ಮಿಸಲಿದೆ ಎಂದು ಜಗದ್ಗುರುಗಳು ಪ್ರತಿಪಾದಿಸಿದರು.

ಹಾರಕೂಡದ ಪೂಜ್ಯ ಡಾ ಚನ್ನವೀರ ಶಿವಾಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿ, ಬಸವಕಲ್ಯಾಣ ಇದು ಸನಾತನ ಸಂಸ್ಕೃತಿ ಜೊತೆಗೆ ಧಾರ್ಮಿಕ, ವೈಚಾರಿಕ, ಸೈದ್ಧಾಂತಿಕ ಹಾಗೂ ಸಹಿಷ್ಣುತಾ ಭಾವವುಳ್ಳ ನೆಲೆಯಾಗಿದೆ. ಈ ನೆಲೆಯಲ್ಲಿ ರಂಭಾಪುರಿ ಜಗದ್ಗುರುಗಳವರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನ ಜರುಗುವ ಮೂಲಕ ಬಸವ ಪರಂಪರೆ ಹಾಗೂ ಸನಾತನ ಸಂಸ್ಕೃತಿ ಎರಡು ಸಮ್ಮಿಲನಗೊಂಡು ಭಾರತೀಯ ಸಂಸ್ಕೃತಿ ಹಾಗೂ ಪರಂಪರೆಗೆ ಒಂದು ಹೊಸ ಕಳೆ ಬರಲಿದೆ ಎಂಬ ಆಶಾಭಾವ ನಮ್ಮಲ್ಲಿದೆ ಎಂದು ತಿಳಿಸಿದರು.

ಮೇಕಕರ್, ತಡೋಳಾ ಹಾಗೂ ಡುಣಗಾಪುರದ ಪೂಜ್ಯ ರಾಜೇಶ್ವರ ಶಿವಾಚಾರ್ಯರು, ತ್ರಿಪುರಾಂತ ಗವಿಮಠದ ಪೂಜ್ಯ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಹಾಗೂ ಶ್ರೀನಿವಾಸ ಸರಡಗಿಯ ಪೂಜ್ಯ ರೇವಣಸಿದ್ದೇಶ್ವರ ಸ್ವಾಮಿಗಳು ಮಾತನಾಡಿದರು.

ಹುಡುಗಿಯ ಪೂಜ್ಯ ವಿರುಪಾಕ್ಷ ಶಿವಾಚಾರ್ಯರು, ಮುಚಳಂಬ ಶ್ರೀಗಳು, ಗಡಿಗೌಡಗಾಂವ ಶ್ರೀಗಳು, ಎಡ್ಲಾಪುರ ಶ್ರೀಗಳು ಕಲ್ಲೂರು ಶ್ರೀಗಳು, ಮುಡುಬಿಯ ಚಂದ್ರಶೇಖರ ಪಾಟೀಲ್, ರಾಜಕುಮಾರ ಸಿರಗಾಪುರ, ಕಲಬುರ್ಗಿಯ ಶಿವಶರಣಪ್ಪ ಸೀರಿ, ಬೀದರ್ ನ ರವೀಂದ್ರ ಸ್ವಾಮಿ ಸೇರಿದಂತೆ ಹಲವರು ಸಭೆಯಲ್ಲಿ ಉಪಸ್ಥಿತರಿದ್ದರು.

ಬಸವಕಲ್ಯಾಣ ಶಾಸಕ ಶರಣು ಸಲ್ಗರ್ ಸರ್ವರನ್ನು ಸ್ವಾಗತಿಸಿದರು.

# ಬೆಳೆ ವಿಮೆ ನೋಂದಣಿಗೆ ಜು. 31 ಕೊನೆಯ ದಿನ:ಬಿ.ಫೌಜಿಯಾ ತರನ್ನುಮ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.18: ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಬೆಳೆದಿರುವ ಬೆಳೆಗಳಾದ ತೊಗರಿ, ಹೆಸರು, ಉದ್ದು, ಹತ್ತಿ, ಸೋಯಾ ಹಾಗೂ ಇತರೆ ಎಲ್ಲಾ ಬೆಳೆಗಳಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ವಿಮೆ ಮಾಡಿಸಲು ಬರುವ ಜುಲೈ 31 ಕೊನೆ ದಿನವಾಗಿದ್ದು, ಜಿಲ್ಲೆಯ ರೈತ ಬಾಂಧವರು ನಿಗಧಿತ ಅವಧಿಯಲ್ಲಿ ನೊಂದಣಿ ಮಾಡಿಕೊಳ್ಳುವ ಮೂಲಕ ಲಾಭ ಪಡೆಯುವಂತೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮನವಿ ಮಾಡಿದ್ದಾರೆ.

ಕಲಬುರಗಿ ಜಿಲ್ಲೆಯಲ್ಲಿ ಶೇ.90ರಷ್ಟು ಪ್ರದೇಶ ಮಳೆಯಾಶ್ರಿತವಾಗಿರುವುದರಿಂದ ಅತೀವೃಷ್ಟಿ ಹಾಗೂ ಅನಾವೃಷ್ಟಿಗೆ ಸತತವಾಗಿ ಬೆಳೆಗಳು ತುತ್ತಾಗುವ ಸಾಧ್ಯತೆ ಇರುತ್ತದೆ. ಬಿತ್ತನೆ ಪೂರ್ವದಿಂದ ಕೊಯ್ಲಿನ ನಂತರದ ವರೆಗೆ ಅನಿರೀಕ್ಷಿತ ನೈಸರ್ಗಿಕ ವಿಕೋಪಗಳಿಂದಾಗಿ, ಅತೀವೃಷ್ಟಿ, ಅನಾವೃಷ್ಟಿ, ಅಕಾಲಿಕ ಮಳೆಯಂತಹ ಪ್ರಕೃತಿ ವಿಕೋಪಗಳಿಂದ ಯಾವುದೇ ಹಂತದಲ್ಲಿ ಬೆಳೆ ನಾಶವಾಗಬಹುದು. ಇಂತಹ ಬೆಳೆ ನಷ್ಟದಿಂದ ರೈತರನ್ನು ರಕ್ಷಿಸಲು ಸೂಕ್ತ ಪರಿಹಾರ ಪಡೆಯುವ ನಿಟ್ಟಿನಲ್ಲಿ ರೈತ ಭಾಂದವರು ಬಿತ್ತಿದ ಬೆಳೆಯ ಕ್ಷೇತ್ರವನ್ನು ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ವ್ಯಾಪ್ತಿಗೆ ನೊಂದಾಯಿಸುವುದು ಅವಶ್ಯಕವಾಗಿದೆ ಎಂದಿದ್ದಾರೆ.

ಕಲಬುರಗಿ ಜಿಲ್ಲೆಯಲ್ಲಿ ಕಳೆದ 5 ವರ್ಷಗಳಲ್ಲಿ 6.64 ಲಕ್ಷ ರೈತರು ಬೆಳೆ ವಿಮೆ ನೊಂದಣಿ ಮಾಡಿ 70.80 ಕೋಟಿ ರೂ. ತಮ್ಮ ವಂತಿಕೆ ಪಾವತಿಸಿದ್ದರು. ಪರಿಣಾಮ ಬೆಳೆ ನಾಶದಿಂದ ಬೆಳೆ ವಿಮೆ ಯೋಜನೆಯಡಿ 1,035.33 ಕೋಟಿ ರೂ. ಪರಿಹಾರ ಧನ ಪಡೆದಿರುತ್ತಾರೆ. ಇಂತಹ ಸುವರ್ಣಾವಕಾಶವನ್ನು ರೈತರು ಸದುಪಯೋಗ ಪಡೆದುಕೊಳ್ಳುವಂತೆ ಕೋರಿರುವ ಡಿ.ಸಿ. ಅವರು, ರೈತರು ತಮ್ಮ ಹತ್ತಿರದ ಗ್ರಾಮ್–ಒನ್, ಸಿ.ಎಸ್.ಸಿ ಕೇಂದ್ರ, ಬ್ಯಾಂಕ್ ಅಥವಾ ಪೋಸ್ಟ್ ಆಫೀಸ್‌ಗಳಲ್ಲಿ ನೋಂದಣಿ ಮಾಡಿಸಿಕೊಳ್ಳಬೇಕೆಂದು ತಿಳಿಸಿದ್ದಾರೆ.

ಬೆಳೆವಾರು ರೈತರು ಪಾವತಿಸಬೇಕಾದ ವಂತಿಕೆ ಮೊತ್ತ: ಹೆಸರು (ಮಳೆಆಶ್ರಿತ) ಪ್ರತಿ ಎಕರೆಗೆ 269.13 ರೂ., ಉದ್ದು (ಮಳೆಆಶ್ರಿತ) ಪ್ರತಿ ಎಕರೆಗೆ 265.08 ರೂ., ತೊಗರಿ (ಮಳೆಆಶ್ರಿತ) ಪ್ರತಿ ಎಕರೆಗೆ 388.51 ರೂ., ತೊಗರಿ (ನೀರಾವರಿ) ಪ್ರತಿ ಎಕರೆಗೆ 406.72 ರೂ., ಹತ್ತಿ (ಮಳೆಆಶ್ರಿತ) ಪ್ರತಿ ಎಕರೆಗೆ 865.75 ರೂ., ಹತ್ತಿ (ನೀರಾವರಿ) ಪ್ರತಿ ಎಕರೆಗೆ 1,492.33 ರೂ., ಸೋಯಾ ಅವರೆ (ಮಳೆಆಶ್ರಿತ) ಪ್ರತಿ ಎಕರೆಗೆ 331.85 ರೂ., ಮುಸುಕಿನ ಜೋಳ (ಮಳೆಆಶ್ರಿತ) ಪ್ರತಿ ಎಕ–ರೆಗೆ 457.31 ರೂ., ಮುಸುಕಿನ ಜೋಳ (ನೀರಾವರಿ) ಪ್ರತಿ ಎಕರೆಗೆ 522.06 ರೂ., ಜೋಳ (ಮಳೆ ಆಶ್ರಿತ) ಪ್ರತಿ ಎಕರೆಗೆ 317.82 ರೂ., ಎಳ್ಳು (ಮಳೆ ಆಶ್ರಿತ) ಪ್ರತಿ ಎಕರೆಗೆ 238.88 ರೂ., ನೆಲಗಡಲೆ (ಶೇಂಗಾ) (ಮಳೆ ಆಶ್ರಿತ) ಪ್ರತಿ ಎಕರೆಗೆ 452.84 ರೂ. ಗಳನ್ನು ರೈತರು ತಮ್ಮ ವಂತಿಕೆ ಮೊತ್ತ ಪಾವತಿಸಿ ಜುಲೈ 31 ರೊಳಗೆ ನೋಂದಣಿ ಮಾಡಿಕೊಳ್ಳಬೇಕು. ಅದೇ ರೀತಿ ಸೂರ್ಯಕಾಂತಿ (ಮಳೆ ಆಶ್ರಿತ) ಪ್ರತಿ ಎಕರೆಗೆ 329.83 ರೂ. ಹಾಗೂ ಭತ್ತ (ನೀರಾವರಿ) ಪ್ರತಿ ಎಕರೆಗೆ 754.77 ರೂ. ವಂತಿಕೆ ಪಾವತಿಸಿ ಆಗಸ್ಟ್ 16 ರೊಳಗೆ ನೋಂದಣಿ ಮಾಡಿಕೊಳ್ಳಬಹುದಾಗಿದೆ.

# ಇರಾನ್ ನಲ್ಲಿ ನೆಲೆಸಿರುವ ಭಾರತೀಯರನ್ನು ಕರೆತರಲು ಅಗತ್ಯ ಕ್ರಮ: ಡಾ.ಆರತಿ ಕೃಷ್ಣ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಜೂ.18:ಇಸ್ರೇಲ್ ಮತ್ತು ಇರಾನ್ ನಡುವೆ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದ್ದು, ಇರಾನ್‌ನಲ್ಲಿ ನೆಲೆಸಿರುವ ಭಾರತೀಯರನ್ನು ಕರೆತರಲು ಅಗತ್ಯ ಕ್ರಮವಹಿಸಲಾಗುತ್ತಿದೆ ಎಂದು ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರಾದ ಡಾ. ಆರತಿ ಕೃಷ್ಣ ಅವರು ತಿಳಿಸಿದ್ದಾರೆ.

ಇಸ್ರೇಲ್ ಮತ್ತು ಇರಾನ್ ನಡುವೆ ನಿರ್ಮಾಣವಾಗಿರುವ ಉದ್ವಿಗ್ನ ಪರಿಸ್ಥಿತಿಯು ಆ ದೇಶಗಳಲ್ಲಿ ನೆಲೆಸಿರುವ ಅನಿವಾಸಿ ಭಾರತೀಯರಿಗೆ ಆತಂಕ ಉಂಟು ಮಾಡಿದೆ. ಲಭ್ಯವಿರುವ ಮಾಹಿತಿ ಪ್ರಕಾರ ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳ ಪೈಕಿ ಬೆಂಗಳೂರು ಜಿಲ್ಲೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕು ಆಲಿಪುರ ಗ್ರಾಮದ ಹೆಚ್ಚಿನ ವಿದ್ಯಾರ್ಥಿಗಳು ಹಾಗೂ ಇತರರು ಇರಾನ್ ದೇಶದ ರಾಜದಾನಿಯಾದ ತೆಹರಾನ್ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿರುವ ಶಿಕ್ಷಣಾ ಸಂಸ್ಥೆಗಳಲ್ಲಿ ವಿದ್ಯಾಭ್ಯಾಸಕ್ಕಾಗಿ, ಧಾರ್ಮಿಕ ಅಧ್ಯಯನ, ಉದ್ಯೋಗ ಹಾಗೂ ಪ್ರವಾಸಕ್ಕಾಗಿ ತೆರಳಿರುತ್ತಾರೆ. ಇದಲ್ಲದೇ ಅನೇಕ ಜನರು ಇರಾನ್ ದೇಶದ ಪ್ರವಾಸಕ್ಕಾಗಿ ತೆರಳಿರುವ ಮಾಹಿತಿ ಲಭ್ಯವಾಗಿದೆ. ಸದರಿ ಅನಿವಾಸಿ ಭಾರತೀಯರ ಪೊ?ಷಕರು ಕೂಡ ಆತಂಕಗೊಂಡಿದ್ದು ಈ ಕಛೇರಿಗೆ ದೂರವಾಣಿ ಮುಖೇನ ಅವರ ಮಕ್ಕಳ ಹಾಗೂ ಸಂಬಂಧಿಕರ ಪ್ರಸ್ತುತ ಪರಿಸ್ಥಿತಿಯ ಬಗ್ಗೆ, ಮಾಹಿತಿಯನ್ನು ನೀಡುತ್ತಿದ್ದಾರೆ. ಈಗಾಗಲೇ, ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರಾದ ಡಾ. ಆರತಿ ಕೃಷ್ಣ ರವರು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹಾಗೂ ಇರಾನ್ ದೇಶದಲ್ಲಿರುವ ಭಾರತೀಯ ರಾಯಭಾರ ಕಛೇರಿಗೆ ಪತ್ರಬರೆದು ಇರಾ???ನಲ್ಲಿ ನೆಲೆಸಿರುವ ವಿದ್ಯಾರ್ಥಿಗಳನ್ನು ಕೂಡಲೇ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ಹಾಗೂ ಭಾರತ ದೇಶಕ್ಕೆ ವಾಪಸ್ ಕರೆತರಲು ಕ್ರಮಗಳನ್ನು ಕೈಗೊಳ್ಳುವಂತೆ ಕೋರಿರುತ್ತಾರೆ. ವಿದೇಶಾಂಗ ವ್ಯವಹಾರ ಸಚಿವಾಲಯವು ಇರಾನ್ ನಲ್ಲಿ ನೆಲೆಸಿರುವ ಭಾರತೀಯರಿಗೆ ಸಂಬಂಧಿಸಿದ ಮಾಹಿತಿಯನ್ನು ಎಲ್ಲಾ ಮೂಲಗಳಿಂದ ಸಂಗ್ರಹಿಸುತ್ತಿದ್ದು ಪ್ರಸ್ತುತ 5,000ಕ್ಕೂ ಹೆಚ್ಚು ಅನಿವಾಸಿ ಭಾರತೀಯರನ್ನು ಸಮೀಪದಲ್ಲಿರುವ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಿದೆ. ಯುದ್ಧ ಪರಿಸ್ಥಿತಿಯು ಇನ್ನೂ ಹೆಚ್ಚು ತೀಕ್ಷ್ಣಗೊಂಡಲ್ಲಿ ಈ ಜನರನ್ನು ಸಮೀಪದ ರಾಷ್ಟ್ರಗಳ ಗಡಿ ಮೂಲಕ ಸ್ಥಳಾಂತರಿಸಿ ಆಯಾ ದೇಶಗಳಿಂದ ಭಾರತಕ್ಕೆ ವಾಪಸ್ಸು ಕರೆ ತರುವ ಯೋಜನೆಯನ್ನು ಜಾರಿಗೊಳಿಸಲಿದೆ.

ಇಸ್ರೇಲ್ ದೇಶದಲ್ಲಿ ನೆಲೆಸಿರುವ ಕರ್ನಾಟಕ ಮೂಲದ ಅನಿವಾಸಿ ಭಾರತೀಯರ ಮಾಹಿತಿಯನ್ನು ಕೂಡ ಕಲೆಹಾಕುತ್ತಿದ್ದು ಅವರುಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸುವ ಹಾಗೂ ವಾಪಸ್ ಕರೆತರುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹಾಗೂ ಇಸ್ರೇಲ್ ದೇಶದಲ್ಲಿರುವ ಭಾರತೀಯ ರಾಯಭಾರ ಕಛೇರಿಗೆ ಪತ್ರ ಬರೆಯಲಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.